19 November 2025 Wednesday SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಕಷ್ಟಗಳು ವ್ಯಕ್ತಿಯನ್ನು ಗಟ್ಟಿಗೊಳಿಸಲು ಬರುವವು! ಹೀಗಾಗಿ ಕಷ್ಟಗಳಿಗೆ ಮಾನಸಿಕ ಯಾತನೆ ಪಡದೆ ಧೈರ್ಯದಿಂದ ಎದುರಿಸಲು ಕಲಿಯಬೇಕು!

ಸ್ನೇಹಾ ಆನಂದ್

**ಒಂದೊಳ್ಳೆ ಮಾತು**

"ಕಷ್ಟದ ಬೆಲೆ ಗೊತ್ತಿರುವವರು ಯಾರಿಗೂ ಕಷ್ಟ ಕೊಡುವುದಿಲ್ಲ "ಇಷ್ಟದ ಬೆಲೆ ಗೊತ್ತಿರುವವರು ಯಾರನ್ನೂ ದೂರ ಮಾಡಿಕೊಳ್ಳುವುದಿಲ್ಲ "

ಮೈಲಾರ ಸಾವಿತ್ರಿಬಾಯಿ

info.varthaman@gmail.com

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 36 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## 'ಆಪರೇಷನ್ ಗಜೇಂದ್ರ' ಯಶಸ್ವಿ

### ಶಿವನಸಮುದ್ರ ನಾಲೆಗೆ ಬಿದ್ದಿದ್ದ ಕಾಡಾನೆ ಮರಿ ರಕ್ಷಣೆ

**ಮೈಸೂರು:** ಶಿವನಸಮುದ್ರ ಸಮೀಪದ ನಾಲೆಗೆ ಬಿದ್ದು ಎರಡು ದಿನಗಳಿಂದ ಮೇಲಕ್ಕೆ ಬರಲಾರದೆ ಕಂಗೆಟ್ಟಿದ್ದ ಕಾಡಾನೆ ಮರಿಯನ್ನು ಅರಣ್ಯ ಇಲಾಖೆ ಸಿಬ್ಬಂದಿ ಯಶಸ್ವಿಯಾಗಿ ಮೇಲಕ್ಕೆತ್ತಿದ್ದಾರೆ.

ಕಾಲುವೆಯಲ್ಲಿ ನೀರಿನ ಹರಿವಿನ ರಭಸ ಹೆಚ್ಚಾಗಿದ್ದರಿಂದ ಮತ್ತೆ ವಾಪಸ್ ಬರಲು ಸಾಧ್ಯವಾಗದೇ ಆನೆ ಮರಿ ಒದ್ದಾಟ ನಡೆಸಿತ್ತು. ಜೊತೆಗೆ ಸತತವಾಗಿ ನೀರಿನಲ್ಲಿ ನಿಂತಿದ್ದ ಕಾರಣ ಆನೆ ಸೊಂಡಿಲಿನ ತುದಿ ಹಾಗೂ ಕಾಲುಗಳು ಬಿಳಿ ಬಣ್ಣಕ್ಕೆ ತಿರುಗಿದ್ದವು. ಆನೆ ಅಪಾಯದಲ್ಲಿರುವುದನ್ನು ಮನಗಂಡ ಅರಣ್ಯ ಇಲಾಖೆ ಸಿಬ್ಬಂದಿ ಕ್ರೇನ್ ಕಾರ್ಯಾಚರಣೆ ಮೂಲಕ ಆನೆಯನ್ನು ಕಾಲುವೆಯಿಂದ ಮೇಲಕ್ಕೆ ಎತ್ತಿತಂದಿದ್ದಾರೆ.

ಕಳೆದ ಎರಡು ದಿನಗಳ ಹಿಂದೆ ಶಿವನಸಮುದ್ರ ಬಳಿಯ ಖಾಸಗಿ ವಿದ್ಯುತ್ ಉತ್ಪಾದನಾ ಘಟಕದ ಬಳಿ ಆನೆ ಓಡಾಡುವುದನ್ನು ಅಲ್ಲಿನ ಅಧಿಕಾರಿಗಳು ಗಮನಿಸಿದ್ದರು. ಶನಿವಾರ ರಾತ್ರಿ ಖಾಸಗಿ ವಿದ್ಯುತ್ ಉತ್ಪಾದನಾ ಕೇಂದ್ರಕ್ಕೆ ನೀರು ಪೂರೈಸುವ ಸುಮಾರು 20 ಅಡಿ ಆಳದ ಕೆನಲ್ ಗೇಟ್ ಮೂಲಕ ಕಾಡಾನೆ ನಾಲೆಗೆ ಇಳಿದಿದೆ. ಆದರೆ ನೀರಿನ ಹರಿವಿನ ರಭಸ ಹೆಚ್ಚಾಗಿದ್ದರಿಂದ ಮತ್ತೆ ಮರಳಿ ವಾಪಸ್ ಬರಲು ಸಾಧ್ಯವಾಗದೇ ಒದ್ದಾಟ ನಡೆಸಿತ್ತು. ಜೊತೆಗೆ





ಸತತವಾಗಿ ನೀರಿನಲ್ಲಿದ್ದ ಕಾರಣ ಆನೆ ಸೊಂಡಿಲಿನ ತುದಿ ಹಾಗೂ ಕಾಲು ಬಿಳಿ ಬಣ್ಣಕ್ಕೆ ತಿರುಗಿತ್ತು.

**ಸಿಹಿ ಹಂಚಿ ಸಂಭ್ರಮ**

**ತಹಸಿಲ್ದಾರ್ ಎಸ್.ವಿ.ಲೋಕೇಶ್ ಮಾತನಾಡಿ, ಎಲ್ಲರ ಸಹಕಾರದಿಂದ ಆನೆಯನ್ನು ರಕ್ಷಣೆ ಮಾಡಲಾಗಿದೆ. ಅರಣ್ಯ ಇಲಾಖೆಯ ಅಧಿಕಾರಿಗಳ ಕಾರ್ಯ ಶ್ಲಾಘನೀಯ ಎಂದರು. ಯಶಸ್ವಿ ಕಾರ್ಯಾಚರಣೆ ನಡೆಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿ ಪರಸ್ಪರ ಸಿಹಿ ಹಂಚಿ ಸಂಭ್ರಮಿಸಿದರು.**

ಆನೆ ಕಾಣದಿರುವುದನ್ನು ಗಮನಿಸಿದ ಅಧಿಕಾರಿಗಳಿಗೆ ಆನೆ ನಾಲೆಗೆ ಇಳಿದಿರುವ ವಿಷಯ ಗೊತ್ತಾಗಿದೆ. ಬಳಿಕ ಸಂಜೆವರೆಗೆ ಆನೆ ಮೇಲೆ ಬರುತ್ತದೆ ಎಂದು ಕಾದು ನೋಡಿದರೂ ಕೂಡ ಆನೆ ಮೇಲೆ ಬಂದಿರಲಿಲ್ಲ. ಈ ಹಿನ್ನೆಲೆ ಡಿಸಿಎಫ್ ರಘು ಹಾಗೂ ವನ್ಯಜೀವಿ ವಲಯ ಮೈಸೂರು ವಿಭಾಗ ಡಿಸಿಎಫ್ ಪ್ರಭು ನೇತೃತ್ವದಲ್ಲಿ ಅರಣ್ಯ ಅಧಿಕಾರಿಗಳು ನಾಲೆಯ ನೀರಿನ ಪ್ರಮಾಣವನ್ನು ತಗ್ಗಿಸಿ ಕಾರ್ಯಾಚರಣೆ ಆರಂಭಿಸಿದರು.

ಮಂಗಳವಾರ ಬೆಳಿಗ್ಗೆ ಅಧಿಕಾರಿಗಳು ಬೆಂಗಳೂರಿನಿಂದ ಹೈಡ್ರಾಲಿಕ್ ಕ್ರೇನ್ ತರಿಸಿದ್ದರು. ಪುಟ 2ಕ್ಕೆ



## 'ನರಹಂತಕ' ಹುಲಿ ಸೆರೆ

### * ರೈತನ ಬಲಿ ಪಡೆದಿದ್ದ ಹುಲಿ ಜೊತೆಗೆ ಮೂರು ಮರಿ ವಶ

**ಮೈಸೂರು/ಸರಗೂರು:** ಕಳೆದ ತಿಂಗಳು ಮುಳ್ಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೈತನ ದಾಳಿ ಮಾಡಿ ಬಲಿ ಪಡೆದಿದ್ದ ಹುಲಿಯನ್ನು ಕಾರ್ಯಾಚರಣೆ ಮೂಲಕ ಅರಣ್ಯಾಧಿಕಾರಿಗಳು ಮಂಗಳವಾರ ಮುಂಜಾನೆ ಸೆರೆಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ. ಈ ಹುಲಿಯ ಜೊತೆಗೆ ಮೂರು ಮರಿಗಳನ್ನು ಸಹ ಸೆರೆಹಿಡಿಯಲಾಗಿದೆ.

ರೈತನನ್ನು ಬಲಿ ಪಡೆದಿದ್ದ ಹುಲಿಯು ನಂತರ ಎರಡು ದನಗಳನ್ನೂ ಬೇಟೆಯಾಡಿತ್ತು. ಕಳೆದ ಕೆಲವು ದಿನಗಳಿಂದ ಗ್ರಾಮ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಘಟನೆ ಬಳಿಕ ಕಾರ್ಯಾಚರಣೆ ನಡೆಸಿದ್ದ ಅರಣ್ಯ ಇಲಾಖೆ ಅಧಿಕಾರಿಗಳು ಒಟ್ಟು 11 ಹುಲಿ ಹಾಗೂ ಅದರ ಮರಿಗಳನ್ನು ಸೆರೆಹಿಡಿದಿತ್ತು. ಆದರೆ, ರೈತನ್ನು ಬಲಿ ಪಡೆದಿದ್ದ ಹುಲಿ ಮಾತ್ರ ಸೆರೆ ಸಿಕ್ಕಿರಲಿಲ್ಲ. ಬಳಿಕ ಹುಲಿ ಸೆರೆ ಸಂಘಟಿತ ಕಾರ್ಯಾಚರಣೆ ಪ್ರಾರಂಭಿಸಿತ್ತು.

ಹುಲಿ ಹಿಡಿಯಲು ತರಬೇತಿ ಪಡೆದ ಆನೆಗಳಾದ ಭೀಮ, ಮಹೇಂದ್ರ, ಸುಗ್ರೀವ ಮತ್ತು ಪ್ರಶಾಂತವನ್ನೂ ಕಾರ್ಯಾಚರಣೆಗೆ ನಿಯೋಜಿಸಲಾಗಿತ್ತು. ಅಲ್ಲದೆ, ಕಾರ್ಯಾಚರಣೆಯಲ್ಲಿ ಬಳಸಲಾದ ಡ್ರೋಣ್ ಹುಲಿ ಪತ್ತೆ ಮಾಡಲು ನೆರವಾಗಿದೆ. ಎಚ್ಚರಿಕೆ ಮೇಲ್ವಿಚಾರಣೆಯ ನಂತರ, ಸ್ಥಳೀಯರಿಗೆ ಅಥವಾ ಪ್ರಾಣಿಗೆ ಹಾನಿಯಾಗದಂತೆ ಹುಲಿಯನ್ನು ಯಶಸ್ವಿಯಾಗಿ ಸೆರೆಹಿಡಿಯಲಾಗಿದೆ.

ಹುಲಿಯ ವಯಸ್ಸು, ಹೆಜ್ಜೆ ಗುರುತು, ನಡವಳಿಕೆಯ ಮಾದರಿಯ ಆಧಾರದ ಮೇಲೆ ದಾಳಿ ನಡೆಸಿದ ಹುಲಿ ಇದೇ ಎಂಬುದು ಬಲವಾಗಿ ಸೂಚಿಸುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಾರ್ಯಾಚರಣೆ ನೇತೃತ್ವವನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಿಸಿಎಫ್) ಪ್ರಭಾಕರ್ ಎಸ್., ವನ್ಯಜೀವಿ ಪಶುವೈದ್ಯ ಡಾ. ವಾಸಿಮ್, ರಾಜೇಶ್ ಎಸ್ ಡಿ, ಆರ್‌ಎಫ್‌ಒ, ರಾಜೀವ್ ಮತ್ತು ಅರಣ್ಯ ಇಲಾಖೆಯ ಡ್ರೋನ್ ಕಣ್ಗಾವಲು ತಂಡ ವಹಿಸಿತ್ತು.






## ಅಂಗನವಾಡಿ ಸಿಬ್ಬಂದಿಗೆ 1 ಸಾವಿರ ವೇತನ ಹೆಚ್ಚಳ

**ತುಮಕೂರು:** ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರಿಗೆ ಹಿಂದಿನ ಬಜೆಟ್‌ನಲ್ಲಿ ಮಾಸಿಕ 1 ಸಾವಿರ ಗೌರವ ಧನ ಹೆಚ್ಚಿಸಲಾಗಿದೆ. ಮುಂದಿನ ಬಜೆಟ್‌ನಲ್ಲಿ ಮತ್ತೆ 1 ಸಾವಿರ ಹೆಚ್ಚಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳಕರ ಭರವಸೆ ನೀಡಿದರು.

## ಪೋಕ್ಸೋ ಪ್ರಕರಣದಲ್ಲಿ ಸಮನ್ಸ್ ಜಾರಿ: ಯಡಿಯೂರಪ್ಪಗೆ ಸಂಕಷ್ಟ

**ಬೆಂಗಳೂರು:** ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧದ ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ಯಡಿಯೂರಪ್ಪ ಸೇರಿ ನಾಲ್ವರು ಆರೋಪಿಗಳಿಗೆ ಕೋರ್ಟ್ ಸಮನ್ಸ್ ಜಾರಿ ಮಾಡಿದೆ.



ಈ ಪ್ರಕರಣ ಸಂಬಂಧ ಹೈಕೋರ್ಟ್ ಟ್ರಯಲ್‌ಗೆ ಅನುಮತಿ ನೀಡಿತ್ತು. ಇದೀಗ 1ನೇ ಫಾಸ್ಟ್ ಕ್ ಕೋರ್ಟ್ ಪುಟ 2ಕ್ಕೆ

## ಶಬರಿಮಲೆಯಲ್ಲಿ ಭಾರೀ ಜನಸ್ತೋಮ

**ಪತ್ತನಂತಿಟ್ಟ:** ಮಕರಂ ವಿಳಕ್ಕು ತೀರ್ಥಯಾತ್ರೆ ಋತುವಿನ ಎರಡನೇ ದಿನ ಶಬರಿಮಲೆ ಅಯ್ಯಪ್ಪ ದೇಗುಲಕ್ಕೆ ಲಕ್ಷಾಂತರ ಭಕ್ತರು ಆಗಮಿಸಿರುವ ಹಿನ್ನೆಲೆಯಲ್ಲಿ ಭಾರಿ ಜನದಟ್ಟಣೆ ನಿರ್ಮಾಣವಾಗಿದೆ. ಮಂಗಳವಾರ ಸರತಿಯಲ್ಲಿ ನಿಂತಿರುವ ಭಕ್ತರು ಹಲವು ಗಂಟೆಗಳು ಕುಡಿಯಲು ನೀರು ಸಿಗದೆ ಪರದಾಡುವಂತಾಯಿತು.

ದೂರುಗಳು ಬಂದ ಕೂಡಲೇ ನೀರು ನೀಡಲು 200 ಸಿಬ್ಬಂದಿಯನ್ನು ನಿಯೋಜಿಸಲಾಯಿತು ದೇವಸ್ವಂ ಬೋರ್ಡ್ ತಿಳಿಸಿದೆ. ಇದುವರೆಗೆ ನಾನು ದೇವಸ್ಥಾನದಲ್ಲಿ ಈ ಪ್ರಮಾಣದ ಜನಸಂದಣಿ ನೋಡಿಲ್ಲ. ಇಲ್ಲಿರುವ ಭಾರಿ ಜನಸಂದಣಿಯಿಂದ ಭಯ ಭೀತನಾಗಿದ್ದೇನೆ ಎಂದು ಭಕ್ತರು ಪುಟ 2ಕ್ಕೆ



## ಕರ್ನಾಟಕ ತಂತ್ರಜ್ಞಾನದ ಶಕ್ತಿ ಕೇಂದ್ರ

**ಬೆಂಗಳೂರು:** ಸರ್ಕಾರದ ದೂರದೃಷ್ಟಿಯ ನೀತಿ ಪರಿಣಾಮ ದೇಶದಲ್ಲಿಯೇ ಕರ್ನಾಟಕ ತಂತ್ರಜ್ಞಾನದ ಶಕ್ತಿ ಕೇಂದ್ರವಾಗಿ ಉದಯಿಸಿ ಹೊರಹೊಮ್ಮುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದಿಸಿದರು.

ಡೀಪ್ ಟೆಕ್ ಅನ್ನು ಕೇಂದ್ರೀಕರಿಸಿದ ಬೆಂಗಳೂರು ಟೆಕ್ ಶೃಂಗಸಭೆಯನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿದ ಸಿಎಂ, ರಾಜ್ಯದಲ್ಲಿನ ಆಳವಾದ ಸಾಂಸ್ಥಿಕ ಶಕ್ತಿ ಮತ್ತು ಪ್ರತಿ ಹಂತದಲ್ಲೂ ಸೃಜನಶೀಲತೆ ಮತ್ತು ಶ್ರೇಷ್ಠತೆಯನ್ನು ಪೋಷಿಸುವ ಪರಿಸರ ವ್ಯವಸ್ಥೆ ಪರಿಣಾಮ ರಾಜ್ಯ ತಂತ್ರಜ್ಞಾನ ಕ್ಷೇತ್ರದಲ್ಲಿ ಮೊದಲ ಸ್ಥಾನದಲ್ಲಿದೆ ಎಂದು ಹೇಳಿದರು. ಪುಟ 2ಕ್ಕೆ

- **ರಾಜ್ಯದ ದ್ವಿತೀಯ ನಗರಗಳಿಗೂ ತಂತ್ರಜ್ಞಾನ ವಿಕೇಂದ್ರೀಕರಣ**
- **ಸಿದ್ದರಾಮಯ್ಯ ಹೇಳಿಕೆ**

## ಬಿಡದಿಯಲ್ಲಿ ಐಟಿ ನಗರ ನಿರ್ಮಾಣ

### ಬಿಲಿಯನ್ ಡಾಲರ್ ಬಂಡವಾಳ ಹೂಡಿಕೆಗೆ ಮುಂದು: ಡಿಸಿಎಂ ಡಿಕೆಶಿ

**ಬೆಂಗಳೂರು:** ಬೆಂಗಳೂರು ದಕ್ಷಿಣ ಜಿಲ್ಲೆಯ ಬಿಡದಿಯಲ್ಲಿ ನೂತನ ಐಟಿ ನಗರ ನಿರ್ಮಾಣಕ್ಕೆ ಆಲೋಚಿಸಲಾಗಿದೆ. ಬೆಂಗಳೂರಿನಲ್ಲಿ ಬಿಲಿಯನ್ ಡಾಲರ್ ಬಂಡವಾಳ ಹೂಡಿಕೆಗೆ ನಾನಾ ದೇಶದ ನಾಯಕರು ಮುಂದೆ ಬಂದಿದ್ದಾರೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.



ಬೆಂಗಳೂರಿನಲ್ಲಿ ಮಂಗಳವಾರ ಟೆಕ್ ಸಮ್ಮಿಟ್ ಉದ್ಘಾಟನೆ ಮುನ್ನ ಮಾಧ್ಯಮಗಳ ಮಾತನಾಡಿದ ಅವರು, ಜಗತ್ತಿನ ನಾನಾ ದೇಶದ ನಾಯಕರು ಪ್ರತಿದಿನ ನನ್ನನ್ನು ಭೇಟಿ ಮಾಡುತ್ತಿರುತ್ತಾರೆ. ಅನೇಕರು ಬೆಂಗಳೂರಿನಲ್ಲಿ ಉದ್ದಿಮೆ ಆರಂಭಕ್ಕೆ ಉತ್ಸುಕರಾಗಿದ್ದಾರೆ ಎಂದರು.

ನಾವು ಎಷ್ಟು ಸಾಧ್ಯವೋ ಅಷ್ಟು ಅವರೆಲ್ಲರ ಬೆಂಬಲಕ್ಕೆ ನಿಂತಿದ್ದೇವೆ. 60 ದೇಶಗಳ ಪ್ರತಿನಿಧಿಗಳು, ದೇಶದ ಎಲ್ಲಾ ರಾಜ್ಯಗಳ ಪ್ರಮುಖರು ಸುಮಾರು 50 ಸಾವಿರ ಮಂದಿ ಇದರಲ್ಲಿ ಭಾಗವಹಿಸಲಿದ್ದಾರೆ. 1,500 ದೊಡ್ಡ ಪುಟ 2ಕ್ಕೆ

## 200 ಎಕರೆಯಲ್ಲಿ ಸೆಮಿಕಂಡಕ್ಟರ್ ಪಾರ್ಕ್: ಸಚಿವ ಎಂ.ಬಿ.ಪಾಟೀಲ್

ಬೆಂಗಳೂರು: ರಾಜ್ಯ ಸರ್ಕಾರ 200 ಎಕರೆ ಜಾಗದಲ್ಲಿ ಸೆಮಿಕಂಡಕ್ಟರ್ ಪಾರ್ಕ್ ಅಭಿವೃದ್ಧಿಪಡಿಸಲಿದೆ. ಇಲ್ಲಿ ಕಂಪನಿಗಳಿಗೆ ಬೇಕಾಗುವ ಸಕಲ ಸೌಕರ್ಯ ಕಲ್ಪಿಸಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ತಿಳಿಸಿದರು.



ಬೆಂಗಳೂರು ಅಂತಾರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ಮಂಗಳವಾರ ಆರಂಭವಾದ ಮೂರು ದಿನಗಳ ಬೆಂಗಳೂರು ತಂತ್ರಜ್ಞಾನ ಪುಟ 2ಕ್ಕೆ

## ಪತ್ನಿ ಆರೋಗ್ಯ ವಿಚಾರಿಸಿದ ಸಿದ್ದು

**ಬೆಂಗಳೂರು:** ನವದೆಹಲಿಯಿಂದ ಆಗಮಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಸ್ಪತ್ರೆಗೆ ಭೇಟಿ ನೀಡಿ ಪತ್ನಿ ಪಾರ್ವತಿ ಅವರ ಆರೋಗ್ಯ ವಿಚಾರಿಸಿದರು.



ಪ್ರಧಾನಿ ನರೇಂದ್ರ ಮೋದಿ ಭೇಟಿ ಮತ್ತು ಸಂಪುಟ ವಿಸ್ತರಣೆ ಸಂಬಂಧ ಹೈಕಮಾಂಡ್ ಜೊತೆ ಚರ್ಚಿಸಲು ದೆಹಲಿಗೆ ತೆರಳಿದ್ದ ಸಿದ್ದರಾಮಯ್ಯ ಅವರು ತಡರಾತ್ರಿ ದೆಹಲಿಯಿಂದ ಬೆಂಗಳೂರಿಗೆ ಆಗಮಿಸಿದರು. ವಿಮಾನ ನಿಲ್ದಾಣದಿಂದ ನೇರವಾಗಿ ಶೇಷಾದ್ರಿಪುರಂನ ಆಸ್ಪತ್ರೆಗೆ ಆಗಮಿಸಿ ಐಸಿಯುನಲ್ಲಿರುವ ಪತ್ನಿಯ ಆರೋಗ್ಯ ವಿಚಾರಿಸಿದರು. ನಂತರ ಅರ್ಧಗಂಟೆಗೂ ಹೆಚ್ಚು ಕಾಲ ವೈದ್ಯರ ಜೊತೆ ಸಿಎಂ ಸಮಲೋಚನೆ ನಡೆಸಿದರು.

ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಸಿಎಂ, ಆರೋಗ್ಯ ಸ್ಥಿರವಾಗಿದೆ. ಯಾವುದೇ ಸಮಸ್ಯೆ ಇಲ್ಲ. ಪುಟ 2ಕ್ಕೆ

## ಪತಿ, ಅತ್ತೆ ಕಿರುಕುಳ: ಪತ್ನಿ, ಮಗು ನದಿಗೆ ಹಾರಿ ಆತ್ಮಹತ್ಯೆ

**ಹಾಸನ:** ಪತಿ ಹಾಗೂ ಅತ್ತೆಯ ಕಿರುಕುಳದಿಂದ ಮನನೊಂದು ಗೃಹಿಣಿ ತನ್ನ ಮಗುವಿನೊಂದಿಗೆ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಹಾಸನ ಜಿಲ್ಲೆ ಅರಕಲಗೂಡು ತಾಲೂಕಿನ ರಾಮನಾಥಪುರ ಬಳಿ ನಡೆದಿದೆ.

ಮಹಾದೇವಿ (29) ಆತ್ಮಹತ್ಯೆಗೆ ಶರಣಾದ ಮಹಿಳೆ. ಮಹಾದೇವಿ ಮೂರು ವರ್ಷಗಳ ಹಿಂದೆ ಅರಕಲಗೂಡು ತಾಲೂಕಿನ ಸೀಬಿಹಳ್ಳಿ ಗ್ರಾಮದ ಕುಮಾರ್ ಜೊತೆ ವಿವಾಹವಾಗಿದ್ದರು. ಮೊದಲ ಪತಿಯಿಂದ ವಿಚ್ಛೇದನ ಪಡೆದಿದ್ದ ಸಾಲಿಗ್ರಾಮ ತಾಲೂಕಿನ ಕರ್ಪೂರವಳ್ಳಿ ಗ್ರಾಮದ ಮಹಾದೇವಿ ಎರಡನೇ ಮದುವೆ ಸಂದರ್ಭ ಕುಟುಂಬಸ್ಥರು ವರದಕ್ಷಿಣೆ ರೂಪದಲ್ಲಿ 100 ಗ್ರಾಂ ಚಿನ್ನ ನೀಡಿದ್ದರು ಎನ್ನಲಾಗಿದೆ.



ಆದರೆ ಪತ್ನಿ ಮೇಲೆ ಅನುಮಾನ ಪಡುತ್ತಿದ್ದ ಕುಮಾರ್, ಅವಾಚ್ಯ ಶಬ್ದಗಳಿಂದ ನಿಂದಿಸಿ ಕಿರುಕುಳ ನೀಡುತ್ತಿದ್ದ. ಕುಮಾರ್ ಕಿರುಕುಳ ತಾಳಲಾರದೆ ಮಹಾದೇವಿ 15 ದಿನಗಳ ಹಿಂದೆ ತವರು ಮನೆ ಸೇರಿದ್ದರು. ಆದರೂ ಸುಮ್ಮನಾಗದ ಪತಿ ಕುಮಾರ್ ಪತ್ನಿಗೆ ಅಶ್ಲೀಲ ಮೆಸೇಜ್ ಮಾಡಿ ಮಾನಸಿಕ ಕಿರುಕುಳ ನೀಡುತ್ತಿದ್ದ. ಹಾಸನಕ್ಕೆ ಬಂದಿದ್ದ ಮಹಾದೇವಿಗೆ ಬಸ್ ನಿಲ್ದಾಣದಲ್ಲೇ ಕುಮಾರ್ ನಿಂದಿಸಿದ್ದ. ಇದರಿಂದ ಮನನೊಂದ ಮಹಾದೇವಿ ಹಾಸನ ಪುಟ 2ಕ್ಕೆ

## ಆಸ್ಪತ್ರೆ ಕಾರಿಡಾರ್‌ನಲ್ಲಿ ಹೆರಿಗೆ: ನೆಲಕ್ಕೆ ಬಿದ್ದು ಶಿಶು ಸಾವು

**ಹಾವೇರಿ:** ನಗರದ ಜಿಲ್ಲಾಸ್ಪತ್ರೆಯ ಕಾರಿಡಾರ್‌ನಲ್ಲೇ ಮಹಿಳೆಯೊಬ್ಬರಿಗೆ ಹೆರಿಗೆ ಆಗಿದೆ. ನವಜಾತ ಶಿಶು ನೆಲದ ಮೇಲೆ ಬಿದ್ದು ತಲೆಗೆ ತೀವ್ರ ಪೆಟ್ಟಾಗಿದ್ದರಿಂದ ಸ್ಥಳದಲ್ಲೇ ಮೃತಪಟ್ಟಿದೆ. ಮಂಗಳವಾರ ಬೆಳಿಗ್ಗೆ ಈ ಘಟನೆ ನಡೆದಿದೆ.

ರಾಣೆಬೆನ್ನೂರು ತಾಲ್ಲೂಕಿನ ಕಾಕೋಳ ಗ್ರಾಮದ ರೂಪಾ (30) ಮಗು ಕಳೆದುಕೊಂಡವರು. ಹೆರಿಗೆ ಕೊಠಡಿಯಲ್ಲಿ ಹೆಚ್ಚು ಮಹಿಳೆಯರಿದ್ದರು. ಹೀಗಾಗಿ, ಬೆಡ್‌ಗಳ ಕೊರತೆ ಇತ್ತು. ಮಹಿಳೆಗೆ ಬೆಡ್ ಸಿಕ್ಕಿರಲಿಲ್ಲ. ಕೊಠಡಿ ಹೊರಗೆಯೇ ನೆಲದ ಮೇಲೆ ಕುಳಿತಿದ್ದ ಮಹಿಳೆ ತೀವ್ರವಾದ ನೋವು ಅನುಭವಿಸುತ್ತಿದ್ದರು. ವೈದ್ಯರಾಗಲಿ ಶುಶ್ರೂಷಕಿಯರಾಗಲಿ ಬೆಡ್ ಕೊಡಿಸಲು ಮುಂದಾಗಿರಲಿಲ್ಲವೆಂದು ಸಂಬಂಧಿಕರು ದೂರಿದರು. ಆಸ್ಪತ್ರೆಯ ವೈದ್ಯರು ಹಾಗೂ ಶುಶ್ರೂಷಕಿಯರ ನಿರ್ಲಕ್ಷ್ಯವೇ ಘಟನೆಗೆ ಕಾರಣವೆಂದು ಮಹಿಳೆಯರ ಸಂಬಂಧಿಕರು ಆರೋಪಿಸಿದ್ದಾರೆ.

## ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ ಕೇರಳ

### ಎಸ್‌ಐಆರ್ ಮುಂದೂಡಲು ಆದೇಶಿಸುವಂತೆ ಸರ್ಕಾರದ ಮನವಿ

**ನವದೆಹಲಿ:** ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಮುಂದೂಡಲು ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡುವಂತೆ ಕೋರಿ ಕೇರಳ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ.

ಡಿಸೆಂಬರ್‌ನಲ್ಲಿ ನಡೆಯಲಿರುವ ಸ್ಥಳೀಯ ಸಂಸ್ಥೆಗಳ ಚುನಾವಣೆ ಗಮನದಲ್ಲಿಟ್ಟುಕೊಂಡು ಎಸ್‌ಐಆರ್ ಪ್ರಕ್ರಿಯೆ ನಡೆಸುವಂತೆ ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡುವಂತೆ ಕೋರ್ಟ್‌ಗೆ ಕೇರಳ ಸರ್ಕಾರ ಮನವಿ ಮಾಡಿದೆ.

ನವೆಂಬರ್ 4ರಿಂದ ಡಿಸೆಂಬರ್ 4ರವರೆಗೆ ಎಸ್‌ಐಆರ್ ಪ್ರಕ್ರಿಯೆ ನಡೆಸುವುದು ಕೇರಳದ ಸ್ಥಳೀಯ ಸಂಸ್ಥೆಗಳ ಚುನಾವಣೆಯೊಂದಿಗೆ ಹೊಂದಿಕೆಯಾಗುತ್ತದೆ. ಎರಡೂ ಪ್ರಕ್ರಿಯೆಗಳನ್ನು ಏಕಕಾಲದಲ್ಲಿ ನಡೆಸುವುದರಿಂದ ಮಾನವ ಸಂಪನ್ಮೂಲದ ಮೇಲೆ ಹೊರೆಯಾಗುತ್ತದೆ. ಅಲ್ಲದೆ, ಸರ್ಕಾರದ ದೈನಂದಿನ ಕಾರ್ಯಚಟುವಟಿಕೆಗಳನ್ನು ನೋಡಿಕೊಳ್ಳಲು ಸಿಬ್ಬಂದಿ ಕೊರತೆ



ಉಂಟಾಗಿ ಆಡಳಿತಾತ್ಮಕ ಬಿಕ್ಕಟ್ಟು ಎದುರಾಗುವ ಸಾಧ್ಯತೆ ಇದೆ. ಎಸ್‌ಐಆರ್ ಪ್ರಕ್ರಿಯೆ ನಡೆಸಲು ಉದ್ದೇಶಿಸಿರುವ ದಿನಾಂಕಗಳು ಪ್ರಸ್ತುತ ಘೋಷಣೆಯಾಗಿರುವ ಚುನಾವಣಾ ವೇಳಾಪಟ್ಟಿಗೆ ಹೊಂದಿಕೆಯಾಗುವುದಿಲ್ಲ ಎಂದೂ ಕೇರಳ ಸರ್ಕಾರ ಉಲ್ಲೇಖಿಸಿದೆ.

ಕೇರಳದ ಸ್ಥಳೀಯ ಸಂಸ್ಥೆಗಳಿಗೆ ಡಿಸೆಂಬರ್ 9 ಮತ್ತು 11ರಂದು ಮತದಾನ ನಡೆಯಲಿದೆ. ಡಿ.13 ರಂದು ಮತ ಎಣಿಕೆ ನಡೆಯಲಿದೆ. ಡಿ.18ರೊಳಗೆ ಸಂಪೂರ್ಣ ಚುನಾವಣಾ ಪ್ರಕ್ರಿಯೆಯು ಮುಕ್ತಾಯಗೊಳ್ಳುವ ನಿರೀಕ್ಷೆಯಿದೆ ಎಂದು ರಾಜ್ಯ ಚುನಾವಣಾ ಆಯೋಗ ತಿಳಿಸಿದೆ.

ಸ್ಥಳೀಯ ಸಂಸ್ಥೆಗಳ ಚುನಾವಣೆಗೆ 68,000 ಪೊಲೀಸ್ ಮತ್ತು ಇತರ ಭದ್ರತಾ ಸಿಬ್ಬಂದಿಯ ಜೊತೆಗೆ ಸರ್ಕಾರಿ ಹಾಗೂ ಅರೆ ಸರ್ಕಾರಿ ಸೇವೆಗಳಿಂದ 1.76 ಲಕ್ಷ ಸಿಬ್ಬಂದಿಯನ್ನು ನಿಯೋಜಿಸಲಾಗುತ್ತದೆ. ಎಸ್‌ಐಆರ್‌ಗೆ ಸುಮಾರು 25,668 ಹೆಚ್ಚುವರಿ ಸಿಬ್ಬಂದಿ ಅಗತ್ಯವಿದೆ ಎಂದು ಅಧಿಕಾರಿಯೊಬ್ಬರು ವಿವರಿಸಿದ್ದಾರೆ.

ಈಗಾಗಲೇ ಬಿಹಾರದಲ್ಲಿ ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಂಡಿದೆ. ಇದೀಗ ಅಂಡಮಾನ್ ಮತ್ತು ನಿಕೋಬಾರ್, ಛತ್ತೀಸಗಢ, ಗೋವಾ, ಗುಜರಾತ್, ಕೇರಳ, ಲಕ್ಷದ್ವೀಪ, ಮಧ್ಯಪ್ರದೇಶ, ಪುದುಚೇರಿ, ರಾಜಸ್ಥಾನ, ತಮಿಳುನಾಡು, ಉತ್ತರ ಪ್ರದೇಶ ಮತ್ತು ಪಶ್ಚಿಮ ಬಂಗಾಳದಲ್ಲಿ ಎರಡನೇ ಹಂತದ ಎಸ್‌ಐಆರ್ ಅನ್ನು ಚುನಾವಣಾ ಆಯೋಗ ಆರಂಭಿಸಿದೆ.

## ಎಸ್‌ಐಆರ್ ಕಾರ್ಯ ಬಹಿಷ್ಕರಿಸಿದ ತ.ನಾಡು ಕಂದಾಯ ಇಲಾಖೆ ನೌಕರರು

**ಚೆನ್ನೈ:** ಅತಿಯಾದ ಕೆಲಸದ ಹೊರೆ, ಸಾಕಷ್ಟು ಮಾನವಶಕ್ತಿ, ಗಡುವಿನ ಒತ್ತಡ ಮತ್ತು ಅಸಮರ್ಪಕ ತರಬೇತಿ ವಿರೋಧಿಸಿ ತಮಿಳುನಾಡು ಕಂದಾಯ ಇಲಾಖೆ ನೌಕರರ ಸಂಘಗಳ ಒಕ್ಕೂಟ ಮಂಗಳವಾರದಿಂದ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕೆಲಸವನ್ನು ಬಹಿಷ್ಕರಿಸಿದೆ.

ಬಹಿಷ್ಕಾರಕ್ಕೆ ಮೊದಲು ಸಾಮೂಹಿಕ ಮನವಿ ಕಾರ್ಯಕ್ರಮದ ಸಂದರ್ಭದಲ್ಲಿ ಸಂಘದ ಸದಸ್ಯರು 32 ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರು. ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಎಸ್‌ಐಆರ್ ಕೆಲಸ ವಿರೋಧಿಸಿ ನೌಕರರು ಪ್ರತಿಭಟನೆ ನಡೆಸಿದರು.

ನಾವು ಇಂದಿನಿಂದ ಎಸ್‌ಐಆರ್‌ಗೆ ಸಂಬಂಧಿಸಿದ ಯಾವುದೇ ಕೆಲಸಕ್ಕೆ ಹಾಜರಾಗುತ್ತಿಲ್ಲ ಎಂದು ಸಂಘದ ರಾಜ್ಯ ಸಂಯೋಜಕ ಎಂ.ಪಿ.ಮುರುಗಯನ್ ತಿಳಿಸಿದ್ದಾರೆ. ಕಂದಾಯ ಇಲಾಖೆಯ ನಿಯಮಿತ ಕೆಲಸ ಮುಂದುವರಿಯುತ್ತದೆ. ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕೆಲಸ ಬಹಿಷ್ಕಾರದಿಂದಾಗಿ ಇಲಾಖೆ ಕೆಲಸದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಅವರು ಹೇಳಿದರು.

ಎಲ್ಲಾ ಅಧಿಕಾರಿಗಳಿಗೆ ಸರಿಯಾದ ತರಬೇತಿ, ಹೆಚ್ಚುವರಿ ಅಧಿಕಾರಿಗಳನ್ನು ಬೂತ್ ಮಟ್ಟದ ಅಧಿಕಾರಿಗಳಾಗಿ ನೇಮಿಸುವುದು ಮತ್ತು ಮಟ್ಟದಲ್ಲಿ ಪುಟ 2ಕ್ಕೆ



ವರ್ತಮಾನ

ಬುಧವಾರ
ನವೆಂಬರ್ 19, 2025

**ಮೊದಲ ಪುಟದಿಂದ**

## ಬಿಡದಿಯಲ್ಲಿ ಐಟಿ ನಗರ

ಕಂಪೆನಿಗಳು ಭಾಗವಹಿಸುತ್ತಿವೆ. ಇವರು ಉದ್ಯೋಗ ನೀಡಬೇಕು, ಸಂಪಾದನೆ ಮಾಡಬೇಕು. ಅದಕ್ಕೆ ನಮ್ಮ ಪ್ರೋತ್ಸಾಹ ಎಂದರು.

ಪ್ರೋತ್ಸಾಹ ನೀಡಿದರೆ ಇಲ್ಲಿನ ಪ್ರತಿಭೆಗಳು, ಹೊಸ ಆವಿಷ್ಕಾರ, ತಂತ್ರಜ್ಞಾನ, ಸ್ಟಾರ್ಟ್ ಅಪ್ ಗಳು ಕರ್ನಾಟಕವನ್ನು ಹೊಸ ದಿಕ್ಕಿನೆಡೆಗೆ ಕೊಂಡೊಯ್ಯಲಿವೆ. ನೀವು ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಬೇಕು ಎಂದು ನಮ್ಮ ಮುಂದಿನ ಪೀಳಿಗೆಗೆ ನಾನು ಸದಾ ಹೇಳುತ್ತಿರುತ್ತೇನೆ. ಹೊಸ ಆಲೋಚನೆಗಳು ಬಂದರೆ ಸ್ಟಾರ್ಟ್ ಅಪ್ ಮೂಲಕ ಬೆಳೆಯಲು ಸರ್ಕಾರ ಅವಕಾಶ ಕಲ್ಪಿಸಿ ನಿಮ್ಮ ಜೊತೆಗಿದೆ ಎಂದು ಹೇಳುತ್ತಿರುತ್ತೇನೆ. ನಮ್ಮನ್ನು ನಂಬಿ ಬಂದವರಿಗೆ ಉತ್ತಮ ಅವಕಾಶ ನೀಡುವುದು ನಮ್ಮ ಕೆಲಸ. ಉದ್ಯಮಸ್ನೇಹಿ ವಾತಾವರಣ ನಿರ್ಮಿಸಲಾಗುವುದು ಎಂದು ಎಂದರು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೊದಲ ದಿನದಿಂದ ಎಲ್ಲಾ ಕ್ಷೇತ್ರಗಳಿಗೆ ಅದರದೇ ಆದ ನೀತಿ ರೂಪಿಸಿ, ಪ್ರೋತ್ಸಾಹ ನೀಡುತ್ತಿದೆ. ರಸ್ತೆಗಳ ದುರಸ್ತಿ ಕಾರ್ಯಕ್ಕೆ ಹಲವಾರು ಕಂಪೆನಿಗಳು ಮೆಚ್ಚುಗೆ ವ್ಯಕ್ತವಾಗುತ್ತಿದೆ. ನಾವು ನಮ್ಮ ಕೆಲಸ ಮಾಡಿದ್ದೇವೆ ಎಂದು ಡಿಸಿಎಂ ಡಿಕೆಶಿ ಹೇಳಿದರು.

**ಶಾಸಕ ಅನಿಲ್ ಚಿಕ್ಕಮಾದು ಹೇಳಿಕೆ**

# ದಸರಾ ವೇಳೆಗೆ ಚಾಮುಂಡೇಶ್ವರಿ ದೇಗುಲ ಉದ್ಘಾಟನೆ

ಎಚ್.ಡಿ.ಕೋಟೆ: ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ಶ್ರೀ ಚಾಮುಂಡೇಶ್ವರಿ ದೇವಸ್ಥಾನ ಮುಂದಿನ ದಸರಾ ಒಳಗೆ ಉದ್ಘಾಟನೆಗೊಳ್ಳಲಿದೆ. ಇದರ ಅಭಿವೃದ್ಧಿಗೆ ನನ್ನ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು.

ಪಟ್ಟಣದ ಹೌಸಿಂಗ್ ಬೋರ್ಡ್ ಕಾಲೊನಿಯಲ್ಲಿ 50 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣ ಆಗಲಿರುವ ದೇವಸ್ಥಾನ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು. ಚಾಮುಂಡೇಶ್ವರಿ ದೇವಸ್ಥಾನ ಮತ್ತು ಶ್ರೀ ಲಕ್ಷ್ಮಿವರದ ರಾಜಸ್ವಾಮಿ ದೇವಸ್ಥಾನಗಳಲ್ಲಿ ಪ್ರತಿವರ್ಷ ಚಾಮುಂಡೇಶ್ವರಿ ವರ್ಧಂತಿ ಮಹೋತ್ಸವ ಹಾಗೂ ಬ್ರಹ್ಮ ರಥೋತ್ಸವ ಹಾಗೂ ನಾಡಹಬ್ಬ ದಸರಾ, ವಿಜಯ ದಶಮಿ ಉತ್ಸವ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ನಡೆಸುತ್ತ ಬಂದಿರುವುದು ಸಂತಸದ ವಿಷಯ. ದಸರಾ ಕಾರ್ಯಕ್ರಮದ ವೇಳೆ ಚಾಮುಂಡೇಶ್ವರಿ ದೇವಸ್ಥಾನದ ಬನ್ನಿ ಮರಕ್ಕೆ ಪೂಜೆ ಮಾಡುವ ಮೂಲಕ ಪವಿತ್ರ ಈ ದೇವಸ್ಥಾನ ಸ್ಥಳವಾಗಿದೆ. ನೂತನವಾಗಿ ನಿರ್ಮಾಣವಾಗುತ್ತಿರುವ



ದೇವಾಲಯ ನಿರ್ಮಾಣಕ್ಕೆ ಹಲವು ದಾನಿಗಳು ದೇಣಿಗೆ ನೀಡಲಿದ್ದಾರೆ. ಅವರನ್ನು ಬಳಸಿಕೊಂಡು ಒಂದು ವರ್ಷದಲ್ಲಿ ಕಾಮಗಾರಿ ಮುಗಿಸಲಾಗುವುದು ಎಂದರು. ಶ್ರೀ ಚಾಮುಂಡೇಶ್ವರಿ ದೇವಸ್ಥಾನದ ನಿವೇಶನಕ್ಕೆ ಸಂಬಂಧಿಸಿದಂತೆ ಇದ್ದ ಸಮಸ್ಯೆಯನ್ನು ಪುರಸಭೆ ಸದಸ್ಯರೊಂದಿಗೆ ಚರ್ಚಿಸಿ ಬಗೆಹರಿಸಲಾಗಿದೆ.ಈ ದೇವಸ್ಥಾನ ಚಿಕ್ಕದಾಗಿದ್ದು, ಅಸಂಖ್ಯಾತ ಭಕ್ತರು ಇದ್ದಾರೆ. ಹಾಗಾಗಿ ದೇವಸ್ಥಾನ ದೊಡ್ಡದಾಗಿ ಇರಬೇಕಿದೆ. ಆದ್ದರಿಂದ, ಹಳೆ ದೇವಸ್ಥಾನ ಕೆಡವಿ ಹೊಸ ದೇವಸ್ಥಾನ ನಿರ್ಮಾಣಕ್ಕೆ ಮುಂದಾಗಿರುವುದು ಸಂತಸದ ವಿಷಯ. ಶಾಸಕರ ನಿಧಿಯಿಂದ ಹಾಗೂ ವೈಯಕ್ತಿಕವಾಗಿ ಸಹಕಾರ ನೀಡುತ್ತೇನೆ ಎಂದು ತಿಳಿಸಿದರು.

ದೇವಸ್ಥಾನ ಸಮಿತಿ ಅಧ್ಯಕ್ಷ ನಟರಾಜು, ಗೌರವಾಧ್ಯಕ್ಷ ಎಂ.ಸಿ. ದೊಡ್ಡನಾಯಕ, ಖಜಾಂಚಿ ಸಿ.ಎನ್. ನಾಗಣ್ಣ, ಸಮಿತಿ ಸದಸ್ಯರಾದ ವೀರಪ್ಪ, ರಾಮಯ್ಯ, ಡೈರಿ ಶ್ರೀಕಾಂತ್, ಅರ್ಚಕ ಸತೀಶ್, ಲಕ್ಷ್ಮಿನರಸಿಂಹ, ನಾರಾಯಣಗೌಡ, ಎಚ್.ಸಿ. ಮಂಜುನಾಥ್, ಸ್ಟುಡಿಯೋ ಪ್ರಕಾಶ್, ಕುಲುಮೆ ರಮೇಶ್, ನಾಗೇಗೌಡ, ಮುಖಂಡರಾದ ಗಿರಿಗೌಡ, ಹೆಚ್. ಸಿ. ನರಸಿಂಹಮೂರ್ತಿ, ಗುಂಡಣ್ಣ, ಪಟೇಲ್ ನಾಗರಾಜಶೆಟ್ಟಿ, ರಾಮಸ್ವಾಮಿ, ಕನ್ನಡ ಪ್ರಮೋದ, ವಿನಯ್ ಭಜರಂಗಿ, ಏಜಾಜ್ ಪಾಷ, ಇಬ್ರಾಹಿಂ, ಪರಶಿವಮೂರ್ತಿ, ಎಚ್. ಎನ್. ನಾಗರಾಜ್, ವಾಟರ್ ದಿನೇಶ್, ಮಧುಕುಮಾರ್, ಆಸಿಫ್, ಅನಿಲ್, ಚಾಕಹಳ್ಳಿ ಕೃಷ್ಣ, ರಾಜು ಬಿಡಗಲು, ಮಹದೇವಪ್ಪ, ಸುಧಾಕರ್, ಮಧುಸೂದನ್, ಸಿದ್ದರಾಮೇಗೌಡ, ಲಾಟರಿ ನಾಗರಾಜು, ಶಂಕರ್, ಸೋಮು, ಗಣೇಶ್, ನಿಜಗುಣ, ಪಳನಿಸ್ವಾಮಿ, ದೇವರಾಜು, ಸ್ವಾಮಿ, ಮಂಜುನಾಥ್, ಗೋವಿಂದ, ನಾಗೇಗೌಡ, ಗೋಪಾಲನಾಯಕ, ಶಿವಣ್ಣ, ಟಿ.ಎಲ್.ಸ್ವಾಮಿ ಸೇರಿದಂತೆ ಮತ್ತಿತರರಿದ್ದಾರೆ.

## ‘ಆಪರೇಷನ್ ಗಜೇಂದ್ರ’ ಯಶಸ್ವಿ

ಬಳಿಕ ಆನೆಗೆ ಅರಿವಳಿಕೆ ಮದ್ದು ನೀಡಿ ಮೇಲೆತ್ತಲು ನಿರ್ಧ ರಿಸಿದ್ದರು. ಅದರಂತೆ ಅರವಳಿಕೆ ನೀಡುವ ಮೊದಲು ಆನೆಗೆ ನಿರಂತರವಾಗಿ ಕಬ್ಬು, ಬೆಲ್ಲವನ್ನ ಆಹಾರ ವಾಗಿ ಪೂರೈಸಲಾಯಿತು. ಈ ವೇಳೆ ಅಧಿಕಾರಿಗಳ ತಂಡದ ಡಾ. ರಮೇಶ್ ಮತ್ತು ಡಾ ಆದರ್ಶ ಅವರು ಗನ್‌ನಲ್ಲಿ ಶೂಟ್ ಮಾಡುವ ಆನೆಗೆ ಎರಡು ಬಾರಿ ಅರವಳಿಗೆ ಮದ್ದು ನೀಡಿದರು. ನಾಲೆಗೆ ಕಂಟೇನರ್‌ನ್ನು ಇಳಿಸಿದ್ದ ಅಧಿಕಾರಿ ಗಳು ಆನೆ ನಿತ್ರಾಣವಾಗುತ್ತಿದ್ದಂತೆ ಕೆಳಗಿಳಿದು, ಆನೆಯ ಆರೋಗ್ಯ ಸ್ಥಿತಿಯನ್ನು ಪರಿಶೀಲಿಸಿದರು. ಕೂಡಲೇ ಆನೆಗೆ ಬೆಲ್ಟ್ ಹಾಗೂ ಹಗ್ಗ ಕಟ್ಟಿ ಅದನ್ನು ಕ್ರೇನ್ ಮೂಲಕ ಕಂಟೇನರ್ ಮೇಲೆ ಇರಿಸ ಲಾಯಿತು. ಬಳಿಕ ಆನೆ ಮಲಗಿದ್ದ ಕಂಟೇನರ್‌ನ್ನು ಕ್ರೇನ್ ಮೂಲಕ ಮೇಲೆತ್ತಿ, ಲಾರಿಗೆ ಶಿಫ್ಟ್ ಮಾಡಿದರು. ಲಾರಿಯ ಮೂಲಕ ಆನೆಯನ್ನು ಸುರಕ್ಷಿತ ಸ್ಥಳಕ್ಕೆ ತೆಗೆದುಕೊಂಡು ಹೋಗಿ ಆರೋಗ್ಯ ತಪಾಸಣೆ ನಡೆಸಿದರು. ಬಳಿಕ ಆನೆಯನ್ನು ಕಾಡಿಗೆ ಬಿಡಬಹುದು ಎಂದು ವೈದ್ಯಾಧಿಕಾರಿಗಳು ತಿಳಿಸಿದ್ದಾರೆ. ಅದರಂತೆ ಆನೆಯನ್ನು ಕಾವೇರಿ ವನ್ಯಜೀವಿ ಧಾಮಕ್ಕೆ ವಾಪಸ್ ಬಿಡಲಾಗಿದೆ. ಇಲಾಖೆ ಅಧಿಕಾರಿ ಗಳು ಮತ್ತು ಸಿಬ್ಬಂದಿಯ ಶ್ರಮದಿಂದ ಆನೆ ಮರಿ ಜೀವಂತವಾಗಿ ಮರಳಿದೆ.

## ಸಿಬ್ಬಂದಿಗೆ 1 ಸಾವಿರ ವೇತನ ಹೆಚ್ಚಳ

ನಗರದಲ್ಲಿ ಮಂಗಳವಾರ ಮಾತನಾಡಿದ ಅವರು, ಗೌರವ ಧನ ಹೆಚ್ಚಳದ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಜತೆಗೆ ಚರ್ಚಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರಲ್ಲಿ ಶೇ 70ರಷ್ಟು ಮಂದಿ ಗೃಹಲಕ್ಷ್ಮಿ ನೆರವು ಪಡೆಯುತ್ತಿದ್ದಾರೆ. ಗೃಹಲಕ್ಷ್ಮಿ ಸಹಕಾರ ಬ್ಯಾಂಕ್‌ನಲ್ಲಿ 30 ಸಾವಿರದಿಂದ 5 ಲಕ್ಷದ ವರೆಗೆ ಸಾಲ ವಿತರಿಸಲು ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ಹಿಂದಿನ ಎರಡು ತಿಂಗಳ ಗೃಹಲಕ್ಷ್ಮಿ ಹಣ ಬಾಕಿ ಇದೆ. ಆದಷ್ಟು ಶೀಘ್ರ ಬಿಡುಗಡೆ ಮಾಡಲಾಗುವುದು. ಇದಕ್ಕಾಗಿ ತಿಂಗಳಿಗೆ 2,500 ಕೋಟಿ ಬೇಕಾಗುತ್ತದೆ ಎಂದು ಹೇಳಿದರು.

## ಶಬರಿಮಲೆಯಲ್ಲಿ ಜನಸ್ತೋಮ

ಆತಂಕ ವ್ಯಕ್ತಪಡಿಸಿದ್ದಾರೆ. ಜನ ನಿಲಕ್ಕಲ್‌ನಲ್ಲಿಯೇ ಕಾಯಬಹುದು. ಅದಕ್ಕೆ ಬೇಕಾದ ವ್ಯವಸ್ಥೆಗಳು ಅಲ್ಲಿವೆ. ಅಲ್ಲದೆ ಅಲ್ಲಿ ಏಳು ಹೆಚ್ಚುವರಿ ಸ್ಪಾಟ್ ಬುಕ್ಕಿಂಗ್ ಕೌಂಟರ್‌ಗಳನ್ನು ತೆರೆಯುತ್ತೇವೆ. ಅದಕ್ಕಾಗಿ ಅವರು ಪಂಪಾಗೆ ಬರುವ ಅಗತ್ಯ ಇಲ್ಲ. ನಿತ್ಯ ಸ್ಪಾಟ್ ಬುಕ್ಕಿಂಗ್‌ಗೆ ಮಿತಿ ಹಾಕುವ ಸಾಧ್ಯತೆಗಳನ್ನೂ ನಾವು ಪರಿಶೀಲಿಸುತ್ತಿದ್ದೇವೆ. ಯಾತ್ರಿಗಳು ಸ್ಥಾಪಿಸಲಾಗಿರುವ ಕ್ಯೂ ಕಾಂಪ್ಲೆಕ್ಸ್ ಮೂಲಕ ಪ್ರವೇಶಿಸುತ್ತಿಲ್ಲ ಎಂದು ಅವರು ಹೇಳಿದ್ದಾರೆ.

## ಎಸ್‌ಐಆರ್ ಕಾರ್ಯ ಬಹಿಷ್ಕಾರ

ಸಾಕಷ್ಟು ಸಂಖ್ಯೆಯಲ್ಲಿ ಸಿಬ್ಬಂದಿ ನಿಯೋಜಿಸಬೇಕು ಎಂದು ಒತ್ತಾಯಿಸಿ ರಾಜ್ಯವ್ಯಾಪಿ ಎಸ್‌ಐಆರ್ ಕೆಲಸವನ್ನು ಬಹಿಷ್ಕರಿಸಲಾಗಿದೆ. ಜಿಲ್ಲಾಧಿಕಾರಿಗಳು ಮಧ್ಯರಾತ್ರಿಯವರೆಗೆ ಪರಿಶೀಲನಾ ಸಭೆಗಳನ್ನು ನಡೆಸುವುದನ್ನು ಮತ್ತು ವಿಮರ್ಶೆಗಳ ಹೆಸರಿನಲ್ಲಿ ಪ್ರತಿದಿನ ಮೂರು ವಿಡಿಯೋ ಕಾನ್ಫರೆನ್ಸ್ ಸಭೆ ನಡೆಸುವುದನ್ನು ಸಂಘ ವಿರೋಧಿಸಿದೆ. ಎಸ್‌ಐಆರ್ ಪೂರ್ಣಗೊಳಿಸಲು ಡಿಸೆಂಬರ್ 4ರ ಡೆಡ್ ಲೈನ್ ನೀಡಲಾಗಿದೆ. ವಿಶೇಷ ಸಮಗ್ರ ಪರಿಷ್ಕರಣೆ ಫಾರ್ಮ್‌ಗಳನ್ನು ವಿತರಿಸುವುದು ಮತ್ತು ಸಂಗ್ರಹಿಸುವುದು, ಅವುಗಳನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದು ಮತ್ತು ಪರಿಶೀಲನಾ ಸಭೆಗಳನ್ನು ನಡೆಸುವುದನ್ನು ಒಳಗೊಂಡಿದೆ.

## 200 ಎಕರೆಯಲ್ಲಿ ಸೆಮಿಕಂಡಕ್ಟರ್ ಪಾರ್ಕ್

ಸಮಾವೇಶದಲ್ಲಿ ಮಾತನಾಡಿದ ಅವರು, ಇದು ದೇಶ ಮತ್ತು ರಾಜ್ಯ ಮಟ್ಟದಲ್ಲಿ ಸೆಮಿಕಂಡಕ್ಟರ್ ಕ್ಷೇತ್ರಕ್ಕೆ ಸಂಬಂಧಿಸಿದ ಎಲ್ಲ ನಾವೀನ್ಯತಾ ಕೇಂದ್ರವಾಗಿ ಕೆಲಸ ಮಾಡಲಿದೆ ಎಂದರು.

ರಾಜ್ಯದಲ್ಲಿ ಬಂಡವಾಳ ಹೂಡಿಕೆಯನ್ನು ಆಕರ್ಷಿಸಲು ಆದ್ಯತೆ ನೀಡಿದೆ. ಇಂತಹ ಹೂಡಿಕೆಯು ಕೈಗಾರಿಕೋದ್ಯಮದ ವಿವಿಧ ವಲಯಗಳಿಗೆ ಹರಿದು ಬರಬೇಕು ಗುರಿಯಾಗಿದೆ. ಇಂತಹ ವಲಯಗಳಲ್ಲಿ ಡ್ರೋನ್, ಸೆಮಿಕಂಡಕ್ಟರ್ ಸಾಧನಗಳು ಮತ್ತು ಸೌರ ವಿದ್ಯುತ್ ಎಲ್ಲವನ್ನೂ ಪರಿಗಣಿಸಲಾಗಿದೆ. ಇದರ ಜೊತೆಯಲ್ಲಿ ಇಂಡಸ್ಟ್ರಿ 5.0 ಮತ್ತು ಇನ್ನಿತರ ಅತ್ಯಾಧುನಿಕ ಕೈಗಾರಿಕಾ ವಿಧಾನಗಳನ್ನೂ ಗಂಭೀರವಾಗಿ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದರು.

## ಯಡಿಯೂರಪ್ಪಗೆ ಸಂಕಷ್ಟ

ಬಿ.ಎಸ್.ಯಡಿಯೂರಪ್ಪ ಸೇರಿದಂತೆ 4 ಆರೋಪಿಗಳ ವಿರುದ್ಧ ದೋಷಾರೋಪ ನಿಗದಿಗೆ ಸಮನ್ಸ್ ಜಾರಿ ಮಾಡಿದೆ. ಡಿ.2ಕ್ಕೆ ಕೋರ್ಟ್ಗೆ ಹಾಜರಾಗುವಂತೆ ತಿಳಿಸಿದೆ. ಇದಕ್ಕೂ ಮುನ್ನ ಕೆಳಹಂತದ ನ್ಯಾಯಾಲಯ ಆರೋಪ ನಿಗದಿಗೆ ಸಂಬಂಧಿಸಿದಂತೆ ಯಡಿಯೂರಪ್ಪನವರಿಗೆ ಸಮನ್ಸ್ ಜಾರಿ ಮಾಡಿತ್ತು. ಸಮನ್ಸ್ ಜಾರಿ ಮಾಡಿದ್ದನ್ನು ಪ್ರಶ್ನಿಸಿ ಬಿಎಸ್‌ವೈ ಹೈಕೋರ್ಟ್ ಮೆಟ್ಟಿಲೇರಿದ್ದರು. ವಿಚಾರಣೆ ನಡೆಸಿದ ಹೈಕೋರ್ಟ್ ಯಡಿಯೂರಪ್ಪನವರ ಅರ್ಜಿಯನ್ನು ವಜಾಗೊಳಿಸಿ ಟ್ರಯಲ್‌ಗೆ ಅನುಮತಿ ನೀಡಿತ್ತು.

**ಪ್ರಕರಣದ ಹಿನ್ನೆಲೆ:** ಬೆಂಗಳೂರಿನ ಡಾಲರ್ಸ್ ಕಾಲೋನಿಯ ತಮ್ಮ ನಿವಾಸದಲ್ಲಿ 17 ವರ್ಷದ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಆರೋಪ ಬಿಎಸ್‌ವೈ ಮೇಲಿದೆ. ಸಹಾಯ ಕೇಳಿ ಬಂದಾಗ ಯಡಿಯೂರಪ್ಪ ಅವರು ಮಗಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಿ ಮಾರ್ಚ್ 2024ರಲ್ಲಿ ಬಾಲಕಿಯ ತಾಯಿ ದೂರು ನೀಡಿದ್ದರು.

## ಪತ್ನಿ, ಮಗು ನದಿಗೆ ಹಾರಿ ಆತ್ಮಹತ್ಯೆ

ಮಹಿಳಾ ಪೊಲೀಸ್ ಠಾಣೆಗೆ ಬಂದು ದೂರು ನೀಡಿದ್ದರು. ಬಳಿಕ ಡೆತ್‌ನೋಟ್ ಬರೆದಿಟ್ಟು ಮಗುವಿನೊಂದಿಗೆ ವೀಡಿಯೋ ಮಾಡಿ ಮನೆಯಿಂದ ತೆರಳಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕುಟುಂಬಸ್ಥರು ಮಹಾದೇವಿಗಾಗಿ ಎಲ್ಲೆಡೆ ಹುಡುಕಾಟ ನಡೆಸಿದ್ದರು. ಅರಕಲಗೂಡು ತಾಲೂಕಿನ, ಬೆಟ್ಟಸೋಗೆ ಬಳಿ ಮಹಾದೇವಿ ಮೃತದೇಹ ಪತ್ತೆಯಾಗಿದೆ.

## ಪತ್ನಿ ಆರೋಗ್ಯ ವಿಚಾರಿಸಿದ ಸಿದ್ದು

ಶ್ವಾಸಕೋಶ ಸೋಂಕು ಇದೆ. ಈಗ ಸುಧಾರಣೆ ಕಾಣುತ್ತಿದೆ. ಇನ್ನೂ 2–3 ದಿನ ಆಸ್ಪತ್ರೆಯಲ್ಲಿ ಇರಬೇಕಾಗುತ್ತದೆ ಎಂದು ಹೇಳಿದರು.

# ನೆಲ, ಜಲ, ಭಾಷೆ ಉಳಿವಿಗೆ ಸಂಘಟನೆಗಳ ಪಾತ್ರ ದೊಡ್ಡದು: ಜಯಪ್ಪ ಹೊನ್ನಾಳಿ

## ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರ ಸನ್ಮಾನ ಸಮಾರಂಭ

ಮೈಸೂರು: ಕನ್ನಡ ನೆಲ, ಜಲ, ಭಾಷೆಯ ಉಳಿವಿಗಾಗಿ ಕನ್ನಡ ಪರ ಸಂಘಟನೆಗಳ ಪಾತ್ರ ದೊಡ್ಡದಾಗಿದ್ದು, ಕನ್ನಡದ ಸೈನಿಕರಾಗಿ ಕೆಲಸ ಮಾಡುತ್ತಿರುವುದರಿಂದಲೇ ಇಂದು ನಮ್ಮ ಕನ್ನಡ ಭಾಷೆ ಉಳಿಯಲು ಸಾಧ್ಯವಾಗಿದೆ ಎಂದು ಕವಿ ಡಾ.ಜಯಪ್ಪ ಹೊನ್ನಾಳಿ ಹೇಳಿದರು.

ನಗರದ ಕೃಷ್ಣಮರ?ತಿಪುರಂನಲ್ಲಿರುವ ನಮನ ಕಲಾ ಮಂಟಪದಲ್ಲಿ ಮಂಗಳವಾರ ಕನ್ನಡಾಂಬೆ ರಕ್ಷಣಾ ವೇದಿಕೆ ರ?ಪಡಿಸಿದ್ದ ಮೈಸೂರು ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕನ್ನಡಪರ ಸಂಘಟನೆಗಳ ತ್ಯಾಗ ದೊಡ್ಡದು, ಅವರ ಕನ್ನಡಪರ ನಿರಂತರ ಹೋರಾಟದಿಂದಲೇ ಇಂದು ಕನ್ನಡ ಉಳಿಯಲು ಸಾಧ್ಯವಾಗಿದೆ. ಕನ್ನಡಪರ ಸಂಘಟನೆಗಳ ಎಲ್ಲ ಹೋರಾಟಗಳಿಗೂ ಕನ್ನಡಾಭಿಮಾನಿಗಳು ಬೆಂಬಲ ನೀಡುವ ಮೂಲಕ ಅವರನ್ನು ಬೆಳೆಸಬೇಕು ಎಂದು ಸಲಹೆ ನೀಡಿದರು.

ಕನ್ನಡದ ಕಂದ ಮೂಗೂರು ನಂಜುಂಡಸ್ವಾಮಿ ಮಾತನಾಡಿ, ಕಳೆದ 40 ರ?ಷಗಳಿಂದ ಕನ್ನಡ ನೆಲ, ಜಲ, ಭಾಷೆಯ ಉಳಿವಿಗಾಗಿ ನಾವು ಹೋರಾಟ ಮಾಡುತ್ತಿದ್ದು, ನನ್ನ ಮೇಲೆ ನೂರಾರು ಕೇಸುಗಳನ್ನು ಹಾಕಲಾಗಿದೆ. ಪ್ರತಿನಿತ್ಯ ಕರ?ಟ್ ಕಚೇರಿ



ಅಲೆಯುವಂತಾಗಿದೆ. ಇಂದು ಕನ್ನಡದ ಪರ ಹೋರಾಟಗಾರರ ನೋವು ನಲಿವುಗಳನ್ನು ಯಾರೂ ಕೇಳುತ್ತಿಲ್ಲ, ಇದರಿಂದ ಕನ್ನಡಪರ ಹೋರಾಟಗಳಿಗೆ ಯುವ ಸಮೂಹ ಬರುತ್ತಿಲ್ಲ, ಆದಾಗ್ಯೂ ನಾವು ಈ ನಾಡು ಕಟ್ಟುವ ಕೆಲಸ ಮಾಡುತ್ತಿದ್ದೇವೆ. ಈ ನಿಟ್ಟಿನಲ್ಲಿ ಕನ್ನಡಾಂಬೆ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷರಾದ ಬಿ.ಬಿ.ರಾಜಶೇಖರ್ ಅವರು ನಿರಂತರವಾಗಿ ಒಂದಲ್ಲಾ ಒಂದು ಕನ್ನಡ ಪರ ಕರ?ಯಕ್ರಮಗಳನ್ನು ನಡೆಸುತ್ತಾ, ಕನ್ನಡಿಗರ ರಕ್ಷಣೆ ಮಾಡುತ್ತಿದ್ದಾರೆ. ಇತ್ತೀಚೆಗೆ ಅವರು ಕೈಗೆತ್ತಿಕೊಂಡ ಖಾಸಗಿ ಕರ?ಖಾನೆಗಳಲ್ಲಿ ಕನ್ನಡಿಗರಿಗೆ ಉದ್ಯೋಗ ನೀಡಬೇಕು ಎನ್ನುವ ಹೋರಾಟ ಸಾಕಷ್ಟು ಗಮನ ಸೆಳೆಯಿತು. ಶಾಸಕರಾದ ಜಿ.ಟಿ.ದೇವೇಗೌಡರು ಮತ್ತು ಮಾಜಿ ಸಂಸದರಾದ ಪ್ರತಾಪ್ ಸಿಂಹ ಅವರು ಸಹ ರಾಜಶೇಖರ್ ಅವರ ಕರ?ಯಕ್ರಮಗಳಲ್ಲಿ ಭಾಗಿಯಾಗಿದ್ದು, ಹೋರಾಟಕ್ಕೆ ಸಾಕಷ್ಟು ಶಕ್ತಿ ನೀಡಿತ್ತು, ನಾವು ಸದಾಕಾಲ ಕನ್ನಡಾಂಬೆ ರಕ್ಷಣಾ ವೇದಿಕೆಯ ಎಲ್ಲ ಹೋರಾಟಗಳಿಗೂ ಬೆಂಬಲ ನೀಡುತ್ತೇವೆ ಎಂದರು.

ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷರಾದ ಎಂ.ಚಂದ್ರಶೇಖರ್ ಮಾತನಾಡಿ, ಕನ್ನಡಪರ ಹೋರಾಟ ಪ್ರಾರಂಭವಾಗಿದ್ದೇ ಮೈಸೂರಿನಲ್ಲಿ, ಇಂತಹ ಸಾಂಸ್ಕೃತಿಕ ನೆಲದಲ್ಲಿ ಹಲವಾರು ಮಹನೀಯರು ಕನ್ನಡವನ್ನು ಕಟ್ಟಿ ಬೆಳೆಸಿದ್ದಾರೆ. ಇಂದಿನ ದಿನಗಳಲ್ಲಿ ಕನ್ನಡಿಗರಿಗೆ ಆಗುತ್ತಿರುವ ಅನ್ಯಾಯಗಳ ವಿರುದ್ಧ ಕನ್ನಡಾಂಬೆ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷರಾದ ಬಿ.ಬಿ.ರಾಜಶೇಖರ್ ಅವರ ಹೋರಾಟ ದೊಡ್ಡದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಇತ್ತೀಚೆಗೆ ಮೈಸೂರು ಜಿಲ್ಲಾಡಳಿತದಿಂದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕರವೇ ರಾಜ್ಯ ಖಜಾಂಚಿ ನಂಜುಂಡ ಮತ್ತು ಕರವೇ ಜಿಲ್ಲಾ ಗೌರವ ಕಾರ್ಯದರ್ಶಿ ಸಿಂಧುವಳ್ಳಿ ಶಿವಕುಮಾರ್ ಅವರನ್ನು ಗೌರವಿಸಲಾಯಿತು. ಈ ಸಂದರ್ಭದಲ್ಲಿ ರಾಜ್ಯಾಧ್ಯಕ್ಷ ಬಿ.ಬಿ.ರಾಜಶೇಖರ್, ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ಹೊನ್ನೇಗೌಡ, ಶಿವಣ್ಣ, ಶಿವಕುಮಾರ್, ಕಿರಣ, ಹರೀಶ್, ವತ್ಸಲ, ಸೌಭಾಗ್ಯ, ಲಕ್ಷ್ಮಿ, ಭಾಗ್ಯಮ್ಮ, ಲೋಕೇಶ್, ವಿಷ್ಣು, ಇನ್ನಿತರರು ಇದ್ದರು.

# ಪ್ರಕೃತಿ ಚಿಕಿತ್ಸೆ ಅರಿವು ಮೂಡಿಸಿ

ಮೈಸೂರು: ಪ್ರಕೃತಿ ಚಿಕಿತ್ಸೆಯ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವಂತೆ ಜೆಎಸ್‌ಎಸ್ ಆಯು ರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಸ್ವಸ್ಥ ವೃತ್ತ ಮತ್ತು ಯೋಗ ವಿಭಾಗದ ಮುಖ್ಯ ಸ್ಥರಾದ ಡಾ.ಸುಧಾಕರ್ ರೆಡ್ಡಿ ಕರೆ ನೀಡಿದರು.



ನಗರದ ಬೃಂದಾವನ ಬಡಾವಣೆಯಲ್ಲಿರುವ ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಮಂಗಳ ವಾರ ಏರ್ಪಡಿಸಿದ್ದ 8ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆಯಲ್ಲಿ ಮಾತನಾಡಿದ ಅವರು, ಪ್ರತಿಯೊಂದು ಮನೆಬಾಗಿಲಿಗೆ ಪ್ರಕೃತಿ ಚಿಕಿತ್ಸೆ ತಲುಪುವಂತೆ ಮಾಡಬೇಕು ಎಂಬುದು ಮಹಾತ್ಮ ಗಾಂಧಿ ಅವರ ಅಭಿಲಾಷೆ ಆಗಿತ್ತು. ಹೀಗಾಗಿ ಪ್ರಾಥಮಿಕ ಆರೋಗ್ಯ ಕ್ಷೇತ್ರದಲ್ಲಿ ಪ್ರಕೃತಿ ಚಿಕಿತ್ಸೆಯ ಮಹತ್ವವನ್ನು ಮನವರಿಕೆ ಮಾಡಿಕೊಡಿ ಎಂದರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತ ನಾಡಿ, ಪ್ರಕೃತಿ ಚಿಕಿತ್ಸೆ ಇತರೆ ವೈದ್ಯಕೀಯ ವಿಧಾನಗಳಿಗಿಂತ ಉತ್ತಮವಾಗಿದೆ. ಹೀಗಾಗಿ ಮಾನಸಿಕ ಮತ್ತು ದೈಹಿಕ ಆರೋಗ್ಯದ ಸದೃಢತೆಗಾಗಿ ಜನರು ಪ್ರಕೃತಿ ಚಿಕಿತ್ಸೆಯ ಮೇಲೆ ಒಲವು ತೋರುತ್ತಿದ್ದಾರೆ ಎಂದರು.

ಪ್ರಸ್ತುತ ಒತ್ತಡ ಜೀವನದಲ್ಲಿ ಅಡ್ಡ ಪರಿಣಾಮವಿಲ್ಲದ ಪ್ರಕೃತಿ ಚಿಕಿತ್ಸೆಯು ಜನರಿಗೆ ಸಮರ್ಪಕವಾಗಿ ದೊರೆಯುವಂತೆ ನೋಡಿಕೊ ಳ್ಳುತ್ತಿರುವ ಎಲ್ಲಾ ವೈದ್ಯರನ್ನು ಅಭಿನಂದಿಸಿದರು. ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ.ಕೆ.ವಿ.ವೆಂಕಟಕೃಷ್ಣ ಮಾತನಾಡಿ, ಮಹಾತ್ಮ ಗಾಂಧೀಜಿಯವರು ಪ್ರಕೃತಿ ಚಿಕಿತ್ಸೆಯ ಮೇಲೆ ಇಟ್ಟಿದಂತಹ ಅಛಲವಾದ ನಂಬಿಕೆಯನ್ನು ನಾವು ಇಂದು ಹಳವಡಿಸಿಕೊಳ್ಳುವ ಅವಶ್ಯಕತೆ ಇದೆ. ವಾಸ್ತವಿಕ ಪ್ರಪಂಚದಲ್ಲಿ ಜೀವನಶೈಲಿ ಯಿಂದ ಉಂಟಾಗುತ್ತಿರುವ ಖಾಯಿಲೆಗಳಿಗೆ ಪರಿಹಾರವಿರುವುದು ಭಾರತೀಯ ವೈದ್ಯಪದ್ಧತಿಯಲ್ಲಿ ಮಾತ್ರ. ಪ್ರಕೃತಿ ಚಿಕಿತ್ಸಾ ಪದ್ಧತಿಯನ್ನು ಪ್ರಮಾಣಾಧಾರಿತ ಮಾಡಲು ಅನುಸಂದಾನದ ಅಗತ್ಯತೆ ಇದೆ. ಪ್ರಕೃತಿ ಮತ್ತು ಮನುಷ್ಯನ ಸಂಬಂಧವನ್ನು ತಿಳಿಸುತ್ತಾ ಅದರೊಂದಿಗೆ ಅನುಸರಿಸಿ ಬದುಕುವುದೇ ಚಿಕಿತ್ಸಾ ಕ್ರಮ ಎಂದರು

ಸಹಾಯಕ ಪ್ರಾಧ್ಯಾಪಕ ಡಾ.ಎಸ್. ಸಂದೀಪ್ ಪ್ರಾಸ್ತಾವಿಕ ಭಾಷಣ ಮಾಡಿ, ಪ್ರತಿ ವರ್ಷ ನ.18ರಂದು ರಾಷ್ಟ್ರೀಯ ಪ್ರಕೃತಿ ದಿನ ಆಚರಿಸಲಾಗುತ್ತದೆ. ಈ ದಿನವನ್ನು 2018 ರಿಂದ ಅಧಿಕೃತವಾಗಿ ಕೇಂದ್ರದ ಆಯುಷ್ ಸಚಿವಾಲಯ ಘೋಷಿಸಿದೆ. ಪ್ರಕೃತಿ ಚಿಕಿತ್ಸೆಯ ತತ್ವಗಳನ್ನು ಜನರಿಗೆ ಪರಿಚಯಿಸಲು ಹಾಗೂ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವ ಪ್ರಕೃತಿ ವಿಧಾನಗಳ ಬಗ್ಗೆ ಜಾಗೃತಿ ಮೂಡಿಸು ವುದು ಈ ದಿನದ ಉದ್ದೇಶವಾಗಿದೆ ಎಂದರು. ನಂಜುಂಡಸ್ವಾಮಿ, ಸುಜಾತಾ, ಕಾಲೇಜಿನ ನಿವಾಸಿ ವೈದ್ಯಾಧಿಕಾರಿ ಡಾ.ಡಿ.ಎಸ್ ಭಾರತೀಶ್, ಸಹಾಯಕ ಪ್ರಾಧ್ಯಾಪಕಿ ಡಾ. ಆರ್.ಲಕ್ಷ್ಮಿ ಇನ್ನಿತರರು ಉಪಸ್ಥಿತರಿದ್ದರು.

# ಗಿಡ–ಗಂಟಿ ತೆರವುಗೊಳಿಸಲು ಆಗ್ರಹ

ರಾಮನಗರ: ಜಿಲ್ಲಾಪಂಚಾಯ್ತಿ ವ್ಯಾಪ್ತಿಯ ರಸ್ತೆ ಬದಿ ಗಳಲ್ಲಿ ಬೆಳೆದಿರುವ ಗಿಡ ಗಂಟಿಗಳನ್ನು ತೆರವುಗೊಳಿ ಸುವಂತೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜಿ.ಎನ್.ನಟರಾಜು (ಗಾಣಕಲ್) ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಸಾರ್ವಜನಿಕರ ಪರವಾಗಿ ಪತ್ರ ಬರೆದಿದ್ದಾರೆ.



ಈ ಸಂಬಂಧ ಸುದ್ದಿಗಾರರೊಂದಿಗೆ ಮಾತನಾಡಿ ರುವ ಅವರು, ಇಡೀ ಜಿಲ್ಲೆಯಲ್ಲಿ ಜಿಪಂ ವ್ಯಾಪ್ತಿಯ ಬಹುತೇಕ ರಸ್ತೆಗಳ ಎರಡೂ ಬದಿಗಳಲ್ಲಿ ಗಿಡ–ಗಂಟಿಗಳು ಯಥೇಚ್ಛವಾಗಿ ಬೆಳೆದು ವಾಹನ ಸಂಚಾ ರಕ್ಕೆ ಅಡ್ಡಿಪಡಿಸುತ್ತಿವೆ. ರಸ್ತೆ ಕಾಣದೆ ಅಪಘಾತಗಳಿಗೂ ಕಾರಣವಾಗುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿಯವರು ನಡೆಸಿದ ಕೆಡಿಪಿ ಸಭೆಯಲ್ಲಿಯೂ ತಾವು ಈ ವಿಚಾರ ವನ್ನು ಪ್ರಸ್ತಾಪಿಸಿದ್ದಾಗಿ, ಸಚಿವರು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್‌ವರಿಷ್ಠಾಧಿಕಾರಿಗಳಿಗೆ ಮೌಖಿಕ ಸೂಚನೆ ಕೊಟ್ಟು ಗಿಡ–ಗಂಟಿಗಳನ್ನು ತೆರವುಗೊಳಿಸುವಂತೆ ತಿಳಿಸಿ ದ್ದರು. ಸಧ್ಯ ಪಿ.ಡಬ್ಲ್ಯು.ಡಿ ಸುಪರ್ದಿನಲ್ಲಿರುವ ರಸ್ತೆಗಳಲ್ಲಿ ಗಿಡ–ಗಂಟಿಗಳನ್ನು ತೆರವುಗೊಳಿಸುವ ಕಾರ್ಯಪ್ರಗತಿಯ ಲ್ಲಿದೆ. ಆದರೆ ಗ್ರಾಮ ಪಂಚಾಯ್ತಿ ಹಾಗೂ



ಜಿಲ್ಲಾ ಪಂಚಾಯತ್ ವ್ಯಾಪ್ತಿಯ ರಸ್ತೆಗಳಲ್ಲಿ ಈ ಕಾರ್ಯ ಆರಂಭವಾಗಿಲ್ಲ. ಸಾರ್ವಜನಿಕರ ಹಿತದೃಷ್ಟಿಯಿಂದ ತ್ವರಿತಗತಿ ಯಲ್ಲಿ ಗಿಡ–ಗಂಟಿಗಳ ತೆರವುಗೊಳಿಸುವ ಕಾರ್ಯ ಆರಂಭವಾಗಬೇಕಾಗಿದೆ. ಹೀಗಾಗಿಯೇ ತಾವು ಮುಖ್ಯ ಕಾರ್ಯನಿರ್ವಹಣಾಧಿ ಕಾರಿಗಳಿಗೆ (ಸಿಇಒ) ಪತ್ರ ಬರೆದಿರುವುದಾಗಿ, ಸಿಇಒ ಅವರು ತಕ್ಷಣ ಎಲ್ಲ ಪಿಡಿಒಗಳು ಹಾಗೂ ಸಂಬಂಧಿಸಿದ ಎಲ್ಲ ಅಧಿಕಾರಿಗಳಿಗೆ ಆದೇಶ ರವಾನಿಸಿ ರಸ್ತೆ ಬದಿಗಳನ್ನು ಸ್ವಚ್ಛಗೊಳಿಸಲು ತಿಳಿಸಬೇಕು ಎಂದು ಗಾಣಕಲ್ ನಟರಾಜ್ ಆಗ್ರಹಿಸಿ ದರು. ಗಿಡ–ಗಂಟೆಗಳ ತೆರವುಕಾರ್ಯಕ್ಕೆ ಸಂಬಂಧಿಸಿ ದಂತೆ ತಾಲ್ಲೂಕುವಾರು ನೋಡಲ್ ಅಧಿಕಾರಿಗಳನ್ನು ಸಿಇಒ ಅವರು ನೇಮಿಸಬೇಕು ಎಂದು ಸಲಹೆ ನೀಡಿರುವ ಅವರು, ಸಾರ್ವಜನಿಕರ ಸುರಕ್ಷತೆಯ ಉದ್ದೇಶದಲ್ಲಿ ರಸ್ತೆಬದಿಗಳು ಸ್ವಚ್ಛಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

**ಮೊದಲ ಪುಟದಿಂದ**

## ಕರ್ನಾಟಕ ತಂತ್ರಜ್ಞಾನದ ಶಕ್ತಿ ಕೇಂದ್ರ

ಕ್ವಾಂಟಮ್ ತಂತ್ರಜ್ಞಾನಗಳಿಗೆ ಮೀಸಲಾದ ಮಾರ್ಗಸೂಚಿಯನ್ನು ಪ್ರಾರಂಭಿಸಿದ ಭಾರತದ ಮೊದಲ ರಾಜ್ಯ ಕರ್ನಾಟಕ. ಬೆಂಗಳೂರಿನಾಚೆಗೆ ನಾವು ದ್ವಿತೀಯ ದರ್ಜೆಯ ನಗರಗಳನ್ನು ಮುಂದಿನ ಪೀಳಿಗೆಯ ನಾವೀನ್ಯತೆ ಸಮೂಹಗಳಾಗಿ ಅಭಿವೃದ್ಧಿಪಡಿಸುವ ಮೂಲಕ ನಮ್ಮ ತಂತ್ರಜ್ಞಾನ ಆರ್ಥಿಕತೆಯನ್ನು ಪ್ರಜ್ಞಾಪೂರ್ವಕವಾಗಿ ವಿಕೇಂದ್ರೀಕರಿಸುತ್ತಿದ್ದೇವೆ. ಇದು ಕೇವಲ ಆರ್ಥಿಕ ತಂತ್ರವಲ್ಲ, ಇದು ಸಮಾನ ಬೆಳವಣಿಗೆಗೆ ಬದ್ಧವಾಗಿದೆ ಎಂದು ಹೇಳಿದರು. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಐಟಿ–ಬಿಟಿ ಸಚಿವ ಪ್ರಿಯಾಂಕ್ ಖರ್ಗೆ, ಕಿಯೋನಿಕ್ಸ್ ಅಧ್ಯಕ್ಷ ಶರತ್ ಬಚ್ಚೇಗೌಡ, ನಾರ್ವೆ ಸಚಿವ ಜಾನ್ ಕ್ರಿಶ್ಚಿಯನ್ ವೆಸ್ಟ್ರೆ, ಆಸ್ಟ್ರೇಲಿಯಾದ ಮೆಲ್ಬೋರ್ನ್ ಲಾರ್ಡ್ ಮೇಯರ್ ನಿಕೋಲಸ್ ರೀಸ್ ಮತ್ತು ಲಾರ್ಡ್ ಮೇಯರ್ ಉಪಸ್ಥಿತರಿದ್ದರು.


## ಮೂರು ಹೆಸರಿನವರೂ ಒಬ್ಬರೇ

ಮೈಸೂರು ನಜರ್‌ಬಾದ್ ಶಾಲಿವಾಹನ ರಸ್ತೆ 2ನೇ ನಂಬರ್ ಮನೆಯಲ್ಲಿ ವಾಸವಾಗಿರುವ ಲೇಟ್ ವೆಂಕಟಾಚಲಪತಿ ಅವರ ಪತ್ನಿ **ಪ್ರಮದಕುಮಾರಿ** ಆದ ನನ್ನ ಹೆಸರು ಆಧಾರ್ ಕಾರ್ಡ್ ಮತ್ತು ಓಟರ್ ಐಡಿಯಲ್ಲಿ **ಬಿ.ಎ.ಪ್ರಮದ** ಎಂದು ನಮೂದಾಗಿರುತ್ತದೆ. ಹಾಗೂ ಕೆ.ಆರ್.ಸರ್ಕಲ್‌ನಲ್ಲಿರುವ ಎಸ್.ಕೆ.ಪಿ.ಸಿ. ಬ್ಯಾಂಕ್‌ನ ಷೇರಿನಲ್ಲಿ **ಬಿ.ಎ.ಪ್ರಮದ ಕುಮಾರಿ** ಎಂದು ಸಹಿ ಮಾಡಿರುತ್ತೇನೆ. ಮೇಲ್ಕಂಡ ಮೂರು ಹೆಸರಿನವರೂ ಒಬ್ಬರೇ ಎಂದು ನೋಟರಿ ಎಲ್.ಎನ್. ರಾಜೇಂದ್ರನ್ ಅವರ ಸಮಕ್ಷಮ ಘೋಷಿಸಿಕೊಂಡಿರುತ್ತೇನೆ.

ಸಹಿ/–ಬಿ.ಎ.ಪ್ರಮದಕುಮಾರಿ



**ನಗರಸಭಾ ಕಾರ್ಯಾಲಯ, ಹೂಟಗಳ್ಳಿ**
ಎಸ್.ಆರ್.ಎಸ್. ಎದುರು, ಹೈಟೆನ್ಷನ್ ಜೋಡಿ ರಸ್ತೆ,
ಹೂಟಗಳ್ಳಿ, ಮೈಸೂರು ಜಿಲ್ಲೆ –570018
ಸ.ಸಂ.: 0821–2001737 ka.hootagalli.cmc@gmail.com
ಸಂ:ನಸಹೂ/ಆಶಾ/ಸಿಆರ್–01/2025–26 ದಿನಾಂಕ: 14.11.2025

**ಪತ್ರಿಕಾ ಪ್ರಕಟಣೆ**

ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರಿಗೆ ಈ ಮೂಲಕ ತಿಳಿಸುವುದೇನೆಂದರೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ 5/2025 ರಲ್ಲಿ ನೀಡಿರುವ ನಿರ್ದೇಶನದಂತೆ ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಮುಖ್ಯಾಧಿಕಾರಿ/ಪೌರಾಯುಕ್ತರಿಗೆ ತಿಳಿಸುವುದು. **1)** ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮ ವಹಿಸುವುದು. **2)** ನಗರ ಸ್ಥಳೀಯ ಸಂಸ್ಥೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗು ಅವುಗಳ ಪ್ರವೇಶ ನಿರ್ಬಂಧಿಸುವದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡುವುದು. **3)** ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನ: ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. **4)** ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮ ವಹಿಸಲಾಗುವುದು.

ಸಹಿ/– ಪೌರಾಯುಕ್ತರು

DIPR/DDMYS/1234/KSMCA/689/2025-26

# ಸಾಲುಮರದ ತಿಮ್ಮಕ್ಕನ ನಿಧನ ಸಮಾಜಕ್ಕೆ ತುಂಬಲಾರದ ನಷ್ಟ



ಚನ್ನಪಟ್ಟಣ: ಹಳ್ಳಿಯಲ್ಲಿ ಹುಟ್ಟಿ ವೃಕ್ಷಮಾತೆಯಾಗಿ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾಗಿ, ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡ ಸಾಧಕಿ ಶತಾಯುಷಿಗಳಾದ ಸಾಲುಮರದ ಡಾ. ತಿಮ್ಮಕ್ಕ ಅವರ ನಿಧನ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಕಸ್ತೂರಿ ಕರ್ನಾಟಕ ಜನಪರ ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡರು ಅಭಿಪ್ರಾಯಿಸಿದರು.

ಪಟ್ಟಣದ ಜ್ಞಾನ ಸರೋವರ ಕಾಲೇಜಿನಲ್ಲಿ ಕಾಲೇಜು ಮತ್ತು ಕಸ್ತೂರಿ ಕರ್ನಾಟಕ ಜನಪರ ವೇದಿಕೆಯಿಂದ ಶುಕ್ರವಾರ ನಿಧನರಾದ ಶತಾಯುಷಿ ಡಾ. ಸಾಲುಮರದ ತಿಮ್ಮಕ್ಕ ಅವರ ನಿಧನಕ್ಕೆ ಶ್ರದ್ಧಾಂಜಲಿ ಅರ್ಪಿಸಿ ಮಾತನಾಡಿದ ಅವರು, ಜಿಲ್ಲೆಯ ಮಾಗಡಿಯಲ್ಲಿನ ಗ್ರಾಮೀಣ ಪ್ರದೇಶದಲ್ಲಿ ಹುಟ್ಟಿ ಮಕ್ಕಳಿಲ್ಲದ ಬಂಜೆ ಎಂದು ಸಮಾಜದ ಜನರಿಂದ ಅವಮಾನ ಎದುರಿಸಿದ್ದ ಸಾಲುಮರದ ತಿಮ್ಮಕ್ಕ ದಂಪತಿಗಳು ರಸ್ತೆಗಳಲ್ಲಿ ಸಸಿಗಳನ್ನು ನೆಟ್ಟು ಮಕ್ಕಳಂತೆ ಪೋಷಣೆ ಮಾಡಿ ಇಂದು ಅಂತರಾಷ್ಟ್ರೀಯ ಮಟ್ಟದಲ್ಲಿ ನೂರು ಸಾಧಕ ಮಹಿಳೆಯರಲ್ಲಿ ಒಬ್ಬರಾಗಿ ಗುರುತಿಸಿಕೊಂಡಿರುವ ಡಾ. ಸಾಲುಮರದ ತಿಮ್ಮಕ್ಕ ಅವರ ನಿಧನ ಸಮಾಜಕ್ಕೆ ತುಂಬಲಾರದ ನಷ್ಟ ಉಂಟಾಗಿದೆ. ಸರ್ಕಾರ ಇವರ ಹೆಸರನ್ನು ಶಾಶ್ವತವಾಗಿ ಉಳಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದರು.

ನಿವೃತ್ತ ಪ್ರಾಂಶುಪಾಲರಾದ ನಿಂಗೇಗೌಡರು (ಎನ್‌ಜಿ) ಮಾತನಾಡಿ, ಸಾಲುಮರದ ತಿಮ್ಮಕ್ಕ ಅವರು ಹಳ್ಳಿಯ ಸಾಮಾನ್ಯ ಮಹಿಳೆಯಾಗಿ ಇಂದು ಅಂತರಾಷ್ಟ್ರೀಯ ಮಟ್ಟದಲ್ಲಿನ ಸಾಧಕ ಮಹಿಳೆಯರಲ್ಲಿ ಒಬ್ಬರಾಗಿ ಸಾಧನೆ ಮಾಡಿದ್ದಾರೆ ಎಂದರೆ ಅದಕ್ಕೆ ಅವರ ಶ್ರಮ ಮತ್ತು ಇಚ್ಛಾಶಕ್ತಿಯೇ ಕಾರಣ. ಕೂಲಿನಾಲಿ ಮಾಡಿ ಜೀವನ ಮಾಡುತ್ತಿದ್ದ ತಿಮ್ಮಕ್ಕ ಮಕ್ಕಳಿಲ್ಲದ ನೋವನ್ನು ಮರೆಯಲು ರಸ್ತೆ ಬದಿಯಲ್ಲಿ ಸಾವಿರಾರು ಸಸಿಗಳನ್ನು ನೆಟ್ಟು ನೀರಿಕ್ಕಿ ಪೋಷಣೆ ಮಾಡಿ ದೊಡ್ಡ ಮರಗಳನ್ನಾಗಿಸಿದ್ದಾರೆ. ಅವರ ಮಾರ್ಗದರ್ಶನ ಇಂದಿನ ಯುವ ಪೀಳಿಗೆಗೆ ಮಾದರಿಯಾಗಿದೆ ಎಂದರು.

ಜ್ಞಾನ ಸರೋವರ ಕಾಲೇಜಿನ ಪ್ರಾಂಶುಪಾಲರಾದ ಹೇಮಲತಾ ಅವರು ಮಾತನಾಡಿ, ಇಂದು ಪರಿಸರ ಸಂರಕ್ಷಣೆಯ ಹೆಸರಲ್ಲಿ ಇಂದು ಸಸಿಗಳನ್ನು ನೆಟ್ಟು ಪ್ರಚಾರ ಪಡೆದು ಹೋಗುತ್ತಾರೆ ಆದರೆ ಆ ಸಸಿ ನೀರಿ ಪೋಷಣೆ ಇಲ್ಲದೆ ಕೆಲವೇ ದಿನದಲಿ ಒಣಗುತ್ತದೆ. ಆದರೆ ಸಾಲುಮರದ ತಿಮ್ಮಕ್ಕ ಅವರು ಹೆತ್ತ ಮಕ್ಕಳಿಗೆ ಸಮಯಕ್ಕೆ ಸರಿಯಾಗಿ ಊಟ ಉಪಚಾರ ಮಾಡುವಂತೆ ತಾವು ನೆಟ್ಟ ಸಸಿಗಳಿಗೆ ನೀರು, ಗೊಬ್ಬರ ಕೊಟ್ಟು ರಕ್ಷಣೆ ಮಾಡಿ ಪೋಷಣೆ ಮಾಡಿದ್ದಾರೆ. ಇಂದು ಶುದ್ಧಗಾಳಿಯನ್ನು ಹಣಕ್ಕೆ ಮಾರಿಕೊಳ್ಳುವ ಜನರಿದ್ದಾರೆ ಆದರೆ. ಸಾಲುಮರದ ತಿಮ್ಮಕ್ಕ ಅವರು ನೆಟ್ಟು ಪೋಷಣೆ ಮಾಡಿದ ಮರಗಳು ಹೆಮ್ಮರವಾಗಿಸಿ ಕೋಟ್ಯಾಂತರ ಜನರಿಗೆ ಶುದ್ಧ ಗಾಳಿಯನ್ನು ಕೊಡುತ್ತಿದೆ. ಅದು ಅವರ ನಿಸ್ವಾರ್ಥ ಸೇವೆಗೆ ಸಾಕಷಿಯಾಗಿದೆ. ಸ್ವಾರ್ಥ ಇಲ್ಲದೆ ಸಮಾಜಕ್ಕೆ ಯಾರು ಸೇವೆ ನೀಡುತ್ತಾರೋ ಅವರು ಸಾಧಕರಾಗಿ ಬೆಳೆಯುತ್ತಾರೆ ಎಂಬುದಕ್ಕೆ ಇಂದು ನಾವು ಶ್ರದ್ಧಾಂಜಲಿ ಸಲ್ಲಿಸುತ್ತಿರುವ ಸಾಲುಮರದ ತಿಮ್ಮಕ್ಕ ಅವರು ಸಾಕ್ಷಿಯಾಗಿದ್ದಾರೆ. ಅವರ ಮಾರ್ಗದರ್ಶನಲ್ಲಿ ನಾವೂ ಸಹ ಸಮಾಜಕ್ಕೆ ಏನಾದರೂ ಕೊಡುಗೆ ನೀಡಬೇಕು ಎಂಬುದು ನಮ್ಮ ಗುರಿಯಾದರೆ ಮಾತ್ರ ನಾವು ಸಹ ಏನಾದರೂ ಸಾಧನೆ ಮಾಡಲು ಸಾಧ್ಯ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಸಂದರ್ಭದಲ್ಲಿ ಕಾಲೇಜಿನ ಉಪನ್ಯಾಸಕರಾದ ಹೊಳೆಸಾಲಯ್ಯ ಅವರು ಸಾಲು ಮರದ ತಿಮ್ಮಕ್ಕ ಅವರ ನಿಧನಕ್ಕೆ ಗೀತೆಯ ಮೂಲಕ ನುಡಿನಮನ ಸಲ್ಲಿಸಿದರು. ಸಂದರ್ಭದಲ್ಲಿ ಉಪನ್ಯಾಸಕರುಗಳಾದ ಜಾಕೀರ್‌ಹುಸೇನ್ ಹೆಚ್.ಎಸ್., ಚನ್ನಂಕೇಗೌಡ, ಶಶಿಕುಮಾರ್, ನಿವೇದಿತಾ, ಸೌಮ್ಯ, ತನುಶ್ರೀ, ಶ್ರೇಯಸ್ವಿನಿ, ಭಾವನಾ, ಚಂದನ ಉಪಸ್ಥಿತರಿದ್ದರು.

## ಸೋಮನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಆಯ್ಕೆ

# ಅಂಬಿಗರಹಳ್ಳಿ ಎ.ಪಿ.ಮಧುಸೂಧನ್ ಅವಿರೋಧವಾಗಿ ಆಯ್ಕೆ




ಕೆ.ಆರ್.ಪೇಟೆ: ತಾಲ್ಲೂಕಿನ ಸೋಮನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಅಂಬಿಗರಹಳ್ಳಿ ಎ.ಪಿ.ಮಧುಸೂಧನ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಅದೇ ರೀತಿ ಸಂಘದ ಉಪಾಧ್ಯಕ್ಷರಾಗಿ ಪುರ ಪಿ.ಎಂ.ಶಿವಪ್ಪ ಅವರು ಆಯ್ಕೆಯಾಗಿದ್ದಾರೆ. ಸಂಘದ ಈ ಹಿಂದಿನ ಅಧ್ಯಕ್ಷರಾದ ಸೋಮನಹಳ್ಳಿ ಎಸ್.ಸಿ.ಬೋಜರಾಜು ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಇಂದು ಚುನಾವಣೆ ನಿಗದಿಯಾಗಿತ್ತು. ಅಧ್ಯಕ್ಷ ಸ್ಥಾನ ಬಯಸಿ ಎ.ಪಿ.ಮಧುಸೂಧನ್ ಹೊರತುಪಡಿಸಿ ಉಳಿದ ಯಾವುದೇ ನಿರ್ದೇಶಕರು ನಾಮಪತ್ರ ಸಲ್ಲಿಸದೇ ಇರುವ ಕಾರಣ ಚುನಾವಣಾ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಸಂಘದ ಕಾರ್ಯನಿರ್ವಹಣಾಧಿಕಾರಿ ಎಸ್.ಹೆಚ್.ಮಂಜೇಗೌಡ ಅವರು ಸಂಘದ ನೂತನ ಅಧ್ಯಕ್ಷರಾಗಿ ಎ.ಪಿ ಮಧುಸೂಧನ್ ಅವಿರೋಧವಾಗಿ ಆಯ್ಕೆಯಾಗಿರುವುದಾಗಿ ಘೋಷಿಸಿದರು. ನೂತನ ಅಧ್ಯಕ್ಷರಾದ ಎ.ಪಿ. ಮಧುಸೂಧನ್ ಮಾತನಾಡಿ ಸಂಘದ ಅಧ್ಯಕ್ಷೆ ಸ್ಥಾನಕ್ಕೆ ನನ್ನನ್ನು ಅವಿರೋಧವಾಗಿ ಆಯ್ಕೆ ಮಾಡಿದ ಸಂಘದ ನಿರ್ದೇಶಕರುಗಳಿಗೆ ಹಾಗೂ ಸಂಘದ ವ್ಯಾಪ್ತಿಯ ಸೋಮನಹಳ್ಳಿ, ಅಂಬಿಗರಹಳ್ಳಿ, ಪುರ, ಸಂಗಾಪುರ ಗ್ರಾಮಗಳ ಮುಖಂಡರು ಹಾಗೂ ಯಜಮಾನರುಗಳಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನ ಎಂದರು. ನನಗೆ ಸಿಕ್ಕಿರುವ ಅಧಿಕಾರದ ಅವಧಿಯಲ್ಲಿ ಎಲ್ಲಾ ನಿರ್ದೇಶಕರು ಹಾಗೂ ನೌಕರರ ಸಹಕಾರದಿಂದ ಸಂಘದಿಂದ ರೈತರು ಹಾಗೂ ಸಾರ್ವಜನಿಕರಿಗೆ ತಲುಪಿಸುವ ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತೇನೆ. ನನ್ನ ಮೇಲೆ ಸಹಕಾರಿ ಬಂಧುಗಳು ಇಟ್ಟಿರುವ ನಂಬಿಕೆಯನ್ನು ಹುಸಿಗೊಳಿಸದೇ ಉತ್ತಮ ಆಡಳಿತ ನೀಡುವ ಮೂಲಕ ಅವರ ನಂಬಿಕೆಯನ್ನು ಉಳಿಸಿಕೊಳ್ಳುತ್ತೇನೆ ಎಂದು ಭರವಸೆ ನೀಡಿದರು.

ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಆಯ್ಕೆ ಘೋಷಣೆ ಆಗುತ್ತಿದ್ದಂತೆಯೇ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಸಂಘದ ಆವರಣದಲ್ಲಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಸಂಘದ ನಿರ್ದೇಶಕರಾದ ಸಂಗಾಪುರ ಎಸ್.ಕೆ.ಸಿದ್ದೇಗೌಡ, ಸೋಮನಹಳ್ಳಿ ಎಸ್.ಪಿ.ಬಸವರಾಜು, ಈರೇಗೌಡ, ಅಂಬಿಗರಹಳ್ಳಿ ನಾರಾಯಣಗೌಡ, ಪುರ ಪಿ.ಪಿ.ಶಶಿಕುಮಾರ್, ಪುರ ರತ್ನಮ್ಮ, ಸೋಮನಹಳ್ಳಿ ಭಾಗ್ಯ, ಸುಮ, ಎಸ್.ಪಿ.ಮದನ್‌ಕುಮಾರ್, ಸಂಘದ ಮೇಲ್ವಿಚಾರಕ ಡಿಸಿಸಿ ಬ್ಯಾಂಕ್ ಅಧಿಕಾರಿ ಆರ್.ಜಲೇಂದ್ರ, ಸಂಘದ ಸಿಇಓ ಎಸ್.ಹೆಚ್.ಮಂಜೇಗೌಡ, ಮಾರಾಟ ಗುಮಾಸ್ತರಾದ ಜಿ.ಕುಮಾರ್, ಸಚಿನ್, ಶೇಷೇಗೌಡ, ಸೇರಿದಂತೆ ಸಂಘದ ವ್ಯಾಪ್ತಿಯ ಸೋಮನಹಳ್ಳಿ, ಅಂಬಿಗರಹಳ್ಳಿ, ಪುರ, ಸಂಗಾಪುರ ಗ್ರಾಮಗಳ ಯಜಮಾನರುಗಳು ಹಾಗೂ ಮುಖಂಡರು ಉಪಸ್ಥಿತರಿದ್ದು ನೂತನ ಅಧ್ಯಕ್ಷರು ಮತ್ತು ಉಪಾಧ್ಯಕ್ಷರನ್ನು ಅಭಿನಂದಿಸಿದರು.

## ಇಂದು ವಿದ್ಯುತ್ ವ್ಯತ್ಯಯ

ತಿ.ನರಸೀಪುರ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಮೈಸೂರು 66 ಕೆ.ವಿ ವಿದ್ಯುತ್ ಮಾರ್ಗದ ತಪಾಸಣೆ ಮತ್ತು ತ್ರೈಮಾಸಿಕ ನಿರ್ವಾಹಣಾ ಕಾಮಗಾರಿಯನ್ನು ಹಮ್ಮಿಕೊಂಡಿರುವ ಹಿನ್ನೆಲೆಯಲ್ಲಿ ಬನ್ನೂರು ಉಪವಿಭಾಗ ವ್ಯಾಪ್ತಿಯ 66/11ಕೆ.ವಿ ಗಾಮನಹಳ್ಳಿ ವಿದ್ಯುತ್ ವಿತರಣ ಕೇಂದ್ರದಿಂದ ಹೊರಹೊಮ್ಮುವ 11ಕೆ.ವಿ ಮಾರ್ಗಗಳು. ತುರುಗನೂರು ವಿದ್ಯುತ್ ಸರಬರಾಜು ಹೊಂದಿರುವ ಗ್ರಾಮಗಳಿಗೆ ನ.19 ರಂದು ಬೆಳಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ 66/11 ಕೆ.ವಿ ಚಾಮಲಾಪುರ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಮ್ಮುವ 11ಕೆ.ವಿ ಮಾರ್ಗಗಳಾದ ಬಿ.ಸೀಹಳ್ಳಿ ಎನ್ ಜೆ ವೈ ಮತ್ತು ಅರವಟ್ಟಿಗೆ ಕೊಪ್ಪಲು ಎನ್ ಜೆವೈಯಿಂದ ವಿದ್ಯುತ್ ಸರಬರಾಜು ಗ್ರಾಮಗಳಾದ ಚಾಮಲಾಪುರ, ಬಿ.ಸೀಹಳ್ಳಿ, ಕೊಡಗಳ್ಳಿ, ಅರವಟ್ಟಿಗೆ ಕೊಪ್ಪಲು, ಭುಗತಹಳ್ಳಿ, ಗಾಡಿಜೋಗಿ ಹುಂಡಿ, ಮಾದಿಗಹಳ್ಳಿ ಮತ್ತು ಹುಣಸಗಹಳ್ಳಿಗಳಲ್ಲಿವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಮತ್ತು 11ಕೆ.ವಿ ಕೊಡೀರಪ್ಪ ಐ.ಪಿ, ಮಹದೇಶ್ವರ ಐ.ಪಿ ಹಾಗೂ ಹುಚ್ಚಮ್ಮ ಐಪಿ, ವಿದ್ಯುತ್ ಮಾರ್ಗಗಳಿಗೆ ಹಗಲಿನ ವೇಳೆಯಲ್ಲಿ ನೀಡುವ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಅದೇ ದಿನ ನ.19 ರ ಬೆಳಗ್ಗೆ 10 ರಿಂದ ಸಂಜೆ 6 ರವರೆಗೆ 66/11 ಕೆ.ವಿ. ಗಾಮನಹಳ್ಳಿ ವಿದ್ಯುತ್ ವಿತರಣಾ ಕೇಂದ್ರಕ್ಕೆ ಒಳಪಡುವ ಪ್ರದೇಶಗಳಾದ ಅಂಕನಹಳ್ಳಿ, ಕೆಂಪೇಗೌಡನಕೊಪ್ಪಲು, ಮಣಸಿಕ್ಯಾತನಹಳ್ಳಿ, ಜೇನುಗುಡ್ಡೆ, ಕರಿಹುರುಳಿಕೊಪ್ಪಲು, ದೊಡ್ಡಮುಲಗೂಡು, ನುಗ್ಗಹಳ್ಳಿಕೊಪ್ಪಲು. ಸುಲ್ತಾನ್ ರಸ್ತೆಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಮತ್ತು 11ಕೆ.ವಿ ಗೊರವನಹಳ್ಳಿ ಐಪಿ, ಅಂಕನಹಳ್ಳಿ ಐಪಿ, ಯಾಚೇನಹಳ್ಳಿ ಐಪಿ, ಡಿಂಕದಮ್ಮ ಐಪಿ, ಹಾಗೂ ಮಾರಗೌಡನಹಳ್ಳಿ ಐಪಿ, ವಿದ್ಯುತ್ ಮಾರ್ಗಗಳಿಗೆ ಹಗಲಿನ ವೇಳೆಯಲ್ಲಿ ನೀಡುವ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುವುದರಿಂದ ಸಾರ್ವಜನಿಕರು ಹಾಗೂ ರೈತರು ಸಹಕರಿಸುವಂತೆ ಬನ್ನೂರು ಸೆಸ್ಕ್ ಎಇಇ ಹರ್ಷನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಆರೋಪಿಗಳಿಗೆ ಮಂಪರು ಪರೀಕ್ಷೆಯಾಗಲು ಒತ್ತಾಯ

## ಅಂಬೇಡ್ಕರ್ ಪ್ರತಿಮೆ, ಬುದ್ದ ವಿಗ್ರಹಗಳಿಗೆ ಅಪಮಾನ ಪ್ರಕರಣ

ಚಾಮರಾಜನಗರ, ಇತ್ತೀಚೆಗೆ ಜಿಲ್ಲೆಯಾದ್ಯಂತ ಅಂಬೇಡ್ಕರ್ ಹಾಗು ಬುದ್ದ ಪ್ರತಿಮೆಗಳ ವಿರೂಪ ಹಾಗೂ ಅಲ್ಲಲ್ಲಿ ಅಂಬೇಡ್ಕರ್ ನಾಮಫಲಕಗಳಿಗೆ ಅಪಮಾನ ಮಾಡಿರುವಂತಹ ಪ್ರಕರಣಗಳಲ್ಲಿ ಬಂಧಿತವಾಗಿರುವ ಆರೋಪಿಗಳ ಮಂಪರು ಪರೀಕ್ಷೆ ನಡೆಸಿ, ಕಾಣದ ಕೈಗಳ ವಿರುದ್ದ ಕ್ರಮ ಕೈಗೊಳ್ಳಬೇಕು ಪರಿಶಿಷ್ಟ ಜಾತಿ ಹಾಗೂ ವರ್ಗಗಳ ಹಿತರಕ್ಷಣಾ ಸಮಿತಿ ಸಭೆಯಯಲ್ಲಿ ದಲಿತ ಮುಖಂಡರು ಒತ್ತಾಯಿಸಿದರು.

ನಗರದ ತಾಲ್ಲೂಕು ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ತಾಲೂಕು ಎಸ್ಸಿ, ಎಸ್ಟಿ ಹಿತರಕ್ಷಣಾ ಸಮಿತಿ ಸಭೆಯು ತಹಶೀಲ್ದಾರ್ ಗಿರಿಜಾ ಅವರ ಅಧ್ಯಕ್ಷತೆಯಲ್ಲಿ ನಡೆಯಿತು ಸಭೆ ಆರಂಭವಾಗುತ್ತಿದ್ದಂತೆ ದಲಿತ ಮುಖಂಡ ಪಿ. ಸಂಘಸೇನಾ ಮಾತನಾಡಿ, ಜಿಲ್ಲೆಯಾದ್ಯಂತ ನಡೆದಿರುವ ಅಂಬೇಡ್ಕರ್ ಪ್ರತಿಮೆ ಹಾಗೂ ಬುದ್ದ ವಿಗ್ರಹಗಳ ಅಪಮಾನ ಪ್ರಕರಣದ ಹಿಂದೆ ಆರೆಸ್‌ಎಸ್ ಸಂಘಟನೆಗಳ ದುಷ್ಪೇರಣೆ ಇದೆ. ಹೀಗಾಗಿ ಬಂಧಿತ ಆರೋಪಿಗಳನ್ನು ಮಂಪರು ಪರೀಕ್ಷೆಗೆ ಒಳಪಡಿಸಿದರೆ, ನಿಜವಾದ ಅರೋಪಿಗಳು ಸಿಕ್ಕಿ ಬೀಳಲಿದ್ದಾರೆ. ತಾಲೂಕು ಆಡಳಿತ ಹಾಗು ಪೊಲೀಸ್ ಇಲಾಖೆಯ ಈ ನಿಟ್ಟಿನಲ್ಲಿ ಕ್ರಮ ವಹಿಸಭೇಕು ಎಂದು ಒತ್ತಾಯಿಸಿದರು.

ಡಿವೈಎಸ್ಪಿ ಸ್ನೇಹರಾಜ್ ಮಾತನಾಡಿ, ಈ ಪ್ರಕರಣಗಳು ತನಿಖೆ ಹಂತದಲ್ಲಿದೆ. ಇನ್ನು ಅನೇಕ ವಿಚಾರಣೆ ಬಾಕಿ ಇದೆ. ಇನ್ನು ಕೆಲವು ಆರೋಪಿಗಳನ್ನು ಪತ್ತೆ ಮಾಡಿ, ಬಂಧಿಸಬೇಕಾಗಿದೆ. ಹೀಗಾಗಿ ನಿಮ್ಮಲ್ಲರ ಒತ್ತಾಯವನ್ನು ಇಲಾಖೆ ಹಿರಿಯ ಅಧಿಕಾರಿಗಳ ಗಮನಕ್ಕೆ ತರುವುದಾಗಿ ತಿಳಿಸಿದರು.

ದಲಿತ ಮುಖಂಡ ಮತ್ತಿಗೆ ಮೂರ್ತಿ ಮಾತನಾಡಿ, ಹೆಗ್ಗೋಠಾರ ಗ್ರಾಮದಲ್ಲಿ ಅನ್ಯ ಕೋಮಿನವರು ದಲಿತರಿಗೆ ಸೇರಿಬೇಕಾಗಿದ್ದ ನಿವೇಶನಗಳನ್ನು ನಕಲಿ ದಾಖಲಾತಿ ಸೃಷ್ಟಿ ಮಾಡಿಕೊಂಡು ಗುಡಿಸಲು ಹಾಕಿಕೊಂಡಿದ್ದಾರೆ. ಇದನ್ನು ತೆರವು ಮಾಡಬೇಕೆಂಬ ಒತ್ತಾಯಕ್ಕೆ ಇಓ ಗಿರಿಧರ್ ಪ್ರತಿಕ್ರಿಯೆ ನೀಡಿ, ಈ ನಿವೇಶನಗಳ ಮೂಲದಾಖಲಾತಿಗಳನ್ನು ಪರಿಶೀಲಿಸಿ, ಗುಡಿಸಲು ತೆರವು ಮಾಡಿ, ಸಾರ್ವಜನಿಕ ಆಸ್ತಿ ಎಂದು ನಾಮಫಲಕ ಹಾಕಿಸುವ ಭರವಸೆ ನೀಡಿದರು.




ಸಿದ್ದಯ್ಯನಪುರ ಶಿವರಾಜ್ ಮಾತನಾಡಿ, ಫಲಾನುಭವಿಗಳ ಗಮನಕ್ಕೆ ತರದೇ ಏಕಾಏಕಿ ಬಿಪಿಎಲ್ ಕಾರ್ಡುಗಳನ್ನು ರದ್ದುಪಡಿಸಲಾಗುತ್ತಿದೆ. ಇದರಿಂದ ಅರ್ಹ ಬಡವರಿಗೆ ಅನ್ಯಾಯವಾಗುತ್ತಿದೆ. ಅಧಿಕಾರಿಗಳು ನಿಜವಾದ ಅನರ್ಹ ಫಲಾನುಭವಿಗಳನ್ನು ಗುರುತಿಸುವಲ್ಲಿ ವಿಫಲರಾಗಿದ್ದಾರೆ. ಸರ್ಕಾರ ಮಾನದಂಡವನ್ನು ಅನುಸರಿಸುತ್ತಿಲ್ಲ. ಬಿಪಿಎಲ್ ಕಾರ್ಡ್‌ಗೆ ಅರ್ಹರಾದ ಫಲಾನುಭವಿಗಳಿಗೆ ಅನ್ಯಾಯವಾಗುತ್ತಿದೆ. ಇದರ ಬಗ್ಗೆ ಸೂಕ್ತ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ಜಾಲಹಳ್ಳಿ ಹುಂಡಿಯ ಹಂದಿಜೋಗಿ ಜನಾಂಗದ ಕಮಲ ಅವರು ಮಾತನಾಡಿ, 50 ಕ್ಕು ಹೆಚ್ಚು ಹಂದಿಗಳನ್ನು ಹಿಡಿದುಕೊಂಡು ಹಾಸನಕ್ಕೆ ಬಿಡಿಸಿದ್ದಾರೆ. ಅಲ್ಲದೇ ಗ್ರಾಮದಲ್ಲಿ ಮಾನಸಿಕ ಹಿಂಸೆ ನೀಡುತ್ತಿದ್ದು, ಈ ಬಗ್ಗೆ ನನಗೆ ಭದ್ರತೆ ಬೇಕು ಎಂದು ಒತ್ತಾಯಿಸಿದರು. ದಲಿತ ಮುಖಂಡ ಮಹೇಶ್ ಕುದರ್ ಮಾತನಾಡಿ, ಪಟ್ಟಣದ ಸಂತೇಮರಹಳ್ಳಿ ವೃತ್ತ ಹಾಗೂ ಚಾಮರಾಜೇಶ್ವರ ದೇವಸ್ಥಾನದ ಹಿಂಭಾಗ ನಮ್ಮ ಬಾಬ್ತು ಮಳಿಗೆಗೆ ಸೇರಿದ ಕಡತಗಳು ನಗರಸಭೆಯಲ್ಲಿ ನಾಪತ್ತೆಯಾಗಿವೆ. ರಸ್ತೆ ಅಗಲೀಕರಣಕ್ಕಾಗಿ ಮಳಿಗೆಯನ್ನು ಹೊಡೆದಿದ್ದು, ಪರಿಹಾರ ನೀಡಿಲ್ಲ. ಜಿಲ್ಲಾಧಿಕಾರಿಗಳು ಮೂರು ವರ್ಷಗಳ ಹಿಂದೆಯೇ ಕಂತಿನ ರೂಫದಲ್ಲಿ ಮಾಲೀಕರಿಗೆ ಪರಿಹಾರ ನೀಡುವಂತೆ ಆದೇಶ ಮಾಡಿದ್ದಾರೆ. ಇದುವರೆಗೆ ಪರಿಹಾರವನ್ನು ಕೊಟ್ಟಿಲ್ಲ. ಸಂಬಂಧಿಸಿದ ದಾಖಲಾತಿಗಳನ್ನು ನೀಡುತ್ತಿಲ್ಲ, ಕಟ್ಟಡ ನವೀಕರಣಕ್ಕೂ ಅವಕಾಶ ಮಾಡಿಕೊಡುವುದಿಲ್ಲ ಎಂದು ದೂರಿದರು. ಸಭೆಯಲ್ಲಿ ಡಿವೈಎಸ್ಪಿ ಸ್ನೇಹರಾಜ್, ತಾ.ಪಂ. ಇಓ ಗಿರಿಧರ್, ಸಮಾಜ ಕಲ್ಯಾಣಾಧಿಕಾರಿ ಮೇಘ, ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ಸುಬ್ಬಾರಾಯ್, ದಲಿತ ಮುಖಂಡರಾದ ಸಿ.ಎಂ. ಕೃಷ್ಣಮೂರ್ತಿ, ಮಹೇಶ್‌ಕುದರ್, ವಕೀಲ ಪ್ರಸನ್ನಕುಮಾರ್, ಇತರರು ಹಾಜರಿದ್ದರು.

# ಪ್ರಗತಿ ಪರಿಶೀಲನಾ ಸಭೆ

ಗುಂಡ್ಲುಪೇಟೆ: ತಾಲ್ಲೂಕು ಮಟ್ಟದ 2025 –26ನೇ ಸಾಲಿನ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಶಾಸಕ ಎಚ್‌ಎಂಗಣೇಶ್ ಪ್ರಸಾದ್ ಅಧ್ಯಕ್ಷತೆಯಲ್ಲಿ ನಡೆಸಲಾಯಿತು.

ಸಭೆಯಲ್ಲಿ ಪಟ್ಟಣದ ಸಾರ್ವಜನಿಕ ಅಸ್ಪತ್ರೆಯಲ್ಲಿ ಶವಪರೀಕ್ಷೆ ಮಾಡುವವರಿಲ್ಲ ಅಲ್ಲದೆ ಶವಗಾರ ನಿರ್ಮಾಣ ಮಾಡುವ ವಿಚಾರ ಒಂದು ವರ್ಷದಿಂದ ನೆನಗುದ್ದಿಗೆ ಬಿದ್ದಿರುವ ಪ್ರಶ್ನೆಗೆ ತ್ವರಿತವಾಗಿ ಶವಗಾರ ನಿರ್ಮಾಣ ಕಾರ್ಯ ಮಾಡಲು ಕ್ರಮ ಕೈಗೊಳ್ಳುವ ಬಗ್ಗೆ ಶಾಸಕರು ಸೂಚಿಸಿದರು ನಂತರ ಕಬ್ಬಹಳ್ಳಿ ಮತ್ತು ಬೇಗೂರು ಅಸ್ಪತ್ರೆಲ್ಲಿ ವ್ಯದ್ಯರ ಸಮಸ್ಯೆ ಬಗ್ಗೆ ಮಾಹಿತಿ ನೀಡಿದ ತಾಲ್ಲೂಕು ಅರೊಗ್ಯಾದಿಕಾರಿ ಅಲೀಂ ಪಾಷ ಕಳೆದ ಹತ್ತು ವರ್ಷ ಗಳಿಂದ ಒಂದೆ ಅಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಡಾ. ವಂಕಟಸ್ವಾಮಿ ಅವರು ಜಿಲ್ಲಾ ಅಸ್ಪತ್ರೆಗೆ ವರ್ಗಾವಣೆಗೂಂಡ ಹಿನ್ನಲೆ ತಾತ್ಕಾಲಿಕವಾಗಿ ಬೇರೆ ವ್ಯದ್ಯರನ್ನು ನಿಯೋಜನೆ ಮಾಡಲಾಗಿದೆ ಬೇಗೂರು ಸಮುದಾಯ ಅರೋಗ್ಯ ಕೇಂದ್ರಕ್ಕೆ ಡಿಸೆಂಬರ್ ನಲ್ಲಿ ಸರ್ಕಾರ ವ್ಯದ್ಯರನ್ನು ನೇಮಕ ಮಾಡುವ ನಿರೀಕ್ಷೆಯಿದೆ ಎಂದು ಹೇಳಿದರು.. ಸಣ್ಣ ಇನ್ನೂ ನೀರಾವರಿ ಇಲಾಖೆಯಿಂದ ಕಲ್ಕಟ್ಟ ಕೆರೆ ಅಬಿವೃದ್ದಿ ಗೆ ಒಂದುವರೆ ಕೋಟಿ ಬಿಡುಗಡೆ ಅಭಿವೃದ್ದಿ ಮಾಡದೆ ಹಣ ಪೋಲು ಎಂಬ ಅರೋಪ ಕೇಳಿ ಬಂತು ಕೃಷಿ ಹೊಂಡ ನಿರ್ಮಾಣ ಮಾಡಿದ ರೈತರು ಸುತ್ತುಬೇಲಿ ಹಾಕಲು ಸೂಚಿಸುವಂತೆ ಸಹಾಯಧನ ನೀಡುತ್ತಿದು ಇದನ್ನು ಸದುಪಯೋಗ ಪಡಿಸಿಕೊಳ್ಳಲು ಸಲಹೆ ನೀಡಲಾಯಿತು, ಅರಣ್ಯ ಇಲಾಖೆ ಜಂಟಿ ಸರ್ವೆ ನಡೆಸಲು ಸಹಕರಿಸುವಂತೆ ಸೂಚಿಸಿದರು, ಚೆಸ್ಕಾಂ ನಿಂದ ನಿರಂತರ ಜ್ಯೋತಿ ಗ್ರಾಮಗಳಿಗೆ ಮಾತ್ರ ನೀಡಲು ಸಾಧ್ಯ ಜಮೀನಿನ ಮನೆಗೆ ನೀಡಲು ಸಾಧ್ಯವಿಲ್ಲ, ರೈತರಿಗೆ ರಾತ್ರಿ 6 ಗಂಟೆಯಿಂದ ಬೆಳಿಗ್ಗೆ ವರೆಗೂ ವಿದ್ಯುತ್ ನೀಡುತ್ತಿರುವುದಾಗಿ ಕೆಇಬಿ ಇಲಾಖೆ ಎಇಇ ಸಿದ್ದಲಿಂಗಸ್ವಾಮಿ ತಿಳಿಸಿದರು.ಜಮೀನಿನಲ್ಲಿ ಮನೆ ಮಾಡಿದ್ದರೆ ತಹಶೀಲ್ದಾರ್ ವಾಸಸ್ಥಳ ಧೃಡೀಕರಣ ನೀಡಬಹುದು ಎಂದರು. ಈ ಸಂದರ್ಭದಲ್ಲಿ ತಹಶೀಲ್ದಾರ್. ತನ್ಮಯ್ ಎಂ ಎಸ್ ತಾಪಂ ಇಓ ಷಣ್ಮುಗಂ ಪುರಸಭೆ ಮುಖ್ಯ ಅದಿಕಾರಿ ಶರವಣ ಎಪಿಎಂಸಿ ಅಧ್ಯಕ್ಷ ರಂಗೂಪುರ ನಾಗರಾಜ್.ಟಿಎಪಿಸಿಎಂಸಿ ಅಧ್ಯಕ್ಷ ಮಡಿವಾಳಪ್ಪ.ಸೇರಿದಂತೆ ವಿವಿಧ ಇಲಾಖೆ ತಾಲೂಕು ಮಟ್ಟದ




# ಸಂಚಾರಿ ಆರೋಗ್ಯ ವಾಹನಕ್ಕೆ ಚಾಲನೆ

ಗುಂಡ್ಲುಪೇಟೆ: ಕಾರ್ಮಿಕರ ಇಲಾಖೆಯ ಆರೋಗ್ಯಕ್ಕಾಗಿ ಸಂಚಾರಿ ಆರೋಗ್ಯ ವಾಹನಕ್ಕೆ. ಶಾಸಕ ಎಚ್ ಎಂ ಗಣೇಶ್ ಪ್ರಸಾದ ವಾಹನಕ್ಕೆ ಚಾಲನೆ ನೀಡಿದರು.

ತಾಲೂಕು ಕಚೇರಿ ಆವರಣದಲ್ಲಿ ಕಾರ್ಮಿಕ ಇಲಾಖೆಯ ಸಂಚಾರಿ ಆರೋಗ್ಯ ಘಟಕ ವಾಹನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕಾರ್ಮಿಕರು ಕರ್ತವ್ಯದಲ್ಲಿಅನಾರೋಗ್ಯಕ್ಕೆ ಸಿಲುಕಿದರೆ ಸ್ಥಳದಲ್ಲೇ ಚಿಕಿತ್ಸೆ ನೀಡಲು ಸಂಚಾರಿ ಆರೋಗ್ಯ ವಾಹನ ಸಹಕಾರಿಯಾಗಲಿದೆ. ಕಾರ್ಮಿಕರ ಕುಟುಂಬಸ್ಥರು ಈ ಸೌಲಭ್ಯ ಪಡೆದುಕೊಳ್ಳಬೇಕು,ಎಂದರುಸಂಚಾರಿ ಆರೋಗ್ಯ ಘಟಕ ವಾಹನವು ತಾಲೂಕಿನಾದ್ಯಂತ ಸಂಚರಿಸಿ, ಕಾರ್ಮಿಕರು ಕರ್ತವ್ಯ ನಿರ್ವಹಿಸುತ್ತಿರುವ ಕಡೆ ಕಾರ್ಮಿಕರ ಆರೋಗ್ಯ ತಪಾಸಣೆ ಮಾಡಲಿದೆ. ಜತೆಗೆ ಬಿಪಿ, ಮಧುಮೇಹ ಕಾಯಿಲೆಗಳ ತಪಾಸಣೆ ಮಾಡಲಿದೆ. ವೈದ್ಯರು ಸ್ಥಳದಲ್ಲೇ ಔಷಧಗಳನ್ನು ನೀಡಲಿದ್ದಾರೆ. ಕಾರ್ಮಿಕರು ಸಾರಿಗೆ ಆರೋಗ್ಯ ಘಟಕದ ಸೌಲಭ್ಯವನ್ನು ತಮ್ಮ ಕಟುಂಬ ಸಮೇತ ಪಡೆದುಕೊಳ್ಳಬಹುದು ಎಂದು ತಿಳಿಸಿದರು. ಈ



ಸಂದರ್ಭದಲ್ಲಿ ತಹಶೀಲ್ದಾರ್ ತನ್ಮಯ್ ಎಂ ಎಸ್ ಕಾರ್ಮಿಕ ಇಲಾಖೆ ಸಹಾಯಕ ನಿರ್ದೇಶಕ ನಾರಾಯಣ ಮೂರ್ತಿ ಇಲಾಖೆ ಸಿಬ್ಬಂದಿ ಗಣೇಶ ಅರೋಗ್ಯ ಇಲಾಖೆಯ ಸಿಬ್ಬಂದಿ ವರ್ಗ ಹಾಗೂ ಇನ್ನೂ ಇತರರು ಇದ್ದರು

# ತಿಮ್ಮಕ್ಕನ ಪರಿಸರ ಸೇವೆ ಅನನ್ಯ



ಚಾಮರಾಜನಗರ, ಈಚೆಗೆ ನಿಧನರಾದ ವೃಕ್ಷಮಾತೆ ಸಾಲುಮರದ ತಿಮ್ಮಕ್ಕನ ಗೌರವಾರ್ಥ ನಗರದ ಚಾಮರಾಜೇಶ್ವರ ದೇವಸ್ಥಾನ ಮುಂಭಾಗದಲ್ಲಿ ಜಿಲ್ಲಾ ಕನ್ನಡ ಪರ ಸಂಘಟನೆಗಳ ಒಕ್ಕೂಟ ಹಾಗೂ ಗಡಿನಾಡು ಜಿಲ್ಲಾ ಕನ್ನಡಪರ ಹೋರಾಟ ವೇದಿಕೆ ವತಿಯಿಂದ ಸಾಲುಮರದ ತಿಮ್ಮಕ್ಕ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಶ್ರದಾಂಜಲಿ ಸಲ್ಲಿಸಲಾಯಿತು.

ಈ ವೇಳೆ ಅಖಿಲ ಕರ್ನಾಟಕ ಕನ್ನಡ ಮಹಾಸಭೆ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ ಸಾಲುಮರದ ತಿಮ್ಮಕ್ಕ ಅವರಿಗೆ ಮಕ್ಕಳಿಲ್ಲದ ಹಿನ್ನೆಲೆ ಅವರು, ಮಕ್ಕಳಂತೆ 8 ಸಾವಿರಕ್ಕೂ ಹೆಚ್ಚು ಗಿಡಗಳನ್ನು ನೆಟ್ಟು, ಪೋಷಣೆ ಮಾಡಿದ್ದರು. ಈಗ ಅವು ಹೆಮ್ಮರವಾಗಿ ಬೆಳೆದು, ಸಾರ್ವಜನಿಕರಿಗೆ ನೆರಳು ಒದಗಿಸುತ್ತಿವೆ. ಇಂತಹ ಸಾಧಕರನ್ನು ಸ್ಮರಿಸುವುದು ಕನ್ನಡಿಗರಾದ ನಮ್ಮ ಕರ್ತವ್ಯವಾಗಿದೆ ಎಂದರು.

ಈ ಸಂದರ್ಭದಲ್ಲಿ ನಿಜಧನಿಗೋವಿಂದರಾಜು, ಪಣ್ಯದಹುಂಡಿರಾಜು, ಗೊರವರಕಲಾವಿದ ಶಿವಮಲ್ಲೇಗೌಡ, ಗಡಿನಾಡು ಕನ್ನಡ ಹೋರಾಟವೇದಿಕೆ ಅಧ್ಯಕ್ಷ ರಾಚಪ್ಪ, ಕನ್ನಡ ಪರ ಹೋರಾಟಗಾರ ಮಹೇಶ್ ಗೌಡ, ಎಸ್‌ಪಿಬಿ ಸಾಂಸ್ಕೃತಿಕ ಕಲಾವೇದಿಕೆ ಅಧ್ಯಕ್ಷ ಶಿವಣ್ಣ, ಲಿಂಗರಾಜು, ಸಿದ್ದರಾಜು, ಬಂಗಾರಸ್ವಾಮಿ, ಸುಬ್ಬಯ್ಯ, ರಂಗಸ್ವಾಮನಾಯಕ, ಸುಭಾಷ್, ಶಿವರಾಜು, ನಾಗೇಶ್, ನಾಗೇಂದ್ರ ಇತರರು ಹಾಜರಿದ್ದರು.

# ರೈತರ ನಿದ್ದೆಗೆಡಿಸಿದ್ದ ಚಿರತೆ ಬೋನಿನಲ್ಲಿ ಸೆರೆ

ಚಾಮರಾಜನಗರ, ಕಳೆದ ಹಲವು ತಿಂಗಳಿನಿಂದ ರೈತರ ನಿದ್ದೆಗೆಡಿಸಿದ್ದ ಚಿರತೆ ಕೊನೆಗೂ ಬೋನಿಗೆ ಬಿದ್ದಿದೆ. ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬೇರಂಬಾಡಿಯಲ್ಲಿ ಇಂದು ಬೆಳಗಿನ ಜಾವ ಚಿರತೆ ಬೋನು ಸೇರಿದೆ.

ಬೇರಂಬಾಡಿ ಗ್ರಾಮದ ಶಿವಶಂಕರಪ್ಪ ಎಂಬವರ ಜಮೀನಿನಲ್ಲಿ ಚಿರತೆ ಸೆರೆಗೆ ಬೋನಿರಿಸಲಾಗಿತ್ತು. ಮೇಕೆ ಆಸೆಯಿಂದ ಬಂದ ಅದು ಬೋನಿನಲ್ಲಿ ಸೆರೆಯಾಗಿದೆ. ಸೆರೆಯಾದ ಗಂಡು ಚಿರತೆಗೆ 4–5 ವರ್ಷಗಳಾಗಿರಬಹುದು ಎಂದು ಅರಣ್ಯ ಇಲಾಖೆ ತಿಳಿಸಿದೆ. ಬೇರಂಬಾಡಿ ಸುತ್ತಮುತ್ತಲು ಚಿರತೆ ಉಪಟಳ ಕೊಡುತ್ತಿತ್ತು. ಕೆಲವು ದಿನಗಳ ಹಿಂದೆಯೂ ಮೂರು ಕುರಿಗಳು ಚಿರತೆಗೆ ಆಹಾ ರವಾಗಿದ್ದವು. ಕಳೆದ ಹಲವು ದಿನಗಳಿಂದ ರೈತರಿಗೆ ಉಪಟಳ ನೀಡುತ್ತಿದ್ದ ಕಾರಣ ಬೋನಿರಿಸಿದ್ದೆವು. ಇದೀಗ ಈ ಚಿರತೆಯನ್ನು ಬಂಡೀಪುರ ಅಭಯಾರಣ್ಯದ ಕಲ್ಕೆರೆ ಪ್ರದೇಶದ ದಟ್ಟಾರಣ್ಯದಲ್ಲಿ ಬಿಡಲಾಗುವುದು ಎಂದು ಆರ್?ಎಫ್‌ಓ ಪುನೀತ್ ತಿಳಿಸಿದ್ದಾರೆ. ಮದ್ದೂರು ವಲಯದ ಅರಣ್ಯಾಧಿಕಾರಿಗಳು ಶಿವಶಂಕರಪ್ಪ ಎಂಬ ರೈತರ ಜಮೀನಿನಲ್ಲಿ ಬೋನಿರಿಸಿ ಒಳಗೆ ಮೇಕೆ ಕಟ್ಟಿದ್ದರು. ಇದೀಗ ಚಿರತೆ ಬೋನಿಗೆ ಬಿದ್ದಿರುವುದರಿಂದ ರೈತರ ಆತಂಕ ದೂರವಾಗಿದೆ. ಇದೇ ವೇಳೆ, ಕಾಡುಪ್ರಾಣಿಗಳು ನಾಡಿಗೆ ಬರದಂತೆ ಕ್ರಮ ವಹಿಸಬೇಕು ಎಂದು ಸ್ಥಳೀಯ ರೈತ ಮುಖಂಡರ ಒತ್ತಾಯಿಸಿದ್ದಾರೆ.

## ಮೂಳೆ, ಕೀಲು ಕ್ಯಾನ್ಸರ್ ಸಹ ಗುಣಪಡಿಸುವ ಜೊತೆಗೆ ಅಂಗಾಂಗಗಳನ್ನು ಉಳಿಸಬಹುದಾಗಿದೆ: ಡಾ.ಕೆ.ಟಿ. ಅಜಯ್

# ಸಿಮ್ಸ್‌ನಲ್ಲಿ ವೈದ್ಯಕೀಯ ಶಿಕ್ಷಣ ಕಾರ್ಯಾಗಾರ

ಚಾಮರಾಜನಗರ: ಮೂಳೆ ಮತ್ತು ಕೀಲು ಕ್ಯಾನ್ಸರ್ ಹಾಗೂ ಡಯಾಬಿಟಿಕ್ ಪುಟ್ ಕಾಯಿಲೆಯಿಂದ ಬಳಲುತ್ತಿರುವವರಿಗೆ ಅಂಪುಟೇಶನ್ ಮಾಡುವ ಬದಲು ತಂತ್ರಜ್ಞಾನದಿಂದ ಕಾಲು ಉಳಿಸುವ ಜೊತೆಗೆ ರೋಗಿಯನ್ನು ಗುಣಮುಖರನ್ನಾಗಿ ಮಾಡುವ ಚಿಕಿತ್ಸೆ ನೀಡಲಾಗುತ್ತಿದೆ ಎಂದು ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲ ಡಾ.ಕೆ.ಟಿ.ಅಜಯ್ ತಿಳಿಸಿದರು.

ನಗರದ ಹೊರ ವಲಯದ ಯಡಬೆಟ್ಟದ ಬಳಿ ಇರುವ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಿಮ್ಸ್ ಬೋಧನಾ ಅಸ್ಪತ್ರೆಯ 4ನೇ ಮಹಡಿಯಲ್ಲಿರುವ ಅಡಿಟೋರಿಯಂನಲ್ಲಿ ನಡೆದ ಮುಂದುವರಿದ ವೈದ್ಯಾಕೀಯ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು.ಚಾಮರಾಜನಗರ ಸಿಮ್ಸ್ ಅಸ್ಪತ್ರೆ ಉತ್ತಮ ಹೆಸರು ಮಾಡಿದ್ದು, ಕೀಲು ಮತ್ತು ಮೂಳೆ ವಿಭಾಗದಲ್ಲಿ ಹೆಚ್ಚಿನ ಸೇವೆ ಲಭ್ಯವಾಗುತ್ತಿದೆ. ವಿಭಾಗದ ಮುಖ್ಯಸ್ಥ ಡಾ. ಮಾರುತಿ ಮತ್ತು ತಂಡದವರು ಉತ್ತಮ ಚಿಕಿತ್ಸೆಯನ್ನು ನೀಡುವ ಜೊತೆಗೆ ಪರಿಣ?ತ ವೈದ್ಯರನ್ನು ಸಹ ತಯಾರು ಮಾಡುತ್ತಿದ್ದಾರೆ.



ಈ ತಂಡದ ಕಾರ್ಯ ಶ್ಲಾಘನಿಯವಾಗಿದೆ. ಕೀಲು ಮೊಳೆಗೆ ಸಂಬಂಧಿಸಿ ಚಿಕಿತ್ಸೆ ಹಾಗೂ ತಂತ್ರಾಜ್ಞಾನ ಬಳಕೆ ಮತ್ತು ಬೋನ್ ಕ್ಯಾನ್ಸರ್ ಅನ್ನು ಗುಣಪಡಿಸುವ ಕಾರ್ಯಗಾರ ಉಪಯುಕ್ತವಾಗಿದೆ. ಇಂಥ ಕಾರ್ಯಗಾರಗಳು ವಿದ್ಯಾರ್ಥಿಗಳಲ್ಲಿ ಅತ್ಮ ವಿಶ್ವಾಸ ವೃದ್ದಿಸುತ್ತಿದೆ. ಚಿಕಿತ್ಸೆಯ ಗುಣಮಟ್ಟವು ಸಹ ಹೆಚ್ಚುತ್ತದೆ ಎಂದರು. ಸಂಪನ್ಮೂಲ ವ್ಯಕ್ತಿಗಳಾಗಿ ಕಾರ್ಯಗಾರದಲ್ಲಿ ಬೆಂಗಳೂರಿನ ಡಾ. ಶ್ರೀನಿವಾಸ್ ಚಿಲುಕುರಿ, ಡಾ. ಸುಮನ್ ಬೈರೇಗೌಡ, ಡಾ. ಸೋಹನ್ ರಾಘ ವೇಂದ್ರ ರವರು ಮೂಳೆ ಕ್ಯಾನ್ಸರ್ ಬಗ್ಗೆ ತಿಳಿಸಿಕೊಟ್ಟರು. ಮೈಸೂರಿನ ಡಾ. ರಘುನಂದನ್ ಅವರು ಡಯಾಬಿಟಿಕ್ ಫುಟ್ ಕಾಯಿಲೆಯಿಂದ ಬಳಲುತ್ತಿರುವವರಿಗೆ ಆಂಪುಟೇಶನ್ ಮಾಡುವ ಬದಲು ಕಾಲನ್ನು ಉಳಿಸುವ ಬಗ್ಗೆ ಪ್ರಾತ್ಯಕ್ಷತೆಯ ಮೂಲಕ ತಿಳಿಸಿಕೊಟ್ಟರು. ಕಾರ್ಯಕ್ರಮದಲ್ಲಿ ಡಿಎಚ್‌ಓ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಚಿದಂಬರ, ಸಿಮ್ಸ್ ಟೀಚರ್ ಅಸೋಸಿಯೇಷನ್ ಅಧ್ಯಕ್ಷರಾದ ಗಿರಿಶ್ ವಿಪಾಟೀಲ್, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ. ಚಿನ್ನಭೋವಿ, ಕಾರ್ಯಕಾರಿ ಅಧ್ಯಕ್ಷರಾದ ಡಾ. ರಾಘವೇಂದ್ರ ಮೊದಲಾಧವರು ಇದ್ದರು. ಈ ಕಾರ್ಯಕ್ರಮಕ್ಕೆ 150ಕ್ಕೂ ಹೆಚ್ಚು ವಿವಿಧ ಕಾಲೇಜುಗಳಿಂದ ಹಾಗೂ ಸಂಸ್ಥೆಯ ವಿವಿಧ ವಿಭಾಗಗಳಿಂದ ವೈದ್ಯರುಗಳು ಭಾಗವಹಿಸಿದ್ದರು.

## ತಂಡದ ಸಹಕಾರ ಹೆಚ್ಚು

ವಿಭಾಗ ಮುಖ್ಯಸ್ಥ ಡಾ. ಮಾರುತಿ ಮಾತನಾಡಿ, ಚಾಮರಾ ಜನಗರ ಸಿಮ್ಸ್ ಅಸ್ಪತ್ರೆಯಲ್ಲಿ ಕೀಲು ಮತ್ತು ಮೊಳೆ ವಿಭಾಗ ಅತ್ಯುತ್ತಮವಾಗಿ ಕಾರ್ಯನಿರ್ವಹಣೆ ಮಾಡುತ್ತಿದ್ದು, ನಮ್ಮ ತಂಡದ ಸಹಕಾರ ಹೆಚ್ಚಿನದ್ದಾಗಿದೆ. ಇಂದಿನ ಕಾರ್ಯಾ ಗಾರಕ್ಕೆ ಬೆಂಗಳೂರು, ಮೈಸೂರಿನ ತಜ್ಞ ವೈದ್ಯರ ತಂಡವನ್ನು ಕರೆಸಲಾಗಿದೆ. ಅವರು ವಿಚಾರಧಾರೆಗಳನ್ನು ತಿಳಿದುಕೊ ಳ್ಳುವ ಜೊತೆಗೆ ಗುಣಮಟ್ಟದ ಚಿಕಿತ್ಸೆ ನೀಡಲು ಸಹಕಾರಿ ಯಾಗಿದೆ. ಕಾರ್ಯಾಗಾರ ನಡೆಸಲು ಸಹಕಾರ ನೀಡಿದ ಎಲ್ಲರಿಗೂ ಕೃತಜ್ಞತೆಗಳನ್ನು ಅರ್ಪಿಸುವುದಾಗಿ ತಿಳಿಸಿದರು.

## ಚಾಲನೆ

ಕಾರ್ಯಕ್ರಮದಲ್ಲಿ ನಿವಾಸಿ ವೈದ್ಯಾಧಿಕಾರಿ ಡಾ. ಮಹೇಶ್, ಡಾ. ಮೃತ್ಯಂಜಯ, ಡಾ. ಪುಟ್ಟಸ್ವಾಮಿ, ಡಾ. ರಾಜಶೇಖರ್, ಡಾ. ಶಿವಣ್ಣ ಹಾಗೂ ಕಾಶ್ಮೀರದಿಂದ ಕನ್ಯಾಕುಮಾರಿಯವರೆಗೂ 22 ದಿನಗಳ ಕಾಲ ಸೈಕಲ್ ಮೂಲಕ ಸಂಚರಿಸಿ ಕ್ಯಾನ್ಸರ್ ಬಗ್ಗೆ ಅರಿವು ಮೂಡಿಸಿದ ಡಾ. ಸುಮನ್ ಭೈರೇಗೌಡ ಮತ್ತು 8ನೇ ರ್ಯಾಂಕ್ ಪಡೆದ ರಘುನಂದನ್ ಅವರನ್ನು ಸನ್ಮಾನಿಸಲಾಯಿತು.

# 20ರಂದು ಚಾ.ನಗರಕ್ಕೆ ಮುಖ್ಯಮಂತ್ರಿ ಆಗಮನ

## ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ : ಸಿದ್ದತೆಗೆ ಸಚಿವ ಕೆ.ವೆಂಕಟೇಶ್ ಸೂಚನೆ

**ಚಾಮರಾಜನಗರ**

ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ ಸಮಾರಂಭ ಇದೇ ನವೆಂಬರ್ 20ರಂದು ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಸಮಾರಂಭ ಉದ್ಘಾಟಿಸಲು ಆಗಮಿಸುತ್ತಿದ್ದು, ಇದಕ್ಕಾಗಿ ಸಕಲ ಸಿದ್ದತೆಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ ಸಮಾರಂಭಕ್ಕಾಗಿ ಮುಖ್ಯಮಂತ್ರಿಗಳು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಕರೆಯಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಗರದಲ್ಲಿ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರಂಭವನ್ನು ನವೆಂಬರ್ 20ರಂದು ಮುಖ್ಯ ಮಂತ್ರಿಗಳು ಉದ್ಘಾಟಿಸಲಿದ್ದಾರೆ. ಬಹುಮುಖ್ಯವಾದ ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಹಕಾರಿ ಧುರೀಣರು, ಸದಸ್ಯರು, ಸಾರ್ವಜನಿಕರು ಭಾಗವಹಿಸಲಿರುವ ಹಿನ್ನೆಲೆಯಲ್ಲಿ ಯಾವುದೇ ಲೋಪ, ಕೊರತೆಗೆ ಅವಕಾಶವಾಗದಂತೆ ಅಚ್ಚುಕಟ್ಟಾಗಿ ಕಾರ್ಯಕ್ರಮ ಆಯೋಜನೆ ಮಾಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದರು.

ಗಣ್ಯರು, ಸಾರ್ವಜನಿಕರು ಸೇರಿದಂತೆ ಎಲ್ಲರಿಗೂ ಸೂಕ್ತ ಆಸನಗಳ ವ್ಯವಸ್ಥೆಯಾಗಬೇಕು. ಆಕರ್ಷಕ ವೇದಿಕೆ, ಅಲಂಕಾರ, ಭದ್ರತೆ, ವಾಹನಗಳ ನಿಲುಗಡೆ, ಸ್ವಚ್ಚತೆ, ಮುಖ್ಯಮಂತ್ರಿಗಳು, ಗಣ್ಯರನ್ನು ಸ್ವಾಗತಿಸಲು ಕಲಾತಂಡಗಳ ನಿಯೋಜನೆ ಸೇರಿದಂತೆ ಪ್ರತಿಯೊಂದು ಕಾರ್ಯವನ್ನು ಜವಾಬ್ದಾರಿಯುತವಾಗಿ ಅಧಿಕಾರಿಗಳು ನಿರ್ವಹಿಸಬೇಕು ಎಂದರು. ಹೆಚ್ಚಿನ ಜನರು ಕಾರ್ಯಕ್ರಮಕ್ಕೆ ಬರಲಿರುವ ಹಿನ್ನೆಲೆಯಲ್ಲಿ ಉಪಹಾರ, ಕುಡಿಯುವ ನೀರು ಪೂರೈಕೆ ಸಮರ್ಪಕವಾಗಿರಬೇಕು. ನೆರಳಿನ ವ್ಯವಸ್ಥೆ, ವಾಹನಗಳ ಸಂಚಾರ, ಎಲ್.ಇ.ಡಿ ಗಳ ಅಳವಡಿಕೆ ಮಾಡಬೇಕು. ಅಗತ್ಯವಿರುವ ವಾಹನಗಳನ್ನು ನಿಯೋಜನೆ ಮಾಡಬೇಕು. ಶಿಷ್ಟಾಚಾರ ಪಾಲನೆಯಾಗಬೇಕು. ಎಲ್ಲರಿಗೂ ಆಹ್ವಾನ ಪತ್ರಿಕೆಗಳನ್ನು ಖುದ್ದು ತಲುಪಿಸಬೇಕು ಎಂದು ತಿಳಿಸಿದರು.





### ಅಂಬೇಡ್ಕರ್ ಕ್ರೀಡಾಂಗಣಕ್ಕೆ ಭೇಟಿ

**ಸಭೆಯ ಬಳಿಕ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಶಾಸಕರು, ಗಣ್ಯರು, ಅಧಿಕಾರಿಗಳೊಂದಿಗೆ ಸಮಾರಂಭ ನಡೆಯಲಿರುವ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣಕ್ಕೆ ಭೇಟಿ ನೀಡಿ ಸಿದ್ದತೆಗಳನ್ನು ಪರಿಶೀಲಿಸಿದರು. ವೇದಿಕೆ, ಸಭಿಕರ ಆಸನಗಳು, ಗಣ್ಯರ ಆಗಮನದ ಮಾರ್ಗ ಇನ್ನಿತರ ವ್ಯವಸ್ಥೆಗಳನ್ನು ವ್ಯಾಪಕವಾಗಿ ವೀಕ್ಷಿಸಿ, ಅಗತ್ಯ ಸೂಚನೆಗಳನ್ನು ನೀಡಿದರು.**

### ಜವಾಬ್ದಾರಿ ನಿರ್ವಹಿಸಿ

**ಕಾರ್ಯಕ್ರಮದ ಆಯೋಜನೆಗಾಗಿ ರಚಿಸಲಾಗಿರುವ ವಿವಿಧ ಸಮಿತಿಗಳ ಅಧಿಕಾರಿಗಳು ತಮಗೆ ವಹಿಸಲಾಗಿರುವ ಜವಾಬ್ದಾರಿಯನ್ನು ಯಾವುದೇ ಲೋಪಗಳಿಗೆ ಅವಕಾಶವಾಗದಂತೆ ನಿರ್ವಹಿಸಬೇಕು. ಉದಾಸೀನ ಮಾಡದೇ ಸಮನ್ವಯದಿಂದ ಮುತುವರ್ಜಿ ವಹಿಸಿ ಎಲ್ಲ ವ್ಯವಸ್ಥೆಯನ್ನು ಸಮರ್ಪಕವಾಗಿ ಕೈಗೊಳ್ಳಬೇಕು. ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.**

### ಸಭೆಯಲ್ಲಿ ಗಣ್ಯರು ಭಾಗಿ

**ಎಂ.ಎಸ್.ಐ.ಎಲ್. ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಹೆಚ್.ಎಂ. ಗಣೇಶ್ ಪ್ರಸಾದ್, ಕಾಡಾ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್. ವಿ. ಚಂದ್ರು, ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ, ರಾಜ್ಯ ಸಹಕಾರ ಸಂಘಗಳ ನಿಬಂಧಕರಾದ ಟಿ.ಹೆಚ್.ಎಂ. ಕುಮಾರ್, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಚಾಮರಾಜನಗರ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಅಧ್ಯಕ್ಷರಾದ ಎಂ. ನಂಜುಂಡಸ್ವಾಮಿ, ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷರಾದ ಹೆಚ್.ಎಸ್. ನಂಜುಂಡಪ್ರಸಾದ್, ಚಾಮುಲ್ ನಿರ್ದೇಶಕರಾದ ಉದ್ದನೂರು ಪ್ರಸಾದ್, ಸದಾಶಿವಮೂರ್ತಿ, ಸಾಹುಲ್ ಅಹಮದ್, ನಾಗೇಂದ್ರ, ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ, ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಆಡಳಿತಾಧಿಕಾರಿ ಕೆ.ಎಂ ಆಶಾ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಆರ್.ಜಿ. ಕಾಂತರಾಜು, ಕಾರ್ಯಕ್ರಮದ ನೋಡಲ್ ಅಧಿಕಾರಿ ಹೆಚ್. ಬಾಲಶೇಖರ್, ಮೈಸೂರು ಪ್ರಾಂತದ ಸಹಕಾರ ಸಂಘಗಳ ಜಂಟಿ ನಿರ್ದೇಶಕರಾದ ಸಿ. ಪ್ರಸಾದ್ ರೆಡ್ಡಿ, ಸಹಕಾರ ಸಂಘಗಳ ಜಿಲ್ಲಾ ಉಪನಿಬಂಧಕರಾದ ಜೆ.ಸಿ. ಜ್ಯೋತಿ ಅರಸ್, ಚಾಮುಲ್ ವ್ಯವಸ್ಥಾಪಕ ನಿರ್ದೇಶಕರಾದ ಕೆ. ರಾಜ್ ಕುಮಾರ್, ಮೈಮುಲ್ ವ್ಯವಸ್ಥಾಪಕ ನಿರ್ದೇಶಕರಾದ ಸುರೇಶ್, ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.**

## ನ.20 ರಂದು ನಗರದಲ್ಲಿ ಸಹಕಾರ ಸಪ್ತಾಹ ಸಮಾರೋಪ ಸಮಾರಂಭ



ಚಾಮರಾಜನಗರ, 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ ಸಮಾರಂಭವನ್ನು ನ.20 ರಂದು ನಗರದ ಡಾ.ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಹೆಚ್. ಎಸ್.ನಂಜುಂಡಪ್ರಸಾದ್ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ ಸಹಕಾರ ಸಪ್ತಾಹ ಸಮಾರೋಪ ಸಮಾರಂಭ ಕುರಿತು ಮಾಹಿತಿ ನೀಡಿದರು. ಜವಹರ್‌ಲಾಲ್ ನೆಹರೂ ಅವರ ಜನ್ಮ ದಿನದ ಅಂಗವಾಗಿ ನ.14 ರಿಂದ 20ರವರೆಗೆ 7 ದಿನಗಳ ಕಾಲ ಸಹಕಾರ ಸಪ್ತಾಹ ಕಾರ್ಯಕ್ರಮ ನಡೆಯುತ್ತಿದ್ದು, ನ.20 ರಂದು ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮವನ್ನು ಚಾಮರಾಜ ನಗರಲ್ಲಿ ಆಯೋಜಿಸಿರುವುದು ಜಿಲ್ಲೆಗೆ ಹೆಮ್ಮೆ ಎಂದರು.

ನಗರದಲ್ಲಿ ಜಿಲ್ಲಾ ಸಹಕಾರ ಭವನ ಅಗತ್ಯವಿದ್ದು ಸಿಎಂ ಸಿದ್ದರಾಮಯ್ಯ ಅವರು ಜಿಲ್ಲಾ ಸಹಕಾರ ಭವನ ನಿರ್ಮಾಣಕ್ಕೆ ಅನುದಾನ ಹಾಗೂ ಚಾಮುಲ್ ಅನುದಾನ ಬಿಡುಗಡೆಗೆ ಮಾಡಿಕೊಡಬೇಕು ಎಂದು ಒತ್ತಾಯಿಸಿದರು. 2016ರಲ್ಲಿ ಸಚಿವರಾಗಿದ್ದ ಎಚ್.ಎಸ್. ಮಹದೇ ವಪ್ರಸಾದ್ ಅವರು ಗುಂಡ್ಲುಪೇಟೆಯಲ್ಲಿ ರಾಜ್ಯಮಟ್ಟದ ಸಹಕಾರ ಸಪ್ತಾಹ ಕಾರ್ಯಕ್ರಮ ನಡೆಸಿದ್ದರು. ಆ ನಂತರ ಯಾವುದೇ ಕಾರ್ಯಕ್ರಮ ನಡೆದಿರಲಿಲ್ಲ. ಚಾ.ನಗರದಲ್ಲಿ ಸಮಾರೋಪ ಸಮಾರಂಭ ನಡೆಯುತ್ತಿರುವುದು ಸಂತಸ ದಾಯಕವಾಗಿದೆ 25–30 ಸಾವಿರ ಜನರು ಸೇರುವ ನಿರೀಕ್ಷೆ ಇದೆ ಎಂದು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಚಾಮರಾಜನಗರ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಸಮಾಜಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಅಧ್ಯಕ್ಷ ಜಿ.ಟಿ.ದೇವೇಗೌಡ ಹಾಗೂ ಸಂಸದರು, ಮೈಸೂರು ಚಾಮರಾಜನಗರ ಜಿಲ್ಲೆಯ ಶಾಸಕರು ಹಾಗೂ ಹಲವಾರು ಗಣ್ಯಮಾನ್ಯರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಚಾಮುಲ್ ಅಧ್ಯಕ್ಷ ನಂಜುಂಡಸ್ವಾಮಿ ಮಾತನಾಡಿ, ಚಾಮುಲ್ ಗೆ ನೀಡಲಿಕ್ಕೆ ಬಾಕಿ ಇರುವ 52 ಕೋಟಿ ಅನುದಾನವನ್ನು ಸಿಎಂ ಸಿದ್ದರಾಮಯ್ಯ ಅವರು ಬಿಡುಗಡೆ ಮಾಡಬೇಕು. ಆ ಮೂಲಕ ರೈತರು ಹಾಗೂ ಹಾಲು ಉತ್ಪಾದಕರ ಹಿತ ಕಾಯಬೇಕು. ಇಲ್ಲದಿದ್ದರೆ ರೈತರು ಸಂಕಷ್ಟಕ್ಕೆ ಸಿಲುಕಿಕೊಳ್ಳುತ್ತಾರೆ ಎಂದು ಹೇಳಿದರು. 2015ರಲ್ಲಿ ಸಿಎಂ ಆಗಿದ್ದ ಸಿದ್ದರಾಮಯ್ಯ ಅವರು ಚಾಮುಲ್‌ಗೆ 83 ಕೋಟಿ ಅನುದಾನ ಘೋಷಣೆ ಮಾಡಿದ್ದು, ಇದರಲ್ಲಿ 31.12 ಕೋಟಿ ಮಾತ್ರ ನೀಡಿದ್ದಾರೆ. ಉಳಿದ 52 ಕೋಟಿಯನ್ನು ಕೊಡುವುದಾಗಿ ಭರವಸೆ ನೀಡಿದ್ದರು. ಆದರೆ, ಇಲ್ಲಿಯ ತನಕ ಆ ಅನುದಾನ ಬಂದಿಲ್ಲ ಈ ಕಾರ್ಯಕ್ರಮದಲ್ಲಿ ಬಾಕಿ ಉಳಿದ ಚಾಮುಲ್ ಅನುದಾನವನ್ನು ನೀಡುವುದಾಗಿ ಘೋಷಣೆ ಮಾಡಬೇಕು ಎಂದು ಒತ್ತಾಯಿಸಿದರು. ಪತ್ರಿಕಾಗೋಷ್ಠಿಯಲ್ಲಿ ಚಾಮುಲ್ ವ್ಯವಸ್ಥಾಪಕ ನಿರ್ದೇಶಕ ರಾಜಕುಮಾರ್, ಜಿಲ್ಲಾ ಸಹಕಾರ ಯೂನಿಯನ್‌ನ ಸಿಇಒ ಮಹದೇವಪ್ಪ, ಸಹಕಾರ ಇಲಾಖೆ ಜ್ಯೋತಿ ಅರಸ್ ಹಾಜರಿದ್ದರು.

## ವಿದ್ಯುತ್ ಶಾರ್ಟ್ ಸರ್ಕ್ಯೂಟ್ : ಹೊತ್ತಿ ಉರಿದ ಬೇಕರಿ

ಚಾಮರಾಜನಗರ, ನಗರದ ದೊಡ್ಡ ಅಂಗಡಿ ಬೀದಿಯ ಶ್ರೀ ವೆಂಕಟೇಶ್ವರ ಬೇಕರಿಯಲ್ಲಿ ಸೋಮವಾರ ರಾತ್ರಿ 11 ರ ಸಮಯದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಬೇಕರಿಯಲ್ಲಿದ್ದ ಬ್ರೆಡ್, ಬನ್, ಕೇಕ್, ಸಿಹಿ ಹಾಗೂ ಕಾರಾ ತಿನಿಸುಗಳು ಸೇರಿದಂತೆ ಪದಾರ್ಥಗಳು ಸುಟ್ಟು ಕರಕಲಾಗಿದೆ.

ಬೇಕರಿ ಮಾಲೀಕ ರಾತ್ರಿ ಅಂಗಡಿಗೆ ಬೀಗ ಹಾಕಿ ಹೋದ ಮೇಲೆ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದಾಗಿ ಬೆಂಕಿ ಸಹಿತ ದಟ್ಟಣೆಯ ಹೊಗೆ ಆವರಿಸಿಕೊಂಡಿದ್ದು, ತಿಂಡಿ ತಿನಿಸುಗಳು ಹಾಗೂ ಫರ್ನೀಚರ್ ಗಳು ಭಷ್ಮವಾಗಿವೆ. ಸುದ್ದಿ ತಿಳಿಯುತ್ತಿದ್ದಂತೆ ಅಗ್ನಿ ಶಾಮಕದಳದ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಬೆಂಕಿಯನ್ನು ನಂದಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ.

# ವಿದ್ಯಾವರ್ಧಕ ಕಾಲೇಜಿನಲ್ಲಿ ಟೆಕ್ನೋ ಆಯುರ್ವೇದ ವಿಚಾರ ಸಂಕಿರಣ



ಮೈಸೂರು: ಟೆಕ್ನೋ ಆಯುರ್ವೇದ ಮನುಕುಲದ ಆರೋಗ್ಯಕ್ಕೆ ರಹದಾರಿ ಎಂದು ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್.ವಿದ್ಯಾಶಂಕರ್ ಹೇಳಿದರು.

ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರವು ವಿದ್ಯಾವರ್ಧಕ ಎಂಜಿನಿಯರಿಂಗ್ ಕಾಲೇಜಿನಲ್ಲಿ 10ನೇ ಆಯುರ್ವೇದ ದಿನಾಚರಣೆ ಅಂಗವಾಗಿ ಮಂಗಳವಾರ ಏರ್ಪಡಿಸಿದ್ದ ಟೆಕ್ನೋ ಆಯುರ್ವೇದ ವಿಚಾರ ಸಂಕಿರಣದಲ್ಲಿ ಆನ್‌ಲೈನ್ ಮೂಲಕ ದಿಕ್ಸೂಚಿ ಭಾಷಣ ಮಾಡಿದ ಅವರು, ಐದು ಸಾವಿರ ವರ್ಷಗಳಷ್ಟು ಹಳೆಯದಾದ ಆಯುರ್ವೇದವು ಇಂದಿಗೂ ಕೂಡ ಪ್ರಸ್ತುತ ವೈದ್ಯಕೀಯ ವಿಜ್ಞಾನವಾಗಿದೆ ಎಂದರು.

ಇಂದಿನ ತಂತ್ರಜ್ಞಾನಗಳು ಯಾವುದೂ ಕೂಡ ಶಾಶ್ವತವಾಗಿ ಉಳಿದಿಲ್ಲ, ಆಯುರ್ವೇದವು ಶಾಶ್ವತವಾಗಿ ಉಳಿಯಲು ಕಾರಣವೇನೆಂದರೆ ಅದು ಪ್ರಕೃತಿಯೊಡನೆ ಅವಿನಾಭಾವ ಸಂಬಂಧವನ್ನು ಹೊಂದಿದೆ. ಆಯುರ್ವೇದ ಮತ್ತು ತಂತ್ರಜ್ಞಾನ ಒಂದು ನಾಣ್ಯದ ಮುಖವಿದ್ದಂತೆ, ದೇಶದ ಸರ್ವತೋಮುಖ ಅಭಿವೃದ್ಧಿಗೆ ಮತ್ತು ಸುಸ್ಥಿರ ಆರೋಗ್ಯದ ಪರಿಕಲ್ಪನೆಗೆ ತಂತ್ರಜ್ಞಾನವು ಆಯುರ್ವೇದದೊಂದಿಗೆ ಸೇರಿಕೊಂಡರೆ, ಆರೋಗ್ಯ ಕ್ಷೇತ್ರದಲ್ಲಿ ಕ್ರಾಂತಿ ಉಂಟಾಗುತ್ತದೆ ಎಂದು ಈ ಕ್ರಾಂತಿಗೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯವು ಎಲ್ಲಾ ತಾಂತ್ರಿಕ ಸಹಾಯವನ್ನು ನೀಡಲು ಸಿದ್ಧ ಎಂದರು.

ಆಯುಷ್ 4 ಯು ಕನ್ನಡ ಆವೃತ್ತಿಯನ್ನು ಬಿಡುಗಡೆಗೊಳಿಸಿದ ಕುವೆಂಪು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ.ಕೆ. ಚಿದಾನಂದಗೌಡ ಮಾತನಾಡಿ. ಟೆಕ್ನೋ ಆಯುರ್ವೇದ ಕಾರ್ಯಗಾರವು ಒಂದು ಪರಂಪರೆಯನ್ನು ಸೃಷ್ಟಿಸುತ್ತದೆ ಮತ್ತು ಈ ಪರಂಪರೆಗೆ ಪುನರ್ ಜೀವವನ್ನು ನೀಡುವುದರ ಮೂಲಕ ಈ ಪರಂಪರೆಯನ್ನು ಸಮಾಜಕ್ಕೆ ಅರ್ಪಿಸುವ ಹಿರಿದಾಸೆಯನ್ನು ಈ ಕಾರ್ಯಗಾರ ಹೊಂದಿದೆ. ಕನ್ನಡ ರಾಜ್ಯೋತ್ಸವದ ಹಿನ್ನಲೆಯಲ್ಲಿ ಮೂಡಿಬಂದ ಲೇಖನಗಳು ಕನ್ನಡತನವನ್ನು ಸಮಾಜದಲ್ಲಿ ಹೆಚ್ಚಿಸಿರುವುದು ನಿಜಕ್ಕೂ ಶ್ಲಾಘನೀಯ ಎಂದರು. ಟೆಕ್ನೋ ಆಯುರ್ವೇದವು ಯುವಶಕ್ತಿಗೆ ಒಂದು ಪ್ರೇರಣೆ ಅವರ ಬುದ್ಧಿಮತ್ತೆಗೆ ಒಂದು ಸವಾಲು ಸಹ ಆಗಿದೆ ಎಂದು ಮಾರ್ಮಿಕವಾಗಿ ತಿಳಿಸುತ್ತಾ ಈ ಸಂಶೋದನೆಗಳು ಸಮಾಜಮುಖಿಯಾಗಿ ಪರಿವರ್ತನೆಯಾಗುವುದು ಒಂದು ಒಳ್ಳೆಯ ಅಂಶ ಎಂದು ಬಣ್ಣಿಸಿದರು. ಕಾರ್ಯಾಗಾರದಲ್ಲಿ ಭಾರತ ಸರ್ಕಾರದ ಆಯುಷ್ ಸಲಹೆಗಾರ ಡಾ.ರಘು, ಕೇಂದ್ರೀಯ ಆಯುಷ್ ಸಂಶೋಧನಾ ಕೇಂದ್ರದ ಉಪನಿರ್ದೇಶಕ ಡಾ.ಶ್ರೀಕಾಂತ್ ಹಾಗೂ ತೆಲಂಗಾಣದ ಆಯುಷ್ ನಿರ್ದೇಶಕ ಡಾ.ಶ್ರೀಕಾಂತ್ ಬಾಬು, ವಿದ್ಯಾವರ್ಧಕ ಕಾಲೇಜಿನ ಅಧ್ಯಕ್ಷ ಗುಂಡಪ್ಪ ಗೌಡ, ಗೌರವ ಕಾರ್ಯದರ್ಶಿ ಪಿ.ವಿಶ್ವನಾಥ್, ಕಾಲೇಜಿನ ಪ್ರಾಚಾರ್ಯ ಡಾ.ಬಿ.ಸದಾಶಿವೇಗೌಡ, ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಡಾ.ಲಕ್ಷ್ಮೀ ನಾರಾಯಣ ಶೆಣೈ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಶ್ರೀ ಛಾಯಾದೇವಿ ಬಿ.ಇಡಿ ಕಾಲೇಜಿನ ಪ್ರಾಂಶುಪಾಲ ಡಾ.ಅಂಥೋಣಿ ಪಾಲ್‌ರಾಜ್ ಭಾಗವಹಿಸಿದ್ದರು. ಕಾರ್ಯಾಗಾರದಲ್ಲಿ ಕರ್ನಾಟಕ ರಾಜ್ಯದ 10 ತಾಂತ್ರಿಕ ಕಾಲೇಜುಗಳ 150ಕ್ಕಿಂತ ಹೆಚ್ಚು ತಾಂತ್ರಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾರ್ಯಾಗಾರದಲ್ಲಿ ಆಯುರ್ವೇದ ವೈದ್ಯಕೀಯ ವಿಜ್ಞಾನಕ್ಕೆ ಬೇಕಾದ ಯಂತ್ರಗಳು, ಉಪಕರಣಗಳು, ರೋಬೋಟ್‌ಗಳು, ಕೃತಕ ಬುದ್ಧಿಮತ್ತೆಯ ತಂತ್ರಜ್ಞಾನಗಳ ಬಗ್ಗೆ ವಿಷಧವಾದ ಚರ್ಚೆಯು ನಡೆದಿರುವುದು ಅತ್ಯಂತ ಮಹತ್ವದ್ದಾಗಿದೆ.

## ನಾಳೆ ನಾಟಕಗಳ ಪ್ರದರ್ಶನ

ಮೈಸೂರು: ಪತ್ರಕರ್ತ, ಲೇಖಕ ಗಣೇಶ ಅಮೀನಗಡ ಅವರ 'ಬಂಗಾರದ ಮನುಷ್ಯ' ನಾಟಕದ ಕೃತಿ ಬಿಡುಗಡೆ ಹಾಗೂ ಅವರ ರಚನೆಯ 'ಕೌದಿ' ಏಕವ್ಯಕ್ತಿ ನಾಟಕದ 50ನೇ ಪ್ರದರ್ಶನವನ್ನು ನ. 20ರಂದು ಸಂಜೆ 6.30 ಗಂಟೆಗೆ ನಗರದ ಕಲಾಮಂದಿರ ಪಕ್ಕದ ಕಿರು ರಂಗಮಂದಿರದಲ್ಲಿ ಆಯೋಜಿಸಲಾಗಿದೆ ಎಂದು ಕದಂಬ ರಂಗ ವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ ತಿಳಿಸಿದರು.

ಕದಂಬ ರಂಗ ವೇದಿಕೆ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ಟಿ.ಕೆ.ರಾಮರಾವ್ ಅವರ ಕಾದಂಬರಿ ಆಧರಿಸಿ 'ಬಂಗಾರದ ಮನುಷ್ಯ' ನಾಟಕವಾಗಿ ಗಣೇಶ ಅಮೀನಗಡ ರಚಿಸಿದ್ದಾರೆ. ಇದನ್ನು ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಬಿಡುಗಡೆಗೊಳಿಸುವರು. ಕೃತಿಯನ್ನು ಲೇಖಕ ಡಾ.ಎನ್.ಎಂ.ಗಿರಿಜಾಪತಿ ಪರಿಚಯಿಸುವರು. ಮುಖ್ಯ ಅತಿಥಿಗಳಾಗಿ ಕನ್ನಡ ಪ್ರಭದ ಕಾರ್ಯನಿರ್ವಾಹಕ ಸಂಪಾದಕ ಅಂಶಿ ಪ್ರಸನ್ನಕುಮಾರ್ ಭಾಗವಹಿಸುವರು ಎಂದು ತಿಳಿಸಿದರು.

ಪುಸ್ತಕ ಬಿಡುಗಡೆ ನಂತರ ಕೌದಿ ನಾಟಕ ಪ್ರದರ್ಶನಗೊಳ್ಳಲಿದೆ. ಇದು ಈಗಾಗಲೇ ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕದಲ್ಲಿ ಯಶಸ್ವಿಯಾಗಿ ಪ್ರದರ್ಶನಗೊಂಡಿದೆ. ಮೈಸೂರಿನಲ್ಲಿ ಮೊದಲ ಬಾರಿ ಪ್ರದರ್ಶನಗೊಳ್ಳುತ್ತಿದೆ. ಒಂದು ಗಂಟೆ ಅವಧಿಯ ಈ ನಾಟಕವನ್ನು ಕಲಬುರಗಿಯ ಭಾಗ್ಯಶ್ರೀ ಪಾಳಾ ಪ್ರಸ್ತುತಪಡಿಸುವರು. ಇದರ ವಿನ್ಯಾಸ, ಸಂಗೀತ ಹಾಗೂ ನಿರ್ದೇಶನ ಜಗದೀಶ್ ಆರ್.ಜಾಣಿ ಅವರದು ಎಂದು ವಿವರಿಸಿದರು. ಲೇಖಕ ಗಣೇಶ ಅಮೀನಗಡ ಮಾತನಾಡಿ, ಚಳಿಗಾಲದಲ್ಲಿ ಬೆಚ್ಚಗಿಡುವ ಹಾಗೂ ಬೇಸಿಗೆಯಲ್ಲಿ ತಂಪಾಗಿಡುವ ಕೌದಿಯ ಮಹತ್ವದ ಜೊತೆಗೆ ಕೌದಿ ಹೊಲಿಯುವವರ ಸಂಕಟ, ಸಮಸ್ಯೆ ಹಾಗೂ ಸವಾಲುಗಳ ಅನಾವರಣದ ನಾಟಕವಿದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ರಂಗಕರ್ಮಿಗಳಾದ ಡಿ. ತಿಪ್ಪಣ್ಣ, ಅಶ್ವಥ್ ಕದಂಬ ಹಾಗೂ ಹಿರಿಯ ಲೇಖಕ ರಘುಪತಿ ತಾಮ್ಹನ್ ಕರ್ ಹಾಜರಿದ್ದರು.



## ವಾರ್ಷಿಕ ಕ್ರೀಡಾಕೂಟ



ಗುಂಡ್ಲುಪೇಟೆ: ಪಟ್ಟಣದಲ್ಲಿರುವ ಕ್ರೈಸ್ಟ್ ಸಿ ಎಂ ಐ ಪಬ್ಲಿಕ್ ಶಾಲೆಯಲ್ಲಿ "ವಾರ್ಷಿಕ ಕ್ರೀಡಾಕೂಟ"ವನ್ನು ಆಯೋಜಿಸಲಾಗಿತ್ತು.

ವಾರ್ಷಿಕ ಕ್ರೀಡಾಕೂಟದಲ್ಲಿ ಮುಖ್ಯ ಅತಿಥಿಗಳಾಗಿ ಗುಂಡ್ಲುಪೇಟೆ ಪಟ್ಟಣದ ಅಗ್ನಿ ಶಾಮಕ ಠಾಣೆಯ ಅಧಿಕಾರಿಗಳಾದ ಶ್ರೀ ಮಂಜಪ್ಪ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಬಾಲ್ಯದಿಂದಲೇ ಮಕ್ಕಳಿಗೆ ಕ್ರೀಡೆ ಅತ್ಯಾವಶ್ಯಕ ಮತ್ತು ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಸಹಕಾರಿಯಾಗಿದೆ ಎಂದರು. ಕ್ರೈಸ್ಟ್ ಶಾಲೆಯ 25 ವಿದ್ಯಾರ್ಥಿಗಳು ರಾಜ್ಯ ಮಟ್ಟದ ಕ್ರೀಡಾಕೂಟ ಮತ್ತು ಮೈಸೂರು ವಿಭಾಗದ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿದ ಕ್ರೀಡಾಪಟುಗಳಿಗೆ ಪ್ರಶಸ್ತಿ ಪ್ರದಾನ ಮಾಡಿದರು. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಭಾಗವಹಿಸಿರುವುದು ಹೆಮ್ಮೆಯ ವಿಷಯ ಎಂದರು. ಕಾರ್ಯಕ್ರಮದಲ್ಲಿ ಶಾಲೆಯ ಪ್ರಾಂಶುಪಾಲರಾದ ಫಾದರ್ ರಿಜೀಶ್ ಪುತಿಯಾಪರಂಬಿಲ್ ರವರು, ದೈಹಿಕ ಶಿಕ್ಷಣ ಶಿಕ್ಷಕರಾದ ದೊಡ್ಡಪ್ಪಾಜಿ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗ, ಪೋಷಕರು, ವಿದ್ಯಾರ್ಥಿಗಳು ಹಾಜರಿದ್ದರು.

## ಸಹಕಾರ ಸಪ್ತಾಹ ಸಮಾರೋಪ: ಪೂರ್ವಭಾವಿ ಸಭೆ

ಚಾಮರಾಜನಗರ, ಕರ್ನಾಟಕ ಹಾಲುಮಹಾಮಂಡಲ, ಸಹಕಾರ ಇಲಾಖೆ, ಮೈಸೂರು, ಮಂಡ್ಯ, ಹಾಸನ, ಕೊಡಗು, ಚಾಮರಾಜನಗರ ಜಿಲ್ಲಾ ಹಾಲು ಒಕ್ಕೂಟದ ವತಿಯಿಂದ ನ.20ರಂದು ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ ಸಮಾರಂಭ ನಡೆಯಲಿದ್ದು, ಅಂದು ಪಕ್ಷದ ವಿವಿಧ ಮುಂಚೂಣ ಘಟಕದ ಪದಾಧಿಕಾರಿಗಳು, ಕಾರ್ಯಕರ್ತರು ಹೆಚ್ಚಿನಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ಮನವಿ ಮಾಡಿದರು,.

ನ.20ರಂದು ನಗರದಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ ಸಮಾರಂಭ ಸಂಬಂಧ ನಗರದಲ್ಲಿ ಜಿಲ್ಲಾ ಕಾಂಗ್ರೆಸ್ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನ.20 ರಂದು ಬೆಳಗ್ಗೆ 10ಕ್ಕೆ ನಗರದ ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮ ಉದ್ಘಾಟಿಸುವರು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಹಕಾರ ಧ್ವಜಾರೋಹಣ ನೆರವೇರಿಸುವರು. ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಗೋ ಪೂಜೆ ಮಾಡುವರು. ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಅವರು ಸಹಕಾರ ಪಿತಾಮಹರ ಭಾವಚಿತ್ರಕ್ಕೆ ಪು?ಾ?ರ್ಪಣೆ ಮಾಡುವರು. ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಅಧ್ಯಕ್ಷ ಜಿ.ಟಿ.ದೇವೇಗೌಡ ಸೇರಿದಂತೆ ಜಿಲ್ಲೆಯ ಶಾಸಕರು,ಸಂಸದರು ವಿವಿಧ ಇಲಾಖೆ ಸಚಿವರು ಭಾಗವಹಿಸುವರು ಎಂದರು.



ಇದೇವೇಳೆ ಸಹಕಾರರತ್ನ ಪ್ರಶಸ್ತಿಪಡೆದಿರುವ ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ. ಮರಿಸ್ವಾಮಿ, ಚೂಡಾ ಅಧ್ಯಕ್ಷ ಮಹಮದ್ ಅಸ್ಗರ್ಮುನ್ನಾ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ,ಕೆ,ರವಿಕುಮಾರ್, ಪ್ರಧಾನ ಕಾರ್ಯದರ್ಶಿ ಆರ್,ಮಹದೇವ್, ಜಿಲ್ಲಾ ಕಾಂಗ್ರೆಸ್ ಮಹಿಳಾ ಅಧ್ಯಕ್ಷೆ ನಾಗರತ್ನಾ, ಬ್ಲಾಕ್ ಗ್ರಾಮಾಂತರ ಅಧ್ಯಕ್ಷ ಎ.ಎಸ್ ಗುರುಸ್ವಾಮಿ, ಎ.ಪಿ.ಎಂ.ಸಿ ಅಧ್ಯಕ್ಷ ಎಂ.ಬಿ ಗುರುಸ್ವಾಮಿ

# ನಗರದಲ್ಲಿ ಬಿಜೆಪಿ ಸಂಭ್ರಮಾಚರಣೆ



ಚಾಮರಾಜನಗರ, ಬಿಹಾರದ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ ಭರ್ಜರಿ ಗೆಲವು ಸಾಧಿಸಿದ ಹಿನ್ನೆಲೆ ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ಸಿಹಿ ಹಂಚಿ ಪಟಾಕಿ ಸಿಡಿಸುವ ಮೂಲಕ ಸಂಭ್ರಮಾಚರಣೆ ಮಾಡಲಾಯಿತು.

ನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಆವರಣದಲ್ಲಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಜಮಾಹಿಸಿ ಅಲ್ಲಿಂದ ಜೈಕಾರದ ವಿವಿಧ ಘೋಷಣೆಗಳನ್ನು ಕೂಗುತ್ತಾ ಶ್ರೀ ಭುವ ನೇಶ್ವರಿ ವೃತ್ತದಲ್ಲಿ ವಿಜಯೋತ್ಸವ ಆಚರಿಸಿದರು. ಇದೇ ವೇಳೆ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ.ವೃಷಬೇಂದ್ರಪ್ಪ ಮಾತನಾಡಿ, ಬಿಹಾರ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ ಭರ್ಜರಿ ಜಯವನ್ನು ಸಾಧಿಸಿರುವುದು ಭಾರತೀಯರಿಗೆ ಸಂದ ಜಯವಾಗಿದೆ. ಬಿಹಾರದ ಜನತೆ ಕಾಂಗ್ರೆಸ್ ನವರಿಗೆ ತಕ್ಕ ಉತ್ತರವನ್ನು ನೀಡಿದ್ದಾರೆ ಎಂದರು.

ಬಿಜೆಪಿ ಮುಖಂಡ ಎಂ.ರಾಮಚಂದ್ರ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರ ಅಭಿವೃದ್ಧಿಯಿಂದ ಬಿಹಾರದ ಜನತೆ ನರೇಂದ್ರ ಮೋದಿಯವರ ಅಧಿಕಾರವನ್ನು ಮೆಚ್ಚಿರುವುದು ಈ ಚುನಾವಣೆಯಿಂದ ಸಾಕ್ಷಿಯಾಗಿದೆ ಎಂದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ವೃಷಭೇಂದ್ರಪ್ಪ ಮೂಡ್ನಾಕೂಡು ಪ್ರಕಾಶ್, ನಗರ ಮಂಡಲ ಅಧ್ಯಕ್ಷ ಶಿವರಾಜ್, ಗ್ರಾಮಾಂತರ ಮಂಡಲ ಅಧ್ಯಕ್ಷ ಕಾಡಳ್ಳಿ ಕುಮಾರ್, ನೂರೊಂದು ಶೆಟ್ಟಿ, ಬಾಲ ಸುಬ್ರಹ್ಮಣ್ಯಂ, ವಿರಾಟ್ ಶಿವು,ಸೂರ್ಯ ಕುಮಾರ್, ಕಮಲಮ್ಮ, ಶೈಲಜಾ, ಶಿವಣ್ಣ, ಚಂದ್ರಶೇಖರ್, ಕೂಡಿಉಗನೆ ಮಂಜು, ಕೂಸಣ್ಣ, ಮಹೇಶ್, ನಗರಸಭಾ ಮಾಜಿ ಸದಸ್ಯರಾದ ಮನೋಜ್ ಪಟೇಲ್, ಚಂದ್ರಶೇಖರ್, ಆನಂದ್ ಭಗಿರಥ, ಗುರುಪ್ರಸಾದ್, ಮಂಜುನಾಥ್, ರಾಮಸಮುದ್ರ ಶಿವಣ್ಣ ಇತರರು ಹಾಜರಿದ್ದರು.

**ಕಡೇ ಸೋಮವಾರದ ಸಂಭ್ರಮ**

# ಮಾದಪ್ಪನ ಬೆಟ್ಟದಲ್ಲಿ ಮಹಾಜ್ಯೋತಿ ಸಡಗರ

ಚಾಮರಾಜನಗರ, ಪ್ರಸಿದ್ಧ ಯಾತ್ರಾ ಸ್ಥಳವಾದ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಕಾರ್ತಿಕ ಮಾಸದ ಕಡೇ ಸೋಮವಾರದ ಸಂಭ್ರಮ ಕಳೆಗಟ್ಟಿತ್ತು. ರಾಜ್ಯ ಮತ್ತು ಹೊರ ರಾಜ್ಯಗಳಿಂದಲೂ ಭಕ್ತಸಾಗರ ದರ್ಶನಕ್ಕೆ ಹರಿದು ಬಂದಿತ್ತು.



ಕಾರ್ತಿಕ ಮಾಸದ ಕಡೇ ಸೋಮವಾರದಂದು ಕ್ಷೇತ್ರದಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳು ನಡೆದವು. ಸಾಲೂರು ಬೃಹನ್ಮಠದ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ನೇತೃತ್ವದಲ್ಲಿ ಬೇಡಗಂಪಣ ಅರ್ಚಕರು ಮಲೆ ಮಹದೇಶ್ವರ ಸ್ವಾಮಿಗೆ ಬಿಲ್ವಪತ್ರೆ ಹಾಗೂ ರುದ್ರಾಭಿಷೇಕ ನೆರವೇರಿಸಿದರು.

ಹರಕೆ ಹೊತ್ತ ಭಕ್ತಾದಿಗಳು ಚಿನ್ನದ ತೇರು, ಬೆಳ್ಳಿ ತೇರು, ಹುಲಿವಾಹನ, ಬಸವ ವಾಹನ ಮತ್ತು ರುದ್ರಾಕ್ಷಿ ಮಂಟಪೋತ್ಸವ, ಮಲೆ ಮಹದೇಶ್ವರ ಸ್ವಾಮಿ ಉತ್ಸವ, ಮುಡಿಸೇವೆ, ಧೂಪದ ಸೇವೆ ಸಲ್ಲಿಸಿ ಮಾದಪ್ಪನಿಗೆ ಜೈಕಾರ ಕೂಗಿದರು. ಕಡೇ ಕಾರ್ತಿಕ ಸೋಮವಾರದ ಪ್ರಯುಕ್ತ ಶ್ರೀ ಕ್ಷೇತ್ರ ಮಲೆಮಹದೇಶ್ವರ ಬೆಟ್ಟದಲ್ಲಿ ಮಹಾಜ್ಯೋತಿ ಬೆಳಗಿಸಲಾಯಿತು. ಆನೆ ತಲೆ ದಿಂಬ ಹಾಗೂ ನಾಗಮಲೆ ನಡುವಿನ ನಡುಮಲೆಯ ದೀಪದ ಒಡ್ಡಿನಲ್ಲಿ 9 ಬಗೆಯ ಕಟ್ಟಿಗೆಗಳಿಂದ ಹೋಮ ಮಾಡಿ, ದೇಗುಲದಿಂದ ಉತ್ಸವ ಮೂರ್ತಿಯನ್ನು ದೀಪದ ಗಿರಿ ಒಡ್ಡುವಿಗೆ ತಂದು ಪೂಜೆ ಸಲ್ಲಿಸಿ ಮಹಾಜ್ಯೋತಿಯನ್ನು ಬೆಳಗಲಾಯಿತು.

### ವಿಜೃಂಬಣೆಯ ತೆಪ್ಪೋತ್ಸವ

ಮಹದೇಶ್ವರ ಸ್ವಾಮಿಯ ತೆಪ್ಪೋತ್ಸವ ವಿಜೃಂಭಣೆಯಿಂದ ನೆರವೇರಿತು. ಝಗಮಗಿಸುವ ಅಲಂಕಾರದಲ್ಲಿ ಮಹದೇಶ್ವರನ ತೆಪ್ಪೋತ್ಸವ ಕಣ್ತುಂಬಿಕೊಳ್ಳಲು ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ನೆರೆದಿದ್ದರು. ಪ್ರಾಧಿಕಾರದಿಂದ ಸಕಲ ವ್ಯವಸ್ಥೆಯನ್ನು ಮಾಡಲಾಗಿತ್ತು. ಭಕ್ತರಿಗೆ ಪ್ರಸಾದದ ವ್ಯವಸ್ಥೆ, ಕುಡಿಯುವ ನೀರು ಶೌಚಾಲಯ, ನೆರಳಿನ ವ್ಯವಸ್ಥೆ ಕಲ್ಪಿಸಲಾಗಿತ್ತು.

# ಎಸ್‌ಎಸ್‌ಎಲ್‌ಸಿ ಫಲಿತಾಂಶ ವೃದ್ಧಿಸಲು ಅಗತ್ಯ ಕ್ರಮ ಕೈಗೊಳ್ಳಿ: ಶಾಸಕ ಪಿ.ರವಿಕುಮಾರ್





**ಮಂಡ್ಯ:** ಮಂಡ್ಯ ತಾಲ್ಲೂಕು ವ್ಯಾಪ್ತಿಯ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳ ಫಲಿತಾಂಶ ವೃದ್ಧಿಸಲು ಅಗತ್ಯ ಕ್ರಮ ಕೈಗೊಳ್ಳಿ ಎಂದು ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ ರವಿಕುಮಾರ್ ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಲಾಗಿದ್ದ ಕೆ.ಡಿ.ಪಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಮಂಡ್ಯ ತಾಲ್ಲೂಕು ವ್ಯಾಪ್ತಿಯ ಕೆಲವು ಆಸ್ಪತ್ರೆಗಳಲ್ಲಿ ವೈದ್ಯರು ರಾತ್ರಿ ವೇಳೆಯಲ್ಲಿ ಇರುವುದಿಲ್ಲವೆಂದು ದೂರು ಕೇಳಿ ಬರುತ್ತಿವೆ ಎಲ್ಲಾ ಆಸ್ಪತ್ರೆಗಳಲ್ಲೂ ರಾತ್ರಿ ವೇಳೆಯಲ್ಲಿ ವೈದ್ಯರು ಇರಬೇಕು. ವೈದ್ಯರ ಲಭ್ಯತೆ ಇಲ್ಲದಿದ್ದರೆ ಪರ್ಯಾಯ ವ್ಯವಸ್ಥೆ ಕಲ್ಪಿಸಿ, ಅಗತ್ಯವಿರುವ ಆರೋಗ್ಯ ಕೇಂದ್ರಗಳಿಗೆ ವೈದ್ಯರನ್ನು ನೇಮಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಎಂದು ಹೇಳಿದರು.

ಎಲ್ಲಾ ಶಾಲೆಗಳಲ್ಲೂ ಮೂಲಭೂತ ಸೌಕರ್ಯ ಸಮರ್ಪಕವಾಗಿ ಇದೆಯೇ ಎಂದು ಖಚಿತಪಡಿಸಿಕೊಳ್ಳಿ. ದುರಸ್ಥಿಗೊಳ್ಳಬೇಕಾದ ಶಾಲೆಗಳ ಪಟ್ಟಿ ಸಿದ್ಧ ಪಡಿಸಿ ಮಾಹಿತಿ ನೀಡಿ ಎಂದು ತಿಳಿಸಿದರು. ಮಕ್ಕಳಿಗೆ ಶಾಲೆಗಳಲ್ಲಿ ಮಾನಸಿಕ ಒತ್ತಡ ನಿವಾರಣೆ ಮಾಡಲು ವಿವಿಧ ಕಾರ್ಯಕ್ರಮಗಳನ್ನು ರೂಪಿಸಿ, ಕೌನ್ಸೆಲಿಂಗ್ ಮಾಡಿಸಿ ಮಕ್ಕಳ ಕೌಶಲ್ಯ ಮತ್ತು ಶೈಕ್ಷಣಿಕ ವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳಿ ಎಂದರು.

ಭತ್ತ ರಾಗಿ ಖರೀದಿ ಕೇಂದ್ರದಲ್ಲಿ ನೋಂದಣಿ ಪ್ರಾರಂಭಿಸಲಾಗಿದೆ. ಶೀಘ್ರದಲ್ಲೇ ಖರೀದಿಯನ್ನು ಪ್ರಾರಂಭಿಸಲಾಗುವುದು. ಕೃಷಿ ಇಲಾಖೆಗೆ ಸೇರಿದ ಯೋಜನೆಗಳನ್ನು ರೈತರಿಗೆ ತಿಳಿಸಿ. ಗುಂಪು ಕರೆ, ಪೋಸ್ಟರ್, ರೈತ ಸಂಪರ್ಕ ಕೇಂದ್ರಗಳಲ್ಲಿ ಪ್ರಚಾರ ಮಾಡಿ. ಮಂಡ್ಯ ತಾಲ್ಲೂಕು ವ್ಯಾಪ್ತಿಯಲ್ಲಿ 15 ಜನರಿಗೆ ಹನಿ ನೀರಾವರಿ ಯೋಜನೆಯಡಿ ಅನುದಾನ ನೀಡಲಾಗಿದೆ. ಈರುಳ್ಳಿ ಶೇಖರಣಾ ಘಟಕ ನಿರ್ಮಾಣಕ್ಕೆ 11 ಜನರಿಗೆ ಅನುದಾನ ನೀಡಲಾಗಿದೆ. ಅಧಿಕಾರಿಗಳು ಸಾಮಾಜಿಕ ಜಾಲತಾಣಗಳನ್ನು ಬಳಸಿ ವಿವಿಧ ಯೋಜನೆಗಳ ಕುರಿತು ಅರಿವು ಮೂಡಿಸಬೇಕು ಎಂದು ಹೇಳಿದರು.

ಪಶುಗಳಿಗೆ ನೀಡಲಾಗುವ ಆಹಾರದಲ್ಲಿ ಕಲಬೆರಕೆ ಆಗುತ್ತಿರುವುದು ಗಮನಕ್ಕೆ ಬಂದಿದೆ. ಇದರಿಂದ ಜಾನುವಾರಗಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರಲಿದೆ. ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸಿ ಎಂದು ಹೇಳಿದರು.

ಮಂಡ್ಯ ತಾಲ್ಲೂಕು ವ್ಯಾಪ್ತಿಯಲ್ಲಿ ರೇಷ್ಮೆ ಕೃಷಿಗೆ ಬೇಡಿಕೆ ಹೆಚ್ಚಾಗಿದೆ. ಸದರಿ ವರ್ಷ ಮಂಡ್ಯ ತಾಲ್ಲೂಕು 68.37 ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆ ಕೃಷಿ ಮಾಡಲಾಗುತ್ತಿದೆ. ಮಂಡ್ಯ ಜಿಲ್ಲೆಯ ಬೆಲ್ಲ ವಿಶ್ವಕ್ಕೆ ಪ್ರಸಿದ್ಧ ಇತ್ತೀಚಿನ ದಿನಗಳಲ್ಲಿ ಬೆಲ್ಲದ ಗುಣಮಟ್ಟ ಕಳಪೆಯಾಗಿದೆ ಎಂಬ ದೂರು ಕೇಳಿ ಬರುತ್ತಿವೆ. ಆಹಾರ ಸಂರಕ್ಷಣಾಧಿಕಾರಿ ವಿಶೇಷ ತಂಡ ರಚಿಸಿ ಜಿಲ್ಲೆಯ ಆಲೆಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಎಂದು ಸೂಚಿಸಿದರು.

ಅನರ್ಹ ಬಿ.ಪಿ.ಎಲ್ ಕಾರ್ಡ್ ಬಳಕೆದಾರರ ಹೆಸರನ್ನು ಕೈ ಬಿಡಲು ಸೂಚಿಸಲಾಗಿದೆ. ಮೊದಲ ಹಂತದಲ್ಲಿ ಮಂಡ್ಯ ತಾಲೂಕಿನ 1667 ಬಿ.ಪಿ.ಎಲ್ ಕಾರ್ಡ್ ಬಳಕೆದಾರರನ್ನು ಅರ್ಹ ಪಟ್ಟಿಯಿಂದ ಕೈ ಬೀಡಲಾಗಿದೆ. ಅಧಿಕಾರಿಗಳು ಬಿ.ಪಿ.ಎಲ್ ಬಳಕೆದಾರರ ಪಟ್ಟಿಯನ್ನು ಕೈ ಬಿಡುವ ಮೊದಲು ಅವರ ಆರ್ಥಿಕ ಸ್ಥಿತಿಯನ್ನು ಅವಲೋಕಿಸಿ ರದ್ದು ಪಡಿಸಿ ಅರ್ಹರನ್ನು ಬಿ.ಪಿ.ಎಲ್ ಪಟ್ಟಿಯಿಂದ ಕೈ ಬಿಡಬೇಡಿ ಎಂದು ಹೇಳಿದರು.

ಮಂಡ್ಯ ತಾಲ್ಲೂಕು ವ್ಯಾಪ್ತಿಯಲ್ಲಿ ಪದವಿ 921 ಹಾಗೂ 25 ಡಿಪ್ಲೊಮಾ ಒಟ್ಟು 936 ನಿರುದ್ಯೋಗಿಗಳು ಯುವನಿಧಿ ಯೋಜನೆ ಪಡೆದುಕೊಳ್ಳುತ್ತಿದ್ದಾರೆ. ಯುವನಿಧಿಯ ಕುರಿತಾಗಿ ಎಲ್ಲಾ ಕಾಲೇಜುಗಳಲ್ಲಿ ಪ್ರಚಾರ ಕೈಗೊಳ್ಳಿ. ಎಲ್ಲಾ ಯುವನಿಧಿ ಫಲಾನುಭವಿಗಳನ್ನು ಒಗ್ಗೂಡಿಸಿ ಅವರಿಗೆ ವಿವಿಧ ಕಾರ್ಯಾಗಾರಗಳನ್ನು ರೂಪಿಸಿ. ಮಂಡ್ಯ ತಾಲ್ಲೂಕಿನಲ್ಲಿ 18 ಹಾಸ್ಟೆಲ್ ಗಳು ಕಾರ್ಯ ನಿರ್ವಹಿಸುತ್ತಿವೆ ಸದರಿ ಸುಮಾರು 1750 ವಿದ್ಯಾರ್ಥಿಗಳು ವಿದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. 2 ಬಾಲಕಿಯರ ಹಾಸ್ಟೆಲ್ ಕಾಮಗಾರಿ ನಡೆಯುತ್ತಿದೆ ಎಂದು ಹೇಳಿದರು.

ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ನೀಡಲಾಗುವ ಆಹಾರದ ಗುಣಮಟ್ಟದ ಕಳಪೆಯಾಗಿದೆ ಎಂದು ಪೋಷಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಂಬಂಧಪಟ್ಟ ಶೀಘ್ರವೇ ಪರಿಶೀಲಿಸಿ ನಾನು ಸಹ ಅಲ್ಲಿಗೆ ಬಂದು ಪರೀಕ್ಷೆ ಮಾಡುತ್ತೇನೆ. ಅಧಿಕಾರಿಗಳು ಹಾಸ್ಟೆಲ್ ಗಳಿಗೆ ತಿಂಗಳಿಗೆ 2 ರಿಂದ 3 ಬಾರಿ ಭೇಟಿ ನೀಡಿ ಪರಿಶೀಲನೆ ನಡೆಸಿ ಎಂದು ತಾಕೀತು ಮಾಡಿದರು.

ಬ್ಯಾಂಕ್ ಗಳು ರೈತರಿಗೆ ಸಾಲ ಮರುಪಾವತಿ ಮಾಡುವಂತೆ ಒತ್ತಾಯ ಮಾಡುತ್ತಿವೆ ಯಾವುದೇ ಬ್ಯಾಂಕ್ ಒತ್ತಾಯದಿಂದ ಸಾಲ ಮರುಪಾವತಿ ಮಾಡಿಸಿಕೊಂಡರೆ ಬ್ಯಾಂಕ್ ನ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮಂಡ್ಯ ತಾಲ್ಲೂಕು ವ್ಯಾಪ್ತಿಯಲ್ಲಿ ಚಿರತೆಯ ಉಪಟಳ ಹೆಚ್ಚಾಗಿದೆ ರೈತರು ಆತಂಕ ವ್ಯಕ್ತಪಡಿಸುತ್ತಿದ್ದಾರೆ ಅಗತ್ಯವಿರುವ ಕಡೆ ಬೋನು ಇಟ್ಟು ಚಿರತೆ ಹಿಡಿಯಿರಿ. ಇಲ್ಲವಾದಲ್ಲಿ ಜನ ಜಾನುವಾರುಗಳಿಗೆ ಹಾನಿ ಸಂಭವಿಸುತ್ತದೆ. ಅರಣ್ಯ ಇಲಾಖೆ ಎಚ್ಚೆತ್ತು ಕಾರ್ಯೋನ್ಮುಖರಾಗಿ ಎಂದು ತಿಳಿ ಹೇಳಿದರು.

ನ್ಯಾಷನಲ್ ಹೈವೇ ಬಳಿ ತಡರಾತ್ರಿಯಾದರೂ ಮದ್ಯ ಮಾರಾಟವನ್ನು ಕೆಲವರು ಮಾಡುತ್ತಿದ್ದಾರೆ. ಎಲ್ಲೆಲ್ಲಿ ಅಕ್ರಮ ಮದ್ಯ ಮಾರಾಟ ಮಾಡಲಾಗುತ್ತಿದೆಯೊ ಎಲ್ಲರ ಮೇಲೆ ಕ್ರಮ ಕೈಗೊಳ್ಳಬೇಕು. ತಡ ರಾತ್ರಿ ಮದ್ಯ ಮಾರಾಟ ಮಾಡುವವರ ಲೈಸೆನ್ಸ್ ಅನ್ನು ರದ್ದು ಗೊಳಿಸಿ ಎಂದು ಹೇಳಿದರು.

ಸಭೆಯಲ್ಲಿ ಪಶುಪಾಲನಾ ಇಲಾಖೆಯ ಉಪ ನಿರ್ದೇಶಕ ಹಾಗೂ ಮಂಡ್ಯ ತಾಲ್ಲೂಕು ಆಡಳಿತಾಧಿಕಾರಿ ಶಿವಲಿಂಗಯ್ಯ, ಮಂಡ್ಯ ತಹಶೀಲ್ದಾರ್ ವಿಶ್ವನಾಥ್, ಮಂಡ್ಯ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ರುದ್ರಪ್ಪ, ಡಿ.ವೈ.ಎಸ್ಪಿ ಲಕ್ಷ್ಮಿ ನಾರಾಯಣ್, ಮಂಡ್ಯ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಲೋಕೇಶ್ ಮೂರ್ತಿ, ಮಂಡ್ಯ ತಾಲ್ಲೂಕು ಯೋಜನಾಧಿಕಾರಿ ವೆಂಕಟರಾವ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಬೀದಿ ನಾಯಿಗಳ ಸ್ಥಳಾಂತರಕ್ಕೆ ಜಿಲ್ಲಾಧಿಕಾರಿ ಸೂಚನೆ

**ಮಡಿಕೇರಿ:** ದಿನದಿಂದ ದಿನಕ್ಕೆ ಬೀದಿ ನಾಯಿಗಳ ಹಾವಳಿ ಹೆಚ್ಚಾಗುತ್ತಿದ್ದು, ನಾಯಿ ಕಡಿತಕ್ಕೆ ತುತ್ತಾಗುವವರ ಸಂಖ್ಯೆ ಅಧಿಕವಾಗಿದೆ. ಆದ್ದರಿಂದ ಸುಪ್ರಿಂಕೋರ್ಟ್ ನಿರ್ದೇಶನದಂತೆ ಬೀದಿನಾಯಿಗಳ ಹಾವಳಿಯನ್ನು ನಿಯಂತ್ರಿಸಲು ಅಗತ್ಯ ಕ್ರಮ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರು ಸೂಚಿಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಅವರ ಕಚೇರಿ ಸಭಾಂಗಣದಲ್ಲಿ ಬೀದಿ ನಾಯಿ ಹಾವಳಿ ನಿಯಂತ್ರಣ ಬಗ್ಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅವರು ಮಾತನಾಡಿದರು.

ಬೀದಿನಾಯಿಗಳನ್ನು ಸ್ಥಳಾಂತರಿಸಲು ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿ (ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ) ಕನಿಷ್ಠ 1 ಎಕರೆ ಜಾಗ ಕಾಯ್ದಿರಿಸಿ ಸುತ್ತುಗೋಡೆ ನಿರ್ಮಿಸುವಂತೆ ನಿರ್ದೇಶನ ನೀಡಿದರು.

ನಗರಾಭಿವೃದ್ಧಿ, ಪಂಚಾಯತ್ ರಾಜ್, ಪಶುಪಾಲನೆ ಹಾಗೂ ಪಶು ವೈದ್ಯಕೀಯ, ಶಿಕ್ಷಣ, ಸಾರಿಗೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಯುವ ಸಬಲೀಕರಣ ಸೇರಿದಂತೆ ವಿವಿಧ ಇಲಾಖೆಗಳು ಬೀದಿನಾಯಿಗಳ ಹಾವಳಿ ನಿಯಂತ್ರಣ ಬಗ್ಗೆ ಸೂಕ್ತ ಕ್ರಮವಹಿಸಬೇಕು ಎಂದು ನಿರ್ದೇಶನ ನೀಡಿದರು.

ಸರ್ಕಾರಿ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ಬಸ್ ನಿಲ್ದಾಣ ಸೇರಿದಂತೆ ಎಲ್ಲೆಡೆ ಬೀದಿನಾಯಿಗಳ ಹಾವಳಿ ನಿಯಂತ್ರಿಸಬೇಕಿದೆ ಎಂದರು.

ಬೀದಿನಾಯಿಗಳನ್ನು ಸ್ಥಳಾಂತರಿಸಲು ಕ್ರಮವಹಿಸುವುದು, ಸೂಕ್ತ ರಕ್ಷಣೆ ಮಾಡುವಲ್ಲಿ ಮುನ್ನೆಚ್ಚರ ವಹಿಸುವುದು, ನೋಡಲ್ ಅಧಿಕಾರಿಗಳನ್ನು ನಿಯೋಜಿಸುವುದು, ಬೀದಿನಾಯಿಗಳ ಹಾವಳಿ ನಿಯಂತ್ರಣ ಮಾಡುವಲ್ಲಿ ಆಗಾಗ ಪರಿಶೀಲಿಸುವುದು. ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ 'ರೇಬಿಸ್ ನಿರೋಧಕ ಲಸಿಕೆ ಮತ್ತು ರೇಬೀಸ್ ಇಮ್ಯುನೊಗ್ಲೋಬ್ಯುಲಿನ್' ಚುಚ್ಚುಮದ್ದಿನ ದಾಸ್ತಾನು ಮಾಡಿಕೊಳ್ಳುವುದು, ನಾಯಿ ಕಡಿತಕ್ಕೆ ಒಳಗಾದವರಿಗೆ ಸಕಾಲದಲ್ಲಿ ಚಿಕಿತ್ಸೆ ನೀಡುವುದು ಸೇರಿದಂತೆ ಹಲವು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಅವರು ಹೇಳಿದರು.

ನಾಯಿ ಅಥವಾ ಇತರೆ ಯಾವುದೇ ಪ್ರಾಣಿಯ ಕಡಿತದ ಪ್ರಕರಣಗಳು ವರದಿಯಾದಾಗ ಸಂಬಂಧಪಟ್ಟ ಸ್ಥಳೀಯ ಸಂಸ್ಥೆ ಅಧಿಕಾರಿಗಳಿಗೆ ತಿಳಿಸಬೇಕು. ಸರ್ಕಾರಿ ಅಥವಾ ಖಾಸಗಿ ಆಸ್ಪತ್ರೆಗಳು ತುರ್ತು ವೈದ್ಯಕೀಯ ಸೇವೆಗಳು ಮತ್ತು ಪ್ರಥಮ ಚಿಕಿತ್ಸೆಯನ್ನು ಕಾಲಮಿತಿಯಲ್ಲಿ ಒದಗಿಸುವಂತಾಗಬೇಕು ಎಂದು ಜಿಲ್ಲಾಧಿಕಾರಿ ಅವರು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಗರಸಭೆ ಪೌರಾಯುಕ್ತರಾದ ಎಚ್.ಆರ್.ರಮೇಶ್ ಅವರು ಬೀದಿ ನಾಯಿ ಸ್ಥಳಾಂತರಕ್ಕೆ ನಗರದ ಹೊರವಲಯದ ಸ್ಟೀವರ್ಟ್ ಹಿಲ್ ಬಳಿ ನಗರಸಭೆಯ ಒಂದೂವರೆ ಎಕರೆ ಜಾಗ ಕಾಯ್ದಿರಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸೋಮವಾರಪೇಟೆ, ಕುಶಾಲನಗರ, ಪೊನ್ನಂಪೇಟೆ, ಗೋಣಿಕೊಪ್ಪ ವ್ಯಾಪ್ತಿಗಳಲ್ಲಿ ಜಾಗ ಕಾಯ್ದಿರಿಸಲು ಜಿಲ್ಲಾಧಿಕಾರಿ ಅವರು ಸೂಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸತೀಶ್ ಕುಮಾರ್ 2024 ರ ಕ್ಯಾಲೆಂಡರ್ ವರ್ಷದಲ್ಲಿ ಜಿಲ್ಲೆಯಲ್ಲಿ 4,872 ಮಂದಿ ನಾಯಿ ಕಡಿತಕ್ಕೆ ಒಳಗಾಗಿದ್ದಾರೆ. ಹಾಗೆಯೇ 2025 ರ ಜನವರಿಯಿಂದ ಅಕ್ಟೋಬರ್ ಅಂತ್ಯದವರೆಗೆ 4,217 ಮಂದಿ ನಾಯಿ ಕಡಿತಕ್ಕೆ ಒಳಗಾಗಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ಪಶುಪಾಲನೆ ಇಲಾಖೆ ಉಪ ನಿರ್ದೇಶಕರಾದ ಡಾ.ಲಿಂಗರಾಜು ದೊಡ್ಡಮನಿ ಅವರು ಬೀದಿನಾಯಿಗಳ ಹಾವಳಿ ನಿಯಂತ್ರಣ ಸಂಬಂಧ ಸ್ಥಳೀಯ ಸಂಸ್ಥೆಗಳ ಜೊತೆ ಕೈಜೋಡಿಸಿ, ಅಗತ್ಯ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ, ಉಪ ಪೊಲೀಸ್ ವರಿಷ್ಠಾಧಿಕಾರಿ ಬಾರಿಕೆ ದಿನೇಶ್ ಕುಮಾರ್, ಉಪ ವಿಭಾಗಾಧಿಕಾರಿ ನಿತಿನ್ ಚಕ್ಕಿ, ನಗರಾಭಿವೃದ್ಧಿ ಯೋಜನಾ ಶಾಖೆಯ ಯೋಜನಾ ನಿರ್ದೇಶಕರಾದ ಬಿ.ಬಸಪ್ಪ, ಭೂ ದಾಖಲೆಗಳ ಉಪ ನಿರ್ದೇಶಕರಾದ ನಿರಂಜನ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಚಿದಾನಂದ ಕುಮಾರ್, ಶಾಲಾ ಶಿಕ್ಷಣ ಇಲಾಖೆಯ ಶಿಕ್ಷಣಾಧಿಕಾರಿ ಸೌಮ್ಯ ಪೊನ್ನಪ್ಪ, ಪುರಸಭೆ ಮುಖ್ಯಾಧಿಕಾರಿಗಳಾದ ಕೃಷ್ಣಪ್ರಸಾದ್, ಗಿರೀಶ್, ನಾಚಪ್ಪ, ಗೋಪಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಶ್ರೀನಿವಾಸ್, ಇತರರು ಇದ್ದರು.



# 'ಸೇವಾ ಮನೋಭಾವನೆಯಿಂದ ಕೆಲಸ ಮಾಡಿದರೆ ಸಹಕಾರ ಸಂಘಗಳನ್ನು ಉಳಿಸಿ ಬೆಳೆಸಬಹುದು'



ಕೆ.ಆರ್.ನಗರ: ಸೇವಾ ಮನೋಭಾವನೆಯಿಂದ ಕೆಲಸ ಮಾಡಿದರೆ ನಾವು ಸಹಕಾರ ಸಂಘಗಳನ್ನು ಉಳಿಸಿ ಬೆಳಸಬಹುದು ಎಂದು ಗ್ರಾಮೀಣ ನಿಧಿ ಸೌಹಾರ್ದ ಕೋ ಆಪರೇಟಿವ್ ಸೊಸೈಟಿ ಲಿಮಿಟೆಡ್‌ನ ಅಧ್ಯಕ್ಷ ಕೆ.ಆರ್.ಶ್ಯಾಮಸುಂದರ್ ಸಲಹೆ ನೀಡಿದರು.

ಪಟ್ಟಣದ ಗ್ರಾಮೀಣ ನಿಧಿ ಸೌಹಾರ್ದ ಕೋ–ಆಪರೇಟಿವ್ ಸೊಸೈಟಿ ಲಿಮಿಟೆಡ್ ನ ಕಚೇರಿಯಲ್ಲಿ ಸಂಸ್ಥೆಯ ನೂತನ ವೃತ್ತಿಪರ ನಿರ್ದೇಶಕಿಯಾಗಿ ಆಯ್ಕೆಯಾದ ಅಶ್ವಿನಿ ಸ್ಪಿನ್‌ಕೃಷ್ಣ ಅವರಿಗೆ ಆಯ್ಕೆ ಪ್ರಮಾಣ ಪತ್ರ ನೀಡಿ ಸನ್ಮಾನಿಸಿ ಮಾತನಾಡಿದ ಅವರು ಸಹಕಾರ ಸಂಘಗಳಲ್ಲಿ ಕೆಲಸ ಮಾಡುವವರು ಸೇವಾ ದೃಷ್ಟಿಯನ್ನು ಇಟ್ಟುಕೊಂಡು ಸೇವೆ ಸಲ್ಲಿಸಬೇಕು. ಈ ಸಹಕಾರ ಸಂಘಗಳಲ್ಲಿ ನಾವು ಲಾಭಗಳನ್ನು ಗಳಿಸುವ ಮನೋಭಾವನೆಯನ್ನು ಬಿಡಬೇಕು ಆಗ ಮಾತ್ರ ಸಹಕಾರ ಸಂಸ್ಥೆಗಳು ಬೆಳೆಯಲು ಸಹಕಾರಿಯಾಗುತ್ತವೆ ಎಂದು ಕಿವಿಮಾತು ಹೇಳಿದರು

ನಂತರ ಮಾತನಾಡಿದ ಅವರು ಸಹಕಾರ ಸಂಸ್ಥೆಯಲ್ಲಿನ ಕಾರ್ಯ ಚಟುವಟಿಕೆಗಳು ಹಾಗೂ ವ್ಯವಹಾರಗಳನ್ನು ಆಡಳಿತ ಮಂಡಳಿಯ ಎಲ್ಲಾ ಸದಸ್ಯರುಗಳು ಅರಿಯಬೇಕು ಜೊತೆಗೆ ಸಂಸ್ಥೆಯ ಏಳಿಗೆಗೆ ಸದಾ ಶ್ರಮಿಸಬೇಕು. ಆ ಮೂಲಕ ಜನ ಸಾಮಾನ್ಯರ ವಿಶ್ವಾಸವನ್ನು ಸಂಸ್ಥೆಯು ಗಳಿಸುವಂತೆ ಮಾಡಬೇಕೆಂದರು. ನಮ್ಮ ಸಂಸ್ಥೆಯಲ್ಲಿ ಆರ್.ಡಿ ಮತ್ತು ಎಫ್.ಡಿಗಳಿಗೆ ಆಕರ್ಷಕ ಬಡ್ಡಿ ದರವನ್ನು ನೀಡುತ್ತಿದ್ದು ಇದರ ಪ್ರಯೋಜನವನ್ನು ತಮ್ಮ ತಮ್ಮ ಷೇರುದಾರರಿಗೆ ಮಾಹಿತಿ ನೀಡಬೇಕೆಂದು ನಿರ್ದೇಶಕರಿಗೆ ತಿಳಿಸಿದರು. ಇದೇ ಸಂದರ್ಭದಲ್ಲಿ ಗ್ರಾಮೀಣ ನಿಧಿ ಸೌಹಾರ್ದ ಕೋ ಆಪರೇಟಿವ್ ಸೊಸೈಟಿ ಲಿಮಿಟೆಡ್ ನ ವತಿಯಿಂದ ವೃಕ್ಷ ಮಾತೆ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾದ ಹಾಗೂ ಇತ್ತೀಚೆಗೆ ನಿಧನರಾದ ಸಾಲುಮರದ ತಿಮ್ಮಕ್ಕನವರಿಗೆ ಒಂದು ನಿಮಿಷ ಮೌನ ಆಚರಿಸಿ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ನಿರ್ದೇಶಕರುಗಳಾದ ನರಸಿಂಹ ಎಂ.ಎಸ್, ಶಶಿಕುಮಾರ್, ನೇತ್ರಾವತಿ ಸುರೇಶ್, ವಕೀಲರಾದ ಸ್ಪಿನ್‌ಕೃಷ್ಣ, ಸುರೇಶ್,ಸಿಇಒ ಸಿಂಧೂ ಮಂಜುನಾಥ್, ಸಿಬ್ಬಂದಿ ಮಮತಾ, ಪ್ರತಿಜ್ಞಾ, ಮಯೂರ್ ಸೇರಿದಂತೆ ಇನ್ನಿತರರು ಹಾಜರಿದ್ದರು.

# 'ಚಲನಚಿತ್ರಗಳ ಸಂಭಾಷಣೆಯಲ್ಲಿ ಸಾಹಿತ್ಯದ ಸ್ಪರ್ಶ ಮೂಡಿಸುವ ಮೂಲಕ ಹೊಸ ಅಧ್ಯಾಯವನ್ನು ಬಿ.ಎಲ್.ವೇಣು ಸೃಷ್ಟಿಸಿದರು'

ಚಿತ್ರದುರ್ಗ: ಜನಪ್ರಿಯ ಕತೆಗಳಿಗೆ ಚಲನಚಿತ್ರಗಳ ಸಂಭಾಷಣೆಯಲ್ಲಿ ಸಾಹಿತ್ಯದ ಸ್ಪರ್ಶ ಮೂಡಿಸುವ ಮೂಲಕ ಹೊಸ ಅಧ್ಯಾಯವನ್ನು ಬಿ.ಎಲ್. ವೇಣು ಸೃಷ್ಟಿಸಿದರು ಎಂದು ಚಿಂತಕ ಹಾಗೂ ಸಾಹಿತಿ ಡಾ.ಬಂಜಗೆರೆ ಜಯಪ್ರಕಾಶ್ ಅಭಿಪ್ರಾಯಪಟ್ಟರು.

ಕೆಂಧೂಳಿ ವಾರಪತ್ರಿಕೆ ಬಳಗದಿಂದ ಕೊಡಮಾಡುವ 'ಕೆಂಧೂಳಿ ರಾಜ್ಯೋತ್ಸವ' ಪ್ರಶಸ್ತಿಯನ್ನು ಬಿ.ಎಲ್ ವೇಣು ಅವರಿಗೆ ಪ್ರದಾನ ಮಾಡಿ ಅವರು ಮಾತನಾಡಿದರು, ಬಿ.ಎಲ್ ವೇಣು ಅವರು ಜನಪ್ರಿಯ ಕತೆ,ಕಾದಂಬರಿಕಾರರು ಸಹಜವಾಗಿಯೇ ಚಲನಚಿತ್ರಗಳ ಸಂಭಾಷಣೆಯ ಅವಕಾಶ ಬಂದಾಗ ಅದಕ್ಕೊಂದು ಸಾಹಿತ್ಯದ ಸ್ಪರ್ಶನೀಡಿ ಹೊಸ ಅರ್ಥ ಸೃಷ್ಟಿಸಿದರು ಎಂದು ಅವರು ಹೇಳಿದರು.

ಸಮಾಜದ ದೊಡ್ಡ ಸಮಸ್ಯೆಯಾಗಿದ್ದ ಬೆತ್ತಲೆ ಸೇವೆಯಂತ ಸಾಮಾಜಿಕ ಸಮಸ್ಯೆಯ ಕುರಿತು ಬರೆದ ಕಾದಂಬರಿ ಲಕ್ಷಾಂತರ ಜನರಿಗೆ ಅದರ ಅರಿವು ಮೂಡಿಸುವ ಮೂಲಕ ಅನಿಷ್ಟ ಪದ್ಧತಿಯನ್ನು ಹೋಗಲಾಡಿಲಸು ಕಾರಣವಾಯಿತು ಅಲ್ಲದೆ ಅದು ಚಲನಚಿತ್ರವಾಗುವ ಮೂಲಕ ಮತ್ತಷ್ಟು ಜನರಿಗೆ ಅರಿವು ಮೂಡಿಸಿದ ಕೆಲಸ ಮಾಡಿಸಿತು ಎಂದು ಅಭಿಪ್ರಾಯಪಟ್ಟರು.

ಚಿತ್ರದುರ್ಗ ಇತಿಹಾಸವನ್ನು ಬರೆದ ವೇಣು



ಅವರು ಅಪವಾದವಾಗಿದ್ದ ಹಿದು ಮುಸ್ಲಿಂ ನ ದ್ವೇಷಭಾವನೆಯನ್ನು ಅವರು ಕಲ್ಲರಳಿ ಹೂವಾಗಿ ಕಾದಂಬರಿ ಮೂಲಕ ಹಿಂದು ಮುಸ್ಲಿಂ ಸಾಮರಸ್ಯ ಹೇಗಿತ್ತು ಎನ್ನುವ ಅರಿವನ್ನು ಮೂಡಿಸಲು ಅವರು ಕಾರಣಕರ್ತರಾಗಿದ್ದಾರೆ ಅಲ್ಲದೆ ಅದು ಕೂಡ ಚಿತ್ರವಾಗಿ ದೊಡ್ಡ ಯಶಸ್ಸನ್ನು ಪಡೆದಿದೆ ಎಂದರೆ ಅದು ಅವರ ಜನಪ್ರಿಯತೆಗೆ ಸಾಕ್ಷಿಯಾಗಿದೆ ಎಂದು ಅವರು ಹೇಳಿದರು.

ವೇಣು ಅವರ ಗಟ್ಟಿ ನಿಲುವು ಅವರ ಜನಪ್ರಿಯತೆಗೆ ಸಾಕ್ಷಿಯಾಗಿದೆ,

ಜನಪ್ರಿಯ ಹಾಗೂ ಜನಪರ ಸಾಹಿತಿಯಾಗಿ ಸೃಜನಶೀಲತೆಯನ್ನು ಮೈಗೂಡಿಸಕೊಳ್ಳಲು ಸಾಧ್ಯವಾಗುತ್ತಿರಲಿಲ್ಲ ಹಾಗಾಗಿಯೇ ಜನಪರ ನಿಲುವು ಹೊಂದಿದ ಸಾಹಿತಿ ಜನಪ್ರಿಯಯತೆ ಪಡೆಯುವುದು ಸುಲಭವಲ್ಲ,ನಂಬಿದ ನಿಲುವು,ಜನಪರ ಕಾಳಜಿಯನ್ನು ಅವರು ಜನಪ್ರಿಯ ಕಾದಂಬರಿಯಲ್ಲಿ ಮೂಡಿಸಿರುವ ರೀತಿ ಮಾದರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಸಾಹಿತ್ಯ ಅಕಾಡಮಿಯಲ್ಲಿ ಜನಪ್ರಿಯ ಸಾಹಿತಿಗಳಿಗೆ ಜೀವಮಾನದ ಪ್ರಶಸ್ತಿ ನೀಡಲು ಹಿಂದೆ ಸರಿದ ಸಂದರ್ಭದಲ್ಲಿ ನಾನು ಅಕಾಡಮಿಯಲ್ಲಿದ್ದಾಗ ಅವರ ಒಟ್ಟು ಸಾಹಿತ್ಯಕ್ಕೆ ಜೀವಮಾನ ಪ್ರಶಸ್ತಿ ಕೊಡಿಸುವ ಮೂಲಕ ಜನಪ್ರಿಯ ಸಾಹಿತಿಯೊಬ್ಬರಿಗೆ ಮೊದಲಬಾರಿಗೆ ಪ್ರಶಸ್ತಿದೊರತ ಶ್ರೇಯಸ್ಸು ಅವರದ್ದು ಎಂದು ಘಟನೆಯೊಂದನ್ನು ನೆನಪಿಸಿಕೊಂಡರು.

ವೇಣು ಅವರಿಗೆ ಬಹುತೇಕ ಎಲ್ಲಾ ಪ್ರಶಸ್ತಿಗಳು ಬಂದಿವೆ, ಕೆಂಧೂಳಿ ಪ್ರಶಸ್ತಿ ಅವರಿಗೇನು ದೊಡ್ಡದಲ್ಲ ಆದರೆ ಕೆಂಧೂಳಿ ಮೌಲ್ಯ ಹೆಚ್ಚಿಸಲು ಈ ಪ್ರಶಸ್ತಿ ಪ್ರಮುಖವಾಗಿದೆ ಎಂದು ಹೇಳಿದರು.

ಕೆಂಧೂಳಿ ರಾಜ್ಯೋತ್ಸವ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಡಾ.ಬಿ.ಎಲ್.ವೇಣು ಅವರು ಪ್ರಶಸ್ತಿಗಳೆಲ್ಲವೂ

ಒಂದೇ ಯಾವುದೊಡ್ಡವು ಅಲ್ಲ ಯಾವುದು ಸಣ್ಣದು ಅಲ್ಲ ಅದಕ್ಕೊಂದು ಗೌರವವಿದೆ ಪ್ರಶಸ್ತಿ ಸ್ವೀಕರಿಸುವವರಿಗೆ ಜವಾಬ್ದಾರಿಯೂ ಹೆಚ್ಚಾಗುತ್ತದೆ ಎಂದ ಅವರು ನನಗೆ ಬಹುತೇಕ ಎಲ್ಲಾ ಪ್ರಶಸ್ತಿಗಳು ಬಂದಿವೆ ಆದರೆ ಕೇಂದ್ರ ಆಕಾಡೆಮಿ ಪ್ರಶಸ್ತಿ ಮಾತ್ರ ಬಂದಿಲ್ಲ ಎಂದು ಹಾಸ್ಯಚಟಾಕೆ ಹಾರಿಸಿದರು.

ನನಗೆ ಗೊತ್ತಿರುವುದು ಬರವಣಿಗೆ ನಾನು ಇರುವವರೆಗೂ ಬರೆಯುತ್ತೇನೆ ಬರಹವೇ ನನ್ನ ಉಸಿರು ಹಾಗಾಗಿಯೇ ಉಸಿರಿರುವವರೆಗೂ ನಾನು ಬರೆಯುತ್ತಲೇ ಇರುತ್ತೇನೆ ಎಂದ ಅವರು. ಕೆಂಧೂಳಿ ಪತ್ರಿಕೆ ನನ್ನ ಮೇಲಿನ ಗೌರವಕ್ಕೆ ಈ ಪ್ರಶಸ್ತಿಯನ್ನು ನೀಡಿದೆ, ಪತ್ರಿಕೆ ಮತ್ತಷ್ಟು ಬೆಳೆಯಲಿ ಎಂದು ಹಾರೈಸಿದರು.

ಸಮಾರಂಭದಲ್ಲಿ ಹಿರಿಯ ಪತ್ರಕರ್ತ ಚಳ್ಳಕೆರೆ ಯರ್‍ರಿಸ್ವಾಮಿ, ಕೆಂಧೂಳಿ ಪತ್ರಿಕೆ ಸಂಪಾದಕ ತುರುವನೂರು ಮಂಜುನಾಥ, ಪತ್ರಕರ್ತ ಎಚ್.ಲಕ್ಷ್ಮಣ್, ಹರೀಶ್ ಬೇದ್ರೆ ಇದ್ದರು.

# ನಶಾ ಮುಕ್ತ ಭಾರತಕ್ಕೆ ಕೈ ಜೋಡಿಸಿ: ಎಂ. ಆನಂದ್

**ಮಂಡ್ಯ:** ಯುವ ಜನತೆ ಭಾರತ ದೇಶದ ಆಸ್ತಿಯಾಗಿದ್ದು ಡ್ರಗ್ಸ್ ಮತ್ತು ಗಾಂಜಾದ ದುಶ್ಚಟಕ್ಕೆ ಯುವ ಜನತೆ ಒಳಗಾಗದೆ ಭಾರತ ದೇಶವನ್ನು ನಶಾ ಮುಕ್ತ ದೇಶವನ್ನಾಗಿಸಲು ಕೈ ಜೋಡಿಸಿ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ. ಆನಂದ್ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿ ಮಂಗಳವಾರ ನಶಾಮುಕ್ತ ಭಾರತ ಅಭಿಯಾನ ಯೋಜನೆಯ 5ನೇ ವಾರ್ಷಿಕೋತ್ಸವದ ಪ್ರಯುಕ್ತ ಆಯೋಜಿಸಲಾಗಿದ್ದ ಜಾಥಾ ಹಾಗೂ ತಂಬಾಕು ಮುಕ್ತ ಯುವ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಶಾ ಮುಕ್ತ ಭಾರತದ ವಾರ್ಷಿಕೋತ್ಸವ ಆಚರಣೆಗಿಂತಲೂ ದೇಶವನ್ನು ನಶಾ ಮುಕ್ತಗೊಳಿಸುವಲ್ಲಿ ಸಮಾಜದ ಪಾತ್ರ ಬಹಳ ಮುಖ್ಯವಾಗುತ್ತದೆ. ದೇಶವನ್ನು ನಶಾ ಮುಕ್ತಗೊಳಿಸುವಲ್ಲಿ ಯುವ ಜನತೆ





ಸಂಕಲ್ಪ ಮಾಡುವ ಮೂಲಕ ನಶಾ ಮುಕ್ತ ಭಾರತ ವಾರ್ಷಿಕೋತ್ಸವದ ಆಚರಣೆಯನ್ನು ಯಶಸ್ವಿಗೊಳಿಸಿ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅವರು ಮಾತನಾಡಿ ದೇಶದದಲ್ಲಿ ಸಾಮಾಜಿಕ ಪಿಡುಗಾಗಿ ಕಾಡುತ್ತಿರುವ ಗಾಂಜಾ ಮತ್ತು ಡ್ರಗ್ಸ್ ಸೇವನೆಯಿಂದ ವಿದ್ಯಾರ್ಥಿಗಳು ಯುವಕರು, ಕಾರ್ಮಿಕರು ಹೀಗೆ ಅನೇಕ ವರ್ಗದವರನ್ನು ಹೊರತರುವಲ್ಲಿ ಸಮಾಜ ಪಣತೊಡಬೇಕಿದೆ ಎಂದರು. ಇತ್ತೀಚಿನ ದಿನಗಳಲ್ಲಿ ಗಾಂಜಾ ಎನ್ನುವಂತಹದ್ದು ಹಳ್ಳಿ –ಹಳ್ಳಿಗಳಲ್ಲಿ ಹರಡಿದೆ. ಪ್ರತಿಯೊಬ್ಬರಿಗೂ ದುಶ್ಚಟಗಳ ದುಷ್ಪರಿಣಾಮದ ಅರಿವು ಮತ್ತು ಜಾಗೃತಿ ಬಹಳ ಮುಖ್ಯವಾಗಿದ್ದು, ದುಶ್ಚಟಕ್ಕೆ ಒಳಗಾದವರು ಯಾವ ರೀತಿಯಲ್ಲಿ ತಮ್ಮ ಜೀವನ ಮತ್ತು ಭವಿಷ್ಯವನ್ನು ಹಾಳುಮಾಡಿಕೊಳ್ಳುತ್ತಿದ್ದಾರೆ ಎನ್ನುವುದರ ಬಗ್ಗೆ ಅರಿವು ಮೂಡಿಸಲು ಅಭಿಯಾನ ಆಯೋಜಿಸಲಾಗಿದೆ ಎಂದು ಹೇಳಿದರು.

ಪ್ರಮುಖವಾಗಿ ಯುವಕರು ದುಶ್ಚಟದ ಪಿಡುಗಿನಿಂದ ಹೊರಬರಬೇಕು. ಪ್ರತಿ ಇಲಾಖೆಗಳು ನಶಾ ಮುಕ್ತ ಜಿಲ್ಲೆಯನ್ನಾಗಿಸಲು ಕೈ ಜೋಡಿಸಬೇಕು. ಮುಖ್ಯವಾಗಿ ಹಳ್ಳಿ–ಹಳ್ಳಿಗಳಲ್ಲಿ ಗಾಂಜಾ ಸರಬರಾಜು ಮಾಡುವವರ ವಿರುದ್ಧ ಕಾನೂನು ಕ್ರಮವನ್ನು ಕೈಗೊಳ್ಳುವಲ್ಲಿ ಪೊಲೀಸ್ ಇಲಾಖೆ ಜವಾಬ್ದಾರಿಯುತವಾಗಿ ಕೆಲಸ ನಿರ್ವಹಿಸುತ್ತಿದೆ. ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾರ್ವಜನಿಕರು ಇಲಾಖೆಯೊಂದಿಗೆ ಕೈ ಜೋಡಿಸಿ ಎಂದರು.

ಇದೇ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಆಶಾ, ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಹಾಗೂ ವಿಶೇಷ ಚೇತನರ ಕಲ್ಯಾಣ ಅಧಿಕಾರಿ ಕೋಮಲ್ ಕುಮಾರ್ ಹಾಗೂ ತಂಬಾಕು ನಿಯಂತ್ರಣ ಅಧಿಕಾರಿ ತಿಮ್ಮರಾಜು ಸೇರಿದಂತೆ ಇನ್ನಿತರರು ಹಾಜರಿದ್ದರು.

# ಬೆಂಗಳೂರು: ರಾಮೇಶ್ವರಂ ಕೆಫೆಯಲ್ಲಿ ದೋಸೆ ಸವಿದ ಅಖಿಲೇಶ್ ಯಾದವ್

**ಬೆಂಗಳೂರು:** ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ, ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್ ಅವರು ಬೆಂಗಳೂರಿಗೆ ಭೇಟಿ ನೀಡಿದ್ದು, ಈ ವೇಳೆ ಬೆಂಗಳೂರಿನ ಪ್ರಸಿದ್ಧ ಕೆಫೆಯೊಂದರಲ್ಲಿ ಉಪಾಹಾರ ಸೇವನೆ ಮಾಡಿದ್ದಾರೆ.

ನಗರದ ಜನಪ್ರಿಯ ರೆಸ್ಟೋರೆಂಟ್ ರಾಮೇಶ್ವರಂ ಕೆಫೆಗೆ ಭೇಟಿ ನೀಡಿರುವ ಅಖಿಲೇಶ್ ಯಾದವ್ ಅವರು ದೋಸೆ ಸೇವನೆ ಮಾಡಿದ್ದು, ದೋಸೆಯ ರುಚಿಗೆ ಮಾರು ಹೋಗಿದ್ದಾರೆ. ಬೆಂಗಳೂರಿನಲ್ಲಿರುವ ಸಂಬಂಧಿಯೊಬ್ಬರ ಮನೆಗೆ ಬಂದಿದ್ದ ವೇಳೆ ಅಖಿಲೇಶ್ ಯಾದವ್ ರಾಮೇಶ್ವರಂ ಕೆಫೆಗೆ ಭೇಟಿ ನೀಡಿದ್ದಾರೆ.

ಈ ಕುರಿತಾದ ಫೋಟೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಅಖಿಲೇಶ್ ಅವರು



ಹಂಚಿಕೊಂಡಿದ್ದು, ಕರ್ನಾಟಕದ ನೆನಪು, ಹಳೆಯ ಬಂಧ, ಧನ್ಯವಾದಗಳು ಬೆಂಗಳೂರು! ಎಂದು ಒಕ್ಕಣೆಯಲ್ಲಿ ಬರೆದುಕೊಂಡಿದ್ದಾರೆ. ಈ ಫೋಟೋಗಳು ಇದೀಗ ವೈರಲ್ ಆಗಿದೆ.

ಈ ನಡುವೆ ಬೆಂಗಳೂರಿಗೆ ಭೇಟಿ ನೀಡಿರುವ ಅಖಿಲೇಶ್ ಅವರು, ಸದಾಶಿವನಗರದಲ್ಲಿರುವ ಗೃಹ ಸಚಿವ ಜಿ ಪರಮೇಶ್ವರ್? ಅವರ ನಿವಾಸಕ್ಕೂ ಭೇಟಿ ನೀಡಿದ್ದಾರೆ. ಈ ವೇಳೆ ಅಖಿಲೇಶ್ ಅವರನ್ನು ಆತ್ಮೀಯವಾಗಿ ಬರಮಾಡಿಕೊಂಡ ಪರಮೇಶ್ವರ್ ಅವರು, ವಿವಿಧ ವಿಚಾರಗಳ ಕುರಿತು ಚರ್ಚಿಸಿದ್ದಾರೆ. ಈ ಕುರಿತಾದ ಫೋಟೋವನ್ನು ಪರಮೇಶ್ವರ್? ಅವರು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ, ಸಮಾಜವಾದಿ ಪಕ್ಷದ ಅಧ್ಯಕ್ಷರು ಹಾಗೂ ಸಂಸದರಾದ ಅಖಿಲೇಶ್ ಯಾದವ್ ಅವರು ಬೆಂಗಳೂರಿನ ಸದಾಶಿವನಗರದಲ್ಲಿರುವ ನನ್ನ ನಿವಾಸಕ್ಕೆ ಇಂದು ಸಂಜೆ ಸೌಜನ್ಯಯುತ ಭೇಟಿ ನೀಡಿದರು.

# ವಿದ್ಯಾರ್ಥಿಗಳಿಗೆ 3 ದಿನದ ತರಬೇತಿ ಕಾರ್ಯಾಗಾರ: ಎಡಿಸಿ ಶಿವಾನಂದ ಮೂರ್ತಿ



ಮಂಡ್ಯ: ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಕರ್ನಾಟಕ ರಾಜ್ಯ ಶಾಖೆ ಮತ್ತು ಮಂಡ್ಯ ಜಿಲ್ಲಾ ಶಾಖೆಯು ಮೈಸೂರು ವಿಭಾಗ ಮಟ್ಟದ 8 ಜಿಲ್ಲೆ ಮತ್ತು 10 ವಿಶ್ವವಿದ್ಯಾನಿಲಯಗಳ ವ್ಯಾಪ್ತಿಗೆ ಒಳಪಡುವ ಯುವ ರೆಡ್ ಕ್ರಾಸ್ ಘಟಕದ 150 ವಿದ್ಯಾರ್ಥಿಗಳಿಗೆ ನವೆಂಬರ್ 24 ರಿಂದ 26 ವರೆಗೆ 3 ದಿವಸದ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ. ಸಿ ಶಿವಾನಂದಮೂರ್ತಿ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ನೆಡೆದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತಾಡನಾಡಿದರು.

ಮೈಸೂರು ವಿಭಾಗ ಮಟ್ಟದ ಮೈಸೂರು, ಮಂಡ್ಯ, ಹಾಸನ, ಕೊಡಗು, ಚಾಮರಾಜನಗರ, ಚಿಕ್ಕಮಂಗಳೂರು, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳಿಂದ 17 ವಿದ್ಯಾರ್ಥಿಗಳಂತೆ 136 ವಿದ್ಯಾರ್ಥಿಗಳು ಹಾಗೂ 14 ಕಾರ್ಯಕ್ರಮಾಧಿಕಾರಿಗಳು ಸೇರಿ ಒಟ್ಟು 150 ಮಂದಿ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಲಿದ್ದಾರೆ ಎಂದರು.

ತರಬೇತಿಗಾಗಿ ಆಗಮಿಸುವ ವಿದ್ಯಾರ್ಥಿಗಳಿಗಾಗಿ ಜಿಲ್ಲಾ ತರಬೇತಿ ಕೇಂದ್ರ, ಎಸ್. ಬಿ ಸಮುದಾಯ ಭವನ, ಬಿಜಿಎಸ್ ಸಮುದಾಯದ ಭವನ, ಕನಕ ಸಮುದಾಯ ಭವನ, ಮಾಂಡವ್ಯ ಬಾಲಕರ ವಿದ್ಯಾರ್ಥಿ ನಿಲಯ ಹಾಗೂ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು. ವಸತಿ ಇರುವ ಸ್ಥಳದಿಂದ ಕಾರ್ಯಾಗಾರ ನಡೆಯುವ ಸ್ಥಳಕ್ಕೆ ವಿದ್ಯಾರ್ಥಿಗಳನ್ನು ಕರೆದುಕೊಂಡು ಹೋಗಲು ಸಾರಿಗೆ ವ್ಯವಸ್ಥೆ ಮಾಡಲಾಗುವುದು ಎಂದು ಹೇಳಿದರು.

ನವೆಂಬರ್ 24 ರಿಂದ 26 ರವರೆಗಿನ ತರಬೇತಿ ಕಾರ್ಯಾಗಾರವನ್ನು ಎಸ್. ಬಿ ಸಮುದಾಯ ಭವನದಲ್ಲಿ ಆಯೋಜಿಸಲಾಗಿದ್ದು, ಉದ್ಘಾಟನಾ ಸಮಾರಂಭ ಕಾರ್ಯಕ್ರಮವನ್ನು ನವೆಂಬರ್ 25 ರಂದು ಡಾ. ಬಿ. ಆರ್ ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಮೂರು ದಿವಸದ ಕಾರ್ಯಾಗಾರದಲ್ಲಿ ಒಟ್ಟು 11 ವಿಷಯಗಳನ್ನು ಕುರಿತು 5 ಸಂಪನ್ಮೂಲ ವ್ಯಕ್ತಿಗಳ ಮೂಲಕ ವಿಚಾರ ಘೋಷ್ಠಿ ನಡೆಸಲಾಗುವುದು. ತರಬೇತಿಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಬೆಳಿಗ್ಗೆ ತಿಂಡಿ, ಮಧ್ಯಾಹ್ನ ಮತ್ತು ರಾತ್ರಿಯ ಊಟದ ವ್ಯವಸ್ಥೆ ಮಾಡಲಾಗಿದ್ದು,

ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವ ಅತಿಥಿ ಗಣ್ಯರಿಗೆ ಮತ್ತು ಪ್ರೇಕ್ಷಕರಿಗೆ ಊಟದ ವ್ಯವಸ್ಥೆ ಮಾಡಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಮೂಡ ಆಯುಕ್ತರಾದ ಡಾ.ಕೃಷ್ಣಕುಮಾರ್, ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಭಾಧ್ಯಕ್ಷೆ ಮೀರಾ ಶಿವಲಿಂಗಯ್ಯ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸಿ. ಚಲುವಯ್ಯ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಲೋಕೇಶ್ ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಪ್ರತೀಕ್ ಹೆಗ್ಡೆ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

